ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 13 ಸಂಚಿಕೆ : 20
30–6–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 20

## ಭದ್ರಾ ಜಲಾಶಯ ನೀರಿನ ಮಟ್ಟ



(ಅಡಿಗಳಲ್ಲಿ)

| | |
|---|---|
| ಗರಿಷ್ಟ ಮಟ್ಟ- | 186 |
| ಇಂದಿನ ಮಟ್ಟ- | 162 |
| ಕಳೆದ ವರ್ಷ- | 124 |
| ಒಳ ಹರಿವು- (ಕ್ಯೂಸೆಕ್) | 10193 |

## ಹೃದಯಾಘಾತದಿಂದ ಯುವತಿ ಗೌರಿ ಮೃತ



**ದಾವಣಗೆರೆ:** ರಾಜ್ಯದಲ್ಲಿ ಯುವಜನತೆಯ ಮೇಲೆಯೇ ಯಮನ ವಕ್ರದೃಷ್ಟಿ ಬೀಳುತ್ತಿದ್ದು, ಮಧ್ಯಕರ್ನಾಟಕ ಬೆಣ್ಣೆನಗರಿಯಲ್ಲಿಯೂ ಯುವಕರಿಗೆ ಪ್ರಾಣ ಭೀತಿ ಶುರವಾಗಿದೆ.

ಇಲ್ಲಿನ ಎಸ್.ಎಸ್. ಹೈಟೆಕ್ ರಸ್ತೆಯ ಸಾಯಿ ಬಾಬ ದೇವಸ್ಥಾನ ಸಮೀಪದ ತಿಪ್ಪೇಸ್ವಾಮಿ ಹಾಗೂ ಆಶಾ ಎಂಬುವರ ಪುತ್ರಿ ಗೌರಿ (19) ಹಧಯಾಘಾತದಿಂದ ಶನಿವಾರ ಮೃತರಾಗಿದ್ದಾರೆ.

ನಗರದ ಚಾಣಕ್ಯ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತಿಯ ಪಿಯುಸಿ ಮುಗಿಸಿ ಎಂಜಿನಿಯರಿಂಗ್ ಸೇರಲು ಸಿಇಟಿ ಕೌನ್ಸಿಲಿಂಗ್ ಗಾಗಿ ಕಾಯಿತ್ತಿದ್ದಳು.ಬೆಳಗ್ಗೆ ಅಂಗಡಿಯಿಂದ ಹಾಲು ತಂದ ಗೌರಿ ಎಂಟು ಗಂಟೆ ಸುಮಾರಿಗೆ ತಾಯಿ ತಿಂಡಿ ಮಾಡಲು ತರಕಾರಿ ಎಚ್ಚಿ ಕೊಡುತ್ತಿದ್ದಳು. ಆಗ ತಲೆ ಸುತ್ತು ಕಾಣಿಸಿಕೊಂಡು ದೀಡಿರ್ ಕುಸಿದು ಪ್ರಾಣ ಬಿಟ್ಟಿದ್ದಾಳೆ.

ಈ ಘಟನೆಯಿಂದ ದಾವಣಗೆರೆ ಯುವ ಜನರಲ್ಲಿ ಭೀತಿ ಶುರವಾಗಿದೆ.

### ಅಂಗನವಾಡಿ ಹುದ್ದೆಗಳ ನೇಮಕಾತಿ

## ನೇಮಕಾತಿಯಲ್ಲಿ ಪಾರದರ್ಶಕತೆ ಅನುಸರಣೆ

### ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸ್ಪಷ್ಟನೆ



**ದಾವಣಗೆರೆ:** ದಾವಣಗೆರೆ ಜಿಲ್ಲೆಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗಳಿಗೆ ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಅತ್ಯಂತ ಪಾರದರ್ಶಕವಾಗಿ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗೌಗಾಧರಸ್ವಾಮಿ ಸ್ಪಷ್ಟನೆ ನೀಡಿದ್ದಾರೆ.

ನೇಮಕಾತಿ ಪ್ರಕ್ರಿಯೆ ನಿಯಮಾವಳಿ ಮತ್ತು ಆದ್ಯತೆ ಅನುಸಾರವಾಗಿ ಮೆರಿಟ್ ಅನ್ವಯ ನಡೆಯಲಿದೆ.

ನೇಮಕಾತಿ ಪ್ರಕ್ರಿಯೆ ಸರ್ಕಾರದ ನಿಯಮಗಳ ಪ್ರಕಾರವೇ ನಡೆಯಲಿದೆ. ಆದರೆ ಮಧ್ಯವರ್ತಿಗಳಿಂದಲೇ ನಡೆಯುತ್ತಿದೆ ಮತ್ತು ಹಣದ ಆಮಿಷಗಳಿಂದಲೇ ನೇಮಕಾತಿ ನಡೆಯುತ್ತದೆ ಎನ್ನುವುದು ಸುಳ್ಳು ಮತ್ತು ನಿಯಮಬಾಹಿರ. ಆದ್ದರಿಂದ ಯಾವುದೇ ಮಧ್ಯವರ್ತಿಗಳ ಆಮಿಷಗಳಿಗೆ ಬಲಿಯಾಗಬಾರದು. ಯಾರಾದರೂ ನೇಮಕ ಮಾಡಿಸುತ್ತೇನೆ ಎಂದು ಹಣಕ್ಕಾಗಿ ಆಮಿಷವೂಡ್ಡಿದಲ್ಲಿ ನೇರವಾಗಿ ಜಿಲ್ಲಾಧಿಕಾರಿ ಅವರ ಕಚೇರಿಗೆ ಮಾಹಿತಿ ನೀಡಲು ಡಿಸಿ ಜಿ.ಎಂ.ಗಂಗಾಧರ ಸ್ವಾಮಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ

### ಕಾಂಗ್ರೆಸ್‌ನಲ್ಲಿ ಅಸಮಾಧಾನ, ಸಂಪುಟ ಪುನಾರಚನೆ ವದಂತಿ

## ಇಂದು ಪಕ್ಷದ ಶಾಸಕರೊಂದಿಗೆ ಸುರ್ಜೇವಾಲಾ ಮಾತುಕತೆ

ಬೆಂಗಳೂರು: ಆಡಳಿತಾರೂಢ ಕಾಂಗ್ರೆಸ್ ನಲ್ಲಿ ಅಸಮಾಧಾನ ಸ್ಫೋಟ ಗೊಳ್ಳುತ್ತಿರುವಂತೆಯೇ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೇವಾಲಾ ನಾಳೆ ಪಕ್ಷದ ಶಾಸಕರೊಂದಿಗೆ ಪ್ರತ್ಯೇಕವಾಗಿ ಸಭೆ ನಡೆಸಲಿದ್ದಾರೆ. ಸರ್ಕಾರದ ಕಾರ್ಯವೈಖರಿ ವಿರುದ್ಧ ಇತ್ತೀಚಿಗೆ ಅನೇಕ ಶಾಸಕರು ಬಹಿರಂಗವಾಗಿ ಹೇಳಿಕೆ ನೀಡಿದ ಬೆನ್ನಲ್ಲೇ ನಡೆಯುತ್ತಿರುವ ಈ ಸಭೆ ಮಹತ್ವ ಪಡೆದುಕೊಂಡಿದೆ.

ಸೆಪ್ಟೆಂಬರ್ ನಂತರ ರಾಜಕೀಯ ಕ್ರಾಂತಿ: ಸೆಪ್ಟೆಂಬರ್ ನಂತರ ರಾಜ್ಯದಲ್ಲಿ ರಾಜಕೀಯ ಕ್ರಾಂತಿ ನಡೆಯಲಿದೆ ಎಂಬ ಸಹಕಾರ ಸಚಿವ ಕೆ.ಎನ್. ರಾಜಣ್ಣ ಇತ್ತೀಚಿಗೆ ನೀಡಿದ ಹೇಳಿಕೆ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಸೇರಿದಂತೆ ನಾನಾ ಚರ್ಚೆಗಳಿಗೆ ಕಾರಣವಾಗಿರುವಂತೇ ಸಭೆ ನಡೆಯುತ್ತಿದೆ.

ಸಂಪುಟ ಪುನಾರಚಣೆ ಒತ್ತಡ:

ಸಂಭಾವ್ಯ ಸಂಪುಟ ಪುನಾರಚನೆ ಹಾಗೂ ರಾಜ್ಯ ಕಾಂಗ್ರೆಸ್ ಅಧ್ಯಕ್ಷರ ಬದಲಾವಣೆ ಕುರಿತು ಪಕ್ಷದೊಳಗೆ ಮಾತುಕತೆ ನಡೆಯುತ್ತಿವೆ. ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ನಲ್ಲಿ ಸಂಪುಟ ಪುನಾರಚನೆಗೆ ಒತ್ತಡ ಹೆಚ್ಚಾಗುತ್ತಿದೆ.

ಸಂಭಾವ್ಯ ಸಂಪುಟ ಪುನಾರಚನೆ ಹಾಗೂ ರಾಜ್ಯ ಕಾಂಗ್ರೆಸ್ ಅಧ್ಯಕ್ಷರ ಬದಲಾವಣೆ ಕುರಿತು ಪಕ್ಷದೊಳಗೆ ಮಾತುಕತೆ ನಡೆಯುತ್ತಿವೆ. ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ನಲ್ಲಿ ಸಂಪುಟ ಪುನಾರಚನೆಗೆ ಒತ್ತಡ ಹೆಚ್ಚಾಗುತ್ತಿದೆ.

## ಜು.1 ರಿಂದ ಮಕ್ಕಳಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ

**ದಾವಣಗೆರೆ:** ಸುಶ್ರುತ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಮಕ್ಕಳ ವಿಭಾಗದಿಂದ ಜು.1 ರಿಂದ 5 ರವರೆಗೆ ಬೆಳಿಗ್ಗೆ 9–30 ರಿಂದ ಸಂಜೆ 4–30 ರವರೆಗೆ ಮಕ್ಕಳಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ನಗರದ ಶ್ರೀರಾಮನಗರ ಹತ್ತಿರದ ಶ್ರೀದೇವಿ ರೈಸ್ಮಿಲ್ ಹಿಂಭಾಗದಲ್ಲಿರುವ ಆಸ್ಪತ್ರೆಯಲ್ಲಿ ಮಕ್ಕಳ ಕುಂಠಿತ ಬೆಳವಣಿಗೆ, ಶೀತ, ಕೆಮ್ಮು, ಜ್ವರ, ಅಸ್ತಮ, ಅಲರ್ಜಿ, ಹಾಸಿಗೆಯಲ್ಲಿ ಮೂತ್ರ ಮಾಡಿಕೊಳ್ಳುವುದು, ಹಠ ಹಿಡಿಯುವುದು. ನೆನಪಿನ ಶಕ್ತಿ ಕುಂದಿರುವುದು, ಮಲಬದ್ಧತೆ, ಚರ್ಮದ ಸಮಸ್ಯೆಗಳು, ಕೂದಲು ಉದುರುವುದು ಇತ್ಯಾದಿ ಸಮಸ್ಯೆಗಳಿಗೆ ಉಚಿತ ತಪಾಸಣಾ ಮತ್ತು ಸಲಹೆಯನ್ನು ಆಯುರ್ವೇದ ಮಕ್ಕಳ ತಜ್ಞರಿಂದ ನೀಡಲಾಗುವುದು. ಹೆಸರು ನೋಂದಾಯಿಸಲು ಮೊ: 740380466, 0819–2272020 ಸಂಪರ್ಕಿಸಲು ತಿಳಿಸಲಾಗಿದೆ.

### ಬೆಂಗಳೂರಿನಲ್ಲಿ ಭಯಾನಕ ಕೊಲೆ:

## ಮಹಿಳೆಯ ಕೊಂದು ಕಸದ ಲಾರಿಗೆ ಹಾಕಿದ ದುಷ್ಕರ್ಮಿಗಳು

**ಬೆಂಗಳೂರು:** ಬೆಂಗಳೂರಿನಲ್ಲಿ ಮತ್ತೊಂದು ಭೀಕರ ಕೊಲೆ ಪ್ರಕರಣ ಬಯಲಿಗೆ ಬಂದಿದ್ದು, ಮಹಿಳೆಯನ್ನು ಕೊಂದು ಹಾಕಿರುವ ದುಷ್ಕರ್ಮಿಗಳು ಶವವನ್ನು ಮೂಟೆಕಟ್ಟಿ ಕಸದ ಲಾರಿಗೆ ಹಾಕಿದ್ದಾರೆ ಎಂದು ತಿಳಿದುಬಂದಿದೆ.

ಬೆಂಗಳೂರಿನ ಚನ್ನಮ್ಮನಕೆರೆ ಠಾಣಾ ವ್ಯಾಪ್ತಿಯ ಸ್ಕೇಟಿಂಗ್ ಗ್ರೌಂಡ್ ಬಳಿ ಈ ಘಟನೆ ನಡೆದಿದ್ದು, ಮಹಿಳೆಯ ಮೇಲೆ ಅತ್ಯಾಚಾರವೆಸಗಿ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ನಿನ್ನೆ ತಡರಾತ್ರಿ ಆಟೋದಲ್ಲಿ ಮಹಿಳೆ ಶವ ತಂದಿದ್ದ ದುಷ್ಕರ್ಮಿಗಳು, ಮೈದಾನದ ಬಳಿ ನಿಲ್ಲಿಸಿದ್ದ ಕಸದ ಲಾರಿಯಲ್ಲಿಟ್ಟು ಪರಾರಿ ಆಗಿದ್ದಾರೆ.

30 ರಿಂದ 35 ವರ್ಷದ ಮಹಿಳೆ ಗುರುತು ಪತ್ತೆಗಾಗಿ ಪೊಲೀಸರಿಂದ ತನಿಖೆ ನಡೆದಿದ್ದು, ಅಪರಿಚಿತ ಮಹಿಳೆ ಶವ ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಸದ್ಯ ಆರೋಪಿಗಳ ಪತ್ತೆಗಾಗಿ ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಲಾಗುತ್ತಿದೆ.

ಕಸ ಹಾಕಲು ಬಂದಿದ್ದ ವ್ಯಕ್ತಿಯಿಂದ ಪೊಲೀಸರಿಗೆ ಮಾಹಿತಿ

ಶನಿವಾರ ರಾತ್ರಿ ಸ್ಥಳೀಯ ವ್ಯಕ್ತಿಯೊಬ್ಬರು ಕಸ ಹಾಕಲು ಬಂದಿದ್ದರು. ಈ ವೇಳೆ ಯುವತಿಯ ತಲೆ ಕೂದಲು ಕಾಣಿಸಿದೆ. ತಕ್ಷಣವೇ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದಾಗ ಶವದ ವಿಚಾರ ಬೆಳಕಿಗೆ ಬಂದಿದೆ. ಸದ್ಯ ರಸ್ತೆಯಲ್ಲಿನ ಸಿಸಿಟಿವಿ ಪರಿಶೀಲನೆ ಮಾಡಿದ್ದು, ಒಬ್ಬನೇ ದುಷ್ಕರ್ಮಿ ಆಟೋದಲ್ಲಿ ಬಾಡಿ ತಂದು ಬಿಸಾಡಿರುವುದು ತಿಳಿದುಬಂದಿದೆ. ಹಂತಕನಿಗಾಗಿ ಪೊಲೀಸರು ಹುಡುಕಾಟ ನಡೆಸಿದ್ದಾರೆ.

ಚನ್ನಮ್ಮನಕೆರೆ ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬೆಂಗಳೂರಿನ ಜಂಟಿ ಪೊಲೀಸ್ ಆಯುಕ್ತ ಸಿ ವಂಶಿ ಕೃಷ್ಣ ಈ ಬಗ್ಗೆ ಮಾತನಾಡಿ, 'ಬೆಳಗಿನ ಜಾವ 1 ಗಂಟೆಯಿಂದ ಬೆಳಗಿನ ಜಾವ 3 ಗಂಟೆಯ ನಡುವೆ ಶವದ ಚೀಲವನ್ನು ಕಸದ ಲಾರಿಯಲ್ಲಿ ಎಸೆಯಲಾಗಿದೆ ಎಂದು ತಿಳಿಸಿದ್ದಾರೆ.

## ವಿಶೇಷಚೇತನರಿಗೆ ಕರುಣೆ ತೋರದೆ ಹೆಚ್ಚಿನ ಅವಕಾಶ ಮತ್ತು ಸಮಾನ ಮನ್ನಣೆ ನೀಡಿ

### ನೇರಳೆ ಮೇಳದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾವೀರ್ ಮ.ಕರೆಣ್ಣವರ್ ಅಭಿಮತ

**ದಾವಣಗೆರೆ :** ಅಂಗವಿಕಲರ ಬಗ್ಗೆ ಕರುಣೆ ತೋರಿಸದೆ ಅವಕಾಶ ಮತ್ತು ಸಮಾನ ಮನ್ನಣೆ ನೀಡಿ ಎಲ್ಲರನ್ನು ಪ್ರೋತ್ಸಾಹಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾವೀರ ಮ. ಕರಣ್ಣವರ ಹೇಳಿದರು.

ನಗರದ ಹೊರವಲಯದಲ್ಲಿನ ಸಂಯೋಜಿತ ಪ್ರಾದೇಶಿಕ ಕೇಂದ್ರ [ದಿವ್ಯಾಂಗಜನ್] – ಅಖಿಅ ಯಲ್ಲಿ ಶನಿವಾರ ಆಯೋಜಿಸಲಾಗಿದ್ದ ಕರ್ನಾಟಕದಲ್ಲಿ ಮೊದಲ ನೇರಳೆ ಮೇಳವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು,

ಕಲೆ, ಸಂಸ್ಕೃತಿ, ಕ್ರೀಡಾ ಪ್ರತಿಭೆಗಳು ಮತ್ತು ಅಂಗವಿಕಲ ವ್ಯಕ್ತಿಗಳ ಉದ್ಯಮಶೀಲತೆಯಲ್ಲಿ ಅವರ ವಿಶೇಷ ಸಾಮರ್ಥ್ಯಗಳನ್ನು ಗುರುತಿಸಬೇಕು, ಪ್ರೋತ್ಸಾಹಿಸಬೇಕು. ಯಾವುದೇ ವ್ಯಕ್ತಿಗೆ ಮಾನಸಿಕ ಅಥವಾ ದೈಹಿಕ ದೌರ್ಬಲ್ಯ ಇದ್ದರೂ ಇತರ ಅಗಾಧ ಕೌಶಲ್ಯ, ಮಾನಸಿಕವಾಗಿ ಶಕ್ತಿ, ಸಾಮರ್ಥ್ಯ ಹೊಂದಿರುತ್ತಾರೆ. ಅವರ ಶಕ್ತಿ ಸಾಮರ್ಥ್ಯಗಳನ್ನು ಪ್ರಾಮಾಣಿಕವಾಗಿ ಗುರುತಿಸಿ, ಸರಿಯಾದ ಮನೋಭಾವದಿಂದ ನಿರ್ವಹಿಸಿದಲ್ಲಿ ಅದ್ವಿತೀಯ ಯಶಸ್ಸನ್ನು ಕಾಣುತ್ತಾರೆ. ಇಂತಹ ಅಭೂತಪೂರ್ವ ಸಾಧನೆ ಮಾಡಬೇಕೆಂದರೆ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯ ವೃದ್ಧಿಸಿಕೊಳ್ಳಬೇಕು. ಅದರಂತೆ ನಮ್ಮ ಗುರಿ ಸಹ ಉನ್ನತ ಮಟ್ಟದಲ್ಲಿರಬೇಕು. ವಿಕಲಚೇತನರು ಸಿಗುವಂತಹ ಅವಕಾಶಗಳನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಂಡು ತಮ್ಮ ಶಕ್ತಿ ಸಾಮರ್ಥ್ಯ ಇನ್ನಷ್ಟು ಬಲಪಡಿಸಿಕೊಳ್ಳಲು ಅಖಿಅ ಸಹಕಾರಿಯಾಗಿದೆ. ತುಮಕೂರು ಜಿಲ್ಲೆಯವರಾದ ಶ್ರೀ ಕೆಂಪಾ ಹೊನ್ನಯ್ಯ ಕುರುಡುತನದಿಂದ ಬಳಲುತ್ತಿದ್ದರೂ ಪಶ್ಚಿಮ ಬಂಗಾಳದಲ್ಲಿ ಐಎಎಸ್ ಅಧಿಕಾರಿಯಾಗಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದನ್ನು ಸ್ಮರಿಸಿದರು. ಆದ್ದರಿಂದ ಪ್ರತಿಯೊಬ್ಬರೂ ಅಖಿಅ ಯ ಸೌಲಭ್ಯಗಳು




ಮತ್ತು ಯೋಜನೆಗಳನ್ನು ಬಳಸಿಕೊಂಡು ತಮ್ಮ ಜೀವನದಲ್ಲಿ ಸಾಧನೆ ಮಾಡಬೇಕೆಂದು ಪ್ರೋತ್ಸಾಹಿಸಿದರು.

ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ಜಂಟಿ ನಿರ್ದೇಶಕ ಎಸ್. ನಟರಾಜ್ ಮಾತನಾಡಿ, ನೇರಳೆ ಬಣ್ಣವು ವಿಕಲಚೇತನರ ಘನತೆಯ ಸಂಕೇತವಾಗಿದೆ. ರಾಜ್ಯ ಸರ್ಕಾರದ ಸಿಗುವ ವಿವಿಧ ಯೋಜನೆಗಳ ಬಗ್ಗೆ ಅವರು ವಿವರಿಸಿದ ಅವರು, ಸಂಯೋಜಿತ ಪ್ರಾದೇಶಿಕ ಕೇಂದ್ರದ (ಸಿಆರ್‌ಸಿ) ಒಂದೇ ಸೂರಿನಡಿ ವಿಕಲಚೇತನರಿಗೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊದಗಿಸುವುದೇ ಇದರ ಸದುದ್ದೇಶವಾಗಿದೆ. ಈ ನೇರಳೆ ಕಾರ್ಯಕ್ರಮವು ವಿಕಲಚೇತನರನ್ನು ಗೌರವಿಸುತ್ತದೆ ಮತ್ತು ಅವರ ಸಾಮರ್ಥ್ಯಗಳನ್ನು ಬೆಳಕಿಗೆ ತರಲು ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕಿದೆ. ಮುಂದಿನ ದಿನಗಳಲ್ಲಿ ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಇದೇ ರೀತಿಯ ನೇರಳೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದಲ್ಲದೇ ಬೆಂಗಳೂರು ವ್ಯಾಪ್ತಿಯಲ್ಲಿ ಸಂಯೋಜಿತ ಪ್ರಾದೇಶಿಕ ಕೇಂದ್ರ ಸ್ಥಾಪಿಸಲು ಕ್ರಮವಹಿಸಲಾಗುವುದು ಎಂದರು.

ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಎಂ.ಎಸ್. ಕೌಲಾಪುರೆ, ಅಂಗವಿಕಲ ವ್ಯಕ್ತಿಗಳಿಗೆ ಸಾಮರ್ಥ್ಯವಿದೆ ಆದರೆ ಅವಕಾಶಗಳಿಂದ ವಂಚಿತರಾಗಿ ಅತಂತ್ರ ಪರಿಸ್ಥಿತಿಯಲ್ಲಿ ಬದುಕುತ್ತಿದ್ದಾರೆ. ಪ್ರಸ್ತುತ ಇಂದಿಗೂ ಕೆಲವು ಅಂಗವಿಕಲರು ತಮ್ಮ ಅಂಗವೈಕಲ್ಯತೆಯನ್ನು ಮರೆಮಾಚಿ ಜೀವನ ನಡೆಸುತ್ತಿದ್ದಾರೆ. ಅಂತಹವರನ್ನು ಗುರುತಿಸಿ ಸಮಾಜದ ಮುಖ್ಯವಾಹಿನಿಗೆ ಬರಲು ಪ್ರೋತ್ಸಾಹಿಸಬೇಕು. ಯಾವುದೇ ಒಬ್ಬ ವ್ಯಕ್ತಿ ಅಂಗವೈಕೃತೆ ಹೊಂದಿದ್ದರೆ, ಮತ್ತೊಂದು ರೀತಿಯ ವಿಶೇಷ ಶಕ್ತಿ ಸಾಮರ್ಥ್ಯಗಳನ್ನು ಒಳಗೊಂಡಿರುತ್ತಾರೆ. ಉದಾಹರಣೆಗೆ ಪಂಡಿತ್ ಪುಟ್ಟರಾಜ ಗವಾಯಿ ಎಂದು ಸ್ಮರಿಸಿದರು. ಅದೇ ರೀತಿ ಎಲ್ಲಾ ಅಂಗವಿಕಲರು ಸಹ ಸಮಾಜದಲ್ಲಿ ಗೌರವಯುತ ಜೀವನವನ್ನು ನಡೆಸಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ಸಿಆರ್‌ಸಿ ನಿರ್ದೇಶಕಿ ಮಿನಾಕ್ಷಿ ಸ್ವಾಗತಿಸಿ, ಪ್ರಾಸ್ತವಿಕವಾಗಿ ಮಾತನಾಡಿದರು. ಬೆಂಗಳೂರು ನಗರ ಜಿಲ್ಲೆಯ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಂಗವಿಕಲರ ಕಲ್ಯಾಣಾಧಿಕಾರಿ ಕೃಷ್ಣಮೂರ್ತಿ, ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಲ್ಯಾಣಾಧಿಕಾರಿ ಡಾ.ಕೆ.ಕೆ.ಪ್ರಕಾಶ್, ಎಸ್. ಎಸ್. ಆಸ್ಪತ್ರೆಯ ನರವಿಜ್ಞಾನಿ ಡಾ.ರಚಿತಾ ಹಾಗೂ ವಿಶೇಷಚೇತನ ಫಲಾನುಭವಿಗಳು, ಎನ್‌ಜಿಒಗಳು, ಪೋಷಕರು, ಭಾಗವಹಿಸಿದ್ದರು.

## ಭವಿಷ್ಯ ರೂಪಿಸಿಕೊಂಡ ಮೇಲೆ ಸಮಾಜ ಸೇವೆಗೆ ಮುಂದಾಗಿ: ಜಿ. ರಂಗಸ್ವಾಮಿ



**ದಾವಣಗೆರೆ:** ವಿದ್ಯಾರ್ಥಿಗಳು ಓದು ಮುಗಿಸಿ ಭವಿಷ್ಯ ರೂಪಿಸಿಕೊಂಡ ಮೇಲೆ ಸಂಕಷ್ಟದಲ್ಲಿ ಇರುವವರಿಗೆ ನೆರವಾಗುವಂತಹ ಸಮಾಜ ಸೇವಾ ಗುಣವನ್ನು ಮೈಗೂಡಿಸಿಕೊಳ್ಳಿರಿ ಎಂದು ಚಿತ್ರದುರ್ಗ ಜಿಲ್ಲಾ ಬ್ಯಾಂಕ್ ನಿವೃತ್ತರ ಒಕ್ಕೂಟದ ಗೌರವಾಧ್ಯಕ್ಷ ಜಿ. ರಂಗಸ್ವಾಮಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ದಾವಣಗೆರೆ–ಚಿತ್ರದುರ್ಗ ಜಿಲ್ಲಾ ಬ್ಯಾಂಕ್ ನಿವೃತ್ತರ ಒಕ್ಕೂಟ ದಾವಣಗೆರೆ, ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಪೆನ್ಷನರ್ಸ್ ಕಮ್ಯೂನ್ ದಾವಣಗೆರೆ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಬಿಸಿಡಿಬಿಆರ್ ಎಫ್ ನ ತ್ರೈಮಾಸಿಕ ಮಹಾಸಭೆ ಕಾರ್ಯಕ್ರಮದ ವಿಶೇಷ ಆಹ್ವಾನಿತರಾಗಿ ಮಾತನಾಡಿದರು.

2017 ರಲ್ಲಿ ಒಕ್ಕೂಟ ಸ್ಥಾಪಿಸಲಾಯಿತು. ಆರಂಭದ ವರ್ಷಗಳಲ್ಲಿ ಕೆಲವೇ ವಿದ್ಯಾರ್ಥಿಗಳಿಗೆ ಮಾತ್ರ ಪ್ರತಿಭಾ ಪುರಸ್ಕಾರ ಮಾಡಲಾಗುತಿತ್ತು, ಇದೀಗ 50 ಜನರಿಗೆ ಪುರಸ್ಕಾರ ಮಾಡುವಷ್ಟು ಸಂಘಟನೆ ದೊಡ್ಡದಾಗಿದೆ ಎಂದರು.

ಅತ್ಯಂತ ಬಡತನದಲ್ಲಿ ಬೆಳೆದು ಕಷ್ಟಪಟ್ಟು ನೌಕರಿ ಸೇರಿದ ಮೇಲೆ ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಬೇಕೆಂದು ನಿರ್ಧರಿಸಿ 10 ಕ್ಕೂ ಅಧಿಕ ಮಕ್ಕಳನ್ನು ಮನೆಯಲ್ಲಿಯೇ ಇಟ್ಟುಕೊಂಡು ಪೂರ್ಣ ವಿದ್ಯಾಭ್ಯಾಸ ಮಾಡಿಸಿದ್ದು ಇದೀಗ ಎಲ್ಲರೂ ಅಮೇರಿಕಾದಲ್ಲಿ ಉತ್ತಮ ಕೆಲಸಗಳಲ್ಲಿ ಇದ್ದಾರೆ ಎಂದು ಹೇಳುವ ಮೂಲಕ ಸ್ಫೂರ್ತಿ ತುಂಬಿದರು.

ಎಸ್‌ಬಿಎಂ ಪೆನ್ಸಿನರ್ಸ್ ಕಮ್ಯುನ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಜಿತ್ ಕುಮಾರ್ ನ್ಯಾಮತಿ ಮಾತನಾಡಿ, ಸೇವಾ ಅವಧಿಯಲ್ಲಿ ಸಮಾಜ ನಮಗೆ ಸಾಕಷ್ಟು ಕೊಟ್ಟಿರುತ್ತದೆ. ಆ ಋಣ ತೀರಿಸಲು ಇದು ಉತ್ತಮ ವೇದಿಕೆಯಾಗಿದೆ. ನಿವೃತ್ತರಾದ ನಂತರ ಬರುವ ಪಿಂಚಣಿಯ ಒಂದು ಭಾಗವನ್ನು ಸಮಾಜ ಸೇವೆಗೆ ಮೀಸಲಿಡಬೇಕು. ದಾನಗಳು ಕೂಡ ಸತ್ ಪಾತ್ರರಿಗೆ ಸಲ್ಲಬೇಕು. ಸಂಘಟನೆಯ ಮೂಲಕ ಈ ರೀತಿಯ ಕಾರ್ಯಕ್ರಮ ಮಾಡುತ್ತಿರುವುದು ಶ್ಲಾಘನೀಯ ಎಂದರು

ನಿವೃತ್ತ ಬ್ಯಾಂಕ್ ನೌಕರರನ್ನು ಹೊರತುಪಡಿಸಿ ಇತರೆ ಗಣ್ಯರು ಮತ್ತು ವರ್ತಕರು ಕೂಡ ಪ್ರತಿಭಾ ಪುರಸ್ಕಾರಕ್ಕೆ ನಮ್ಮೊಂದಿಗೆ ಕೈಜೋಡಿಸಲು ಮುಂದಾಗಿದ್ದು, ಅಂತವರಿಗೂ ಕೂಡ ಅವಕಾಶ ನೀಡಬೇಕಿದೆ ಎಂದು ಹೇಳಿದರು.

ಸೂರ್ಯನೊಮ್ಮೆ, 'ನಾನಿಲ್ಲದ ವೇಳೆ ಬೆಳಕನ್ನು ಯಾರು ನೀಡುತ್ತಾರೆ'? ಎಂದಾಗ ದೀಪ ನೀನಿಲ್ಲದ ವೇಳೆ ತಾನು ಬೆಳಕನ್ನು ನೀಡುವುದಾಗಿ ಹೇಳುತ್ತದೆ. ಸೂರ್ಯನಷ್ಟು ಪ್ರಖರವಲ್ಲದಿದ್ದರೂ, ಕತ್ತಲೆಯನ್ನು ಓಡಿಸುವಷ್ಟು ಬೆಳಗುವ ದೀಪದಂತೆ ನಮ್ಮ ಸಂಘವು ವಿದ್ಯಾರ್ಥಿಗಳಿಗೆ ಕೈಲಾದ ನೆರವು ನೀಡುವ ನಿಟ್ಟಿನಲ್ಲಿ ದಾನಿಗಳ ಸಹಕಾರದೊಂದಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ನಡೆಸುಕೊಂಡು ಬರುತ್ತಿದೆ. ದಾನಿಗಳೆಲ್ಲರಿಗೂ ಕೃತಜ್ಞತೆಗಳು ಎಂದರಲ್ಲದೆ, ನಾವು ಮಾಡಿದ್ದೀವಿ ಎಂದು ಹೇಳುವುದಿಲ್ಲ. ನೀವು ಸ್ವೀಕರಿಸಿದ್ದೀರಿ ನಿಮಗೆಲ್ಲ ಧನ್ಯವಾದಗಳು ಎಂದು ಒಕ್ಕೂಟದ ಅಧ್ಯಕ್ಷರಾದ ಎಸ್.ಟಿ. ಶಾಂತ ಗಂಗಾಧರ್ ನುಡಿದರು.

ಕಾರ್ಯಕ್ರಮದಲ್ಲಿ 75 ವರ್ಷ ಪೂರೈಸಿದ ಸಂಘದ 9 ಸದಸ್ಯರುಗಳನ್ನು ಸನ್ಮಾನಿಸಿ, ಗೌರವಿಸಲಾಯಿತು. ನಂತರ ಆರ್ಥಿಕವಾಗಿ ಹಿಂದುಳಿದ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯ ಒಟ್ಟು 41 ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ತಲಾ 5000 ರೂ. ನಗದು ಬಹುಮಾನ, ಪ್ರಶಂಸಾ ಪತ್ರ, ಹೊಸ ಸಿದ್ಧ ಉಡುಪು ಹಾಗೂ ಹಸಿರು ಗಿಡಗಳನ್ನು ನೀಡಿ ಪುರಸ್ಕರಿಸಲಾಯಿತು.

## ಕಾಮಗಾರಿ ಸ್ಥಗಿತಗೊಳಿಸದಿದ್ದರೆ ಉಗ್ರ ಹೋರಾಟ: ರೇಣುಕಾಚಾರ್ಯ




**ದಾವಣಗೆರೆ:** ಭದ್ರಾ ಜಲಾಶಯದ ಬಲದಂಡೆ ನಾಲೆ ವಿಭಜಿಸಿ ನಡೆಸುತ್ತಿರುವ ಕಾಮಗಾರಿಯನ್ನು

ಸರ್ಕಾರ ಕೂಡಲೇ ಸ್ಥಗಿತಗೊಳಿಸದಿದ್ದರೆ ಮುಂದೆ ತೀವ್ರ ಸ್ವರೂಪದ ಹೋರಾಟ ಕೈಗೊಳ್ಳಲಾಗುವುದು ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಎಚ್ಚರಿಕೆ ನೀಡಿದರು.

ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಭದ್ರಾ ಬಲದಂಡೆ ನಾಲೆ ಯೋಜನೆಯ ಉದ್ದೇಶವನ್ನೇ ದಿಕ್ಕುತಪ್ಪಿಸಿ ಅವೈಜ್ಞಾನಿಕ ಕಾಮಗಾರಿ ನಡೆಸುತ್ತಿದೆ. ಇದರಿಂದ ಈ ಭಾಗದ ರೈತರಿಗೆ ಅನ್ಯಾಯವಾಗಲಿದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಅನೇಕ ಹಂತಗಳಲ್ಲಿ ಹೋರಾಟ ಕೈಗೊಳ್ಳಲಾಗಿದೆ. ಸರ್ಕಾರ ಕಾಮಗಾರಿ ಸ್ಥಗಿತಗೊಳಿಸದಿದ್ದರೆ ಹಳ್ಳಿ–ಹಳ್ಳಿಗಳಲ್ಲಿ ಕರಪತ್ರ ವಿತರಣೆ, ಅಹೋರಾತ್ರಿ ಧರಣಿ ಸತ್ಯಾಗ್ರಹ ಹಾಗೂ ಪಾದಯಾತ್ರೆಯಂತಹ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದರು.

ಭದ್ರಾ ಬಲಂಡೆ ಸೀಳಿ ನಡೆಸುತ್ತಿರುವ ಕಾಮಗಾರಿ ವಿರೋಧಿಸಿ ಭಾರತೀಯ ರೈತ ಒಕ್ಕೂಟ ಮತ್ತು ಬಿಜೆಪಿ ರೈತ ಮೋರ್ಚಾದಿಂದ ಹಂತ–ಹಂತವಾಗಿ ಹೋರಾಟ ನಡೆಸುತ್ತಾ ಬರಲಾಗಿದೆ. ರೈತರ ಪರವಾಗಿರುವ ನಮ್ಮ ಹೋರಾಟವನ್ನು ಹತ್ತಿಕ್ಕಲು ಸರ್ಕಾರ ಪ್ರಯತ್ನಿಸುತ್ತಿದೆ. ಪೊಲೀಸ್ ಇಲಾಖೆಯನ್ನು ಬಳಸಿಕೊಂಡು ನಮ್ಮನ್ನು ಭಯೋತ್ಪಾದಕರಂತೆ ನಡೆಸಿಕೊಂಡಿದೆ. ಹೆದ್ದಾರಿ ತಡೆ ಹೋರಾಟ ಸಂದರ್ಭದಲ್ಲಿ ಪೊಲೀಸರು ನಮ್ಮನ್ನು ಗೂಂಡಾಗಳಂತೆ ಬಂಧಿಸಿದ್ದರು. ದಾವಣಗೆರೆ ಬಂದ್ ಸಂದರ್ಭದಲ್ಲೂ ನಿಷೇಧಾಜ್ಞೆ ಜಾರಿಗೊಳಿಸಿದರು ಎಂದು ಇಲಾಖೆ ವಿರುದ್ಧ ಕಿಡಿಕಾರಿದರು.

ದಾವಣಗೆರೆ ಬಂದ್ ಹಿನ್ನೆಲೆಯಲ್ಲಿ ನಾವು ಬೆಳಿಗ್ಗೆ 6 ಗಂಟೆಯಿಂದ ಸಂಜೆ 6 ರವರೆಗೆ ಪ್ರತಿಭಟನೆ ನಡೆಸಲು ಅನುಮತಿ ಪಡೆದಿದ್ದೆವು. ಆದರೂ ಜಿಲ್ಲಾ ಪೊಲೀಸ್ ಅಧೀಕ್ಷಕರು ಕಾಂಗ್ರೆಸ್ಸಿನವರಿಗೆ ಪ್ರತಿಭಟನೆ ನಡೆಸಲು ಅವಕಾಶ ನೀಡಿದ್ದಾರೆ. ಪೊಲೀಸ್ ಅಧಿಕಾರಿಗಳು ಕಾಂಗ್ರೆಸ್ ಏಜೆಂಟರಂತೆ ವರ್ತಿಸಿದ್ದಾರೆ. ಎಸ್ಪಿ ಬಗ್ಗೆ ಗೌರವ ಇದೆ. ಆದರೆ, ಅವರ ಮಾತು, ವರ್ತನೆ ಬಗ್ಗೆ ಅಸಮಾಧಾನವಿದೆ ಎಂದು ರೇಣುಕಾಚಾರ್ಯ ಹರಿಹಾಯ್ದರು.

ಬಿಜೆಪಿ ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಲೋಕಿಕೆರೆ ನಾಗರಾಜ್ ಮಾತನಾಡಿ, ಕಾಂಗ್ರೆಸ್ಸಿನವರು ನಮ್ಮನ್ನು ನಿರುದ್ಯೋಗಿಗಳೆಂದು ಕರೆದಿದ್ದಾರೆ. ನಾವು ರೈತರ ಪರವಾಗಿ ಹೋರಾಟ ಮಾಡುತ್ತಿದ್ದೇವೆ. ಕಾಮಗಾರಿ ಸರಿಯಾದ ದಿಕ್ಕಿನಲ್ಲಿ ಸಾಗುತ್ತಿಲ್ಲ ಎಂಬುದನ್ನು ಒಪ್ಪಿಕೊಂಡೂ ಸುಮ್ಮನಿರುವ ಇವರ ಜಿಲ್ಲಾ ಉಸ್ತುವಾರಿ ಸಚಿವರು ಏನು? ಎಂದು ಪ್ರಶ್ನಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಎನ್.ರಾಜಶೇಖರ್, ಮಾಜಿ ಶಾಸಕ ಎಂ. ಬಸವರಾಜ್ ನಾಯ್ಕ, ಮುಖಂಡರಾದ ಚಂದ್ರಶೇಖರ್ ಪೂಜಾರ್, ಬಿ.ಜಿ. ಅಜಯ ಕುಮಾರ್, ಧನಂಜಯ ಕಡ್ಲೇಬಾಳು ಇನ್ನಿತರರು ಉಪಸ್ಥಿತರಿದ್ದರು.

## ವೃದ್ದನಿಗೆ ಚಿಕಿತ್ಸೆ ಕೊಡಿಸಿ ಮಾನವೀಯತೆ ಮೆರೆದ ನ್ಯಾ. ಡಿ.ಕೆ.ವೇಲಾ



**ದಾವಣಗೆರೆ:** ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಶನಿವಾರ ಮಧ್ಯಾಹ್ನ ಹರಿಹರ ನ್ಯಾಯಾಲಯಕ್ಕೆ ಆಗಮಿಸಿದ ಸಮಯದಲ್ಲಿ ದೊಡ್ಡಬತಿ ಸಮೀಪದ ಮಂದಾರ ಶಾಲೆಯ ಹತ್ತಿರದ ಮುಖ್ಯರಸ್ತೆಯಲ್ಲಿ ವೃದ್ದರೊಬ್ಬರು ನಿತ್ರಾಣಗೊಂಡು ರಸ್ತೆ ಬದಿಯಲ್ಲೇ ಬಿದ್ದಿದ್ದನ್ನು ಕಂಡು ಅವರನ್ನು ಹರಿಹರದ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿ ಮಾನವೀತೆ ಮೆರೆದಿದ್ದಾರೆ. ಈ ದೃಶ್ಯವನ್ನು ಕಂಡ ಸಾರ್ವಜನಿಕರು ಸಾಕಷ್ಟು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ವೃದ್ದನ ಹೆಸರು ಮತ್ತು ವಿಳಾಸವನ್ನು ವಿಚಾರಿಸಲಾಗಿ ಹರಪನಹಳ್ಳಿ ತಾಲ್ಲೂಕಿನ ತೆಲಗಿ ಗ್ರಾಮದ ಕರಿಯಪ್ಪ ತಂದೆ ಬಸಪ್ಪ ಎಂದು ತಿಳಿದಿದೆ.

## ಕಾಂಗ್ರೆಸ್ ನಾಯಕರ ಬಗ್ಗೆ ಬಿಜೆಪಿ ಅವಹೇಳನ ಖಂಡಿಸಿ ಯುವ ಕಾಂಗ್ರೆಸ್ ಬೃಹತ್ ಪ್ರತಿಭಟನೆ

**ಚಿಕ್ಕಮಗಳೂರು :** ಭಾರತ ದೇಶದಲ್ಲಿ ಸುದೀರ್ಘ ಆಡಳಿತ ನಡೆಸಿದ ಉಕ್ಕಿನ ಮಹಿಳೆ ಪ್ರಿಯದರ್ಶಿನಿ, ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಬಗ್ಗೆ ಹಗುರವಾಗಿ ಮಾತನಾಡಿರುವ ಬಿಜೆಪಿ ಮುಖಂಡರ ನಡೆಯನ್ನು ಖಂಡಿಸಿ ಇಂದು ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಸಮಿತಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

ನಗರದ ಅಜಾದ್ ವೃತ್ತದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು ಕೇಂದ್ರ ಸರ್ಕಾರ ಮತ್ತು ಬಿಜೆಪಿ ಮುಖಂಡರ ನಡೆಯನ್ನು ಖಂಡಿಸಿ ಘೋಷಣೆ ಕೂಗಿ ಹಿಟ್ಲರ್ ಎಂದು ಇಂದಿರಾ ಗಾಂಧಿಯವರನ್ನು ಬಿಜೆಪಿ ಸಾಮಾಜಿಕ ಜಾಲತಾಣದಲ್ಲಿ ಅವಮಾನಿಸಿರುವುದನ್ನು ಖಂಡಿಸಿದರು.

ಈ ಸಂದರ್ಭದಲ್ಲಿ ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ ಮಂಜೇಗೌಡ, ದೇಶದ ಅಭಿವೃದ್ಧಿಗೆ ಇಂದಿರಾ ಗಾಂಧಿಯವರು




ಪ್ರಧಾನಿಯಾಗಿದ್ದಾಗ 20 ಅಂಶಗಳ ಕಾರ್ಯಕ್ರಮಗಳನ್ನು ಜಾರಿಗೆ ತಂದು ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿದ ಇವರ ಬಗ್ಗೆ ಬಿಜೆಪಿ ಮತ್ತು ಕೇಂದ್ರಸರ್ಕಾರ ಅವಹೇಳನ ಮಾಡಿದ್ದಾರೆಂದು ಆರೋಪಿಸಿದರು.

ಬ್ರಿಟೀಷ್ ಆಡಳಿತದಿಂದ ಖಾಲಿ ಖಜಾನೆಯಾಗಿದ್ದ ಭಾರತ ದೇಶದಲ್ಲಿ ಸರ್ವರಿಗೂ ಸಮಾನತೆ ತಂದುಕೊಟ್ಟ ಧೀಮಂತ ನಾಯಕಿಯಾಗಿದ್ದಾರೆ. ಇಂತಹವರ ಬಗ್ಗೆ ಕ್ಷುಲ್ಲಕ ರಾಜಕೀಯಕ್ಕಾಗಿ ಅವಹೇಳನ ಮಾಡಿರುವುದನ್ನು ಖಂಡಿಸಿದರು.

ಬಿಜೆಪಿ ಸೋಲಿನ ಭೀತಿಯಿಂದ ಹತಾಶೆಗೊಂಡು ಸಿ.ಟಿ. ರವಿ ಅವರು ಮನಬಂದಂತೆ ಮಾತನಾಡುತ್ತಿದ್ದಾರೆ, ಇಂದಿರಾ ಗಾಂಧಿ, ಸೋನಿಯಾ ಗಾಂಧಿ, ರಾಜೀವ್ ಗಾಂಧಿ, ಮಲ್ಲಿಕಾರ್ಜುನ್ ಖರ್ಗೆ, ರಾಹುಲ್ ಗಾಂಧಿ ಇವರುಗಳನ್ನು ಕೀಳಾಗಿ ಕಾಣುವ ಮೂಲಕ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದ್ದಾರೆಂದು ದೂರಿದರು.

ದೇಶಕ್ಕಾಗಿ ತ್ಯಾಗ, ಬಲಿದಾನ ಮಾಡಿದ ಇಂದಿರಾ ಗಾಂಧಿ, ರಾಜೀವ್ ಗಾಂಧಿಯವರ ದೇಶಪ್ರೇಮವನ್ನು ಬಿಜೆಪಿ ಮುಖಂಡರಿಗೆ ಸಹಿಸಿಕೊಳ್ಳಲಾಗದೆ ಅವಹೇಳನಕಾರಿ ಹೇಳಿಕೆಯಲ್ಲಿ ತಲ್ಲೀನರಾಗಿದ್ದಾರೆಂದು ಟೀಕಿಸಿದ ಅವರು, ದೇಶಕ್ಕೆ ನಿಮ್ಮ ಕೊಡುಗೆ ಏನು ಎಂದು ಪ್ರಶ್ನಿಸಿದರು.

ಸಿ.ಟಿ. ರವಿ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಹಾಗೂ ನಾಯಕರ ಬಗ್ಗೆ ಅವಾಚ್ಯವಾಗಿ ಮಾತನಾಡಿ, ಅವರ ಬೂಟ್ ನೆಕ್ಕುವ ಪದ ಬಳಸಿದರೆ ರವಿಯವರ ಎಲ್ಲಾ ಕಾರ್ಯಕ್ರಮಗಳಿಗೆ ಕಪ್ಪು ಬಾವುಟ ಪ್ರದರ್ಶಿಸುವುದಾಗಿ ಎಚ್ಚರಿಸಿದರು.

ಕಾಂಗ್ರೆಸ್ ಪಕ್ಷ ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ಅವರು ಹಾಕಿಕೊಟ್ಟಂತ ಸಂವಿಧಾನದ ಆಶಯದಂತೆ ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲು ಎಂಬಂತೆ ಕಾರ್ಯಾಂಗ, ನ್ಯಾಯಾಂಗ, ಶಾಸಕಾಂಗ ಮೂರು ಅಂಗಗಳಲ್ಲಿ ಕೆಲಸ ಮಾಡುತ್ತಿದೆ ಎಂದು ಹೇಳಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಮಕ್ಕಳೊಂದಿಗೆ ಆಟವಾಡುವುದು ನಿಮಗೆ ಯಾವತ್ತೂ ಅದ್ಭುತ ಚಿಕಿತ್ಸೆಯ ಅನುಭವ ನೀಡುತ್ತದೆ. ಸಹೋದರ-ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಥಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಸಂಗಾತಿ ಕಾಳಜಿ ತೋರಿಸುತ್ತಾರೆ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ಸಂತೋಷವಾಗಿರಿಸಲು ಕೆಲಸಗಳನ್ನು ಮಾಡುತ್ತಾರೆ. ನಿಮ್ಮ ಮೇಲಿನವರಿಗೆ ಇಂದು ನಿಮ್ಮ ಕೆಲಸದ ಗುಣಮಟ್ಟ ಒಳ್ಳೆಯ ಪ್ರಭಾವ ಬೀರಬಹುದು. ಇಂದು ಸಮಯದ ಸೌಂದರ್ಯವನ್ನು ನೋಡುತ್ತಾ, ನೀವು ನಿಮಗಾಗಿ ಸಮಯವನ್ನು ತೆಗೆಯಬಹುದು

### ವೃಷಭ ರಾಶಿ

ನಿಮ್ಮ ಪೋಷಕರನ್ನು ನಿರ್ಲಕ್ಷಿಸುವುದು ನಿಮ್ಮ ಭವಿಷ್ಯವನ್ನು ಕೆಡಿಸಬಹುದು. ಉತ್ತಮ ಸಮಯಗಳು ತುಂಬಾ ಕಾಲ ಇರುವುದಿಲ್ಲ. ಮನುಷ್ಯನ ಕಾರ್ಯಗಳು ಶಬ್ದದ ಅಲೆಗಳಿದ್ದ ಹಾಗೆ. ಇವಗಳು ಒಂದು ಮಧುರವಾದ ಅಥವಾ ಒಂದು ಕರ್ಕಶವಾದ ಶಬ್ದವನ್ನು ಉತ್ಪಾದಿಸಲು ಮತ್ತೆ ಬರುತ್ತವೆ. ಅವುಗಳು ಬೀಜಗಳಿದ್ದ ಹಾಗೆ -ನಾವು ಬಿತ್ತಿದ್ದನ್ನು ಕೋಯ್ಯುತ್ತವೆ. ಇಂದು ಮನೆಯ ಯಾವುದೇ ಎಲೆಕ್ಟ್ರಾನಿಕ್ ಸರಕುಗಳ ಕೆಟ್ಟು ಹೋಗುವ ಕಾರಣದಿಂದಾಗಿ ನಿಮ್ಮ ಹಣ ಖರ್ಚಾಗಬಹುದು.

### ಮಿಥುನ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ತಮ್ಮ ಹಣವನ್ನು ಇನ್ನೊಬ್ಬರಿಗೆ ನೀಡಲು ಇಷ್ಟಪಡುವುದಿಲ್ಲ ಆದರೆ ಇಂದು ನೀವು ಅಗತ್ಯವಿರುವವರಿಗೆ ಹಣವನ್ನು ಕೊಟ್ಟು ವಿಶ್ರಾಂತಿಯನ್ನು ಅನುಭವಿಸುವಿರಿ. ಸಂಗಾತಿ ಮತ್ತು ಮಕ್ಕಳು ಹೆಚ್ಚುವರಿ ಪ್ರೀತಿ ಮತ್ತು ಕಾಳಜಿ ತೋರಿಸುತ್ತಾರೆ. ಪ್ರೀತಿಯ ಭಾವಪರವಶತೆಯನ್ನು ಅನುಭವಿಸಲು ಯಾರಾದರೂ ದೊರಕಬಹುದು. ದೇಶಿ ವ್ಯಾಪಾರಕ್ಕೆ ಸೇರಿರುವ ಜನರು, ಇಂದು ಅವರು ಅಪೇಕ್ಷಿತ ಫಲಿತಾಂಶವನ್ನು ಪಡೆಯುವ ಸಂಪೂರ್ಣ ಭರವಸೆ ಇದೆ.

### ಕರ್ಕ ರಾಶಿ

ನೀವು ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ನಿಮ್ಮ ಸಂಗಾತಿಯ ಆರೋಗ್ಯದ ಚಿಂತೆ ಉಂಟುಮಾಡಬಹುದು ಮತ್ತು ಸ್ವಲ್ಪ ವೈದ್ಯಕೀಯ ಗಮನದ ಅಗತ್ಯವಿದೆ.

### ಸಿಂಹ ರಾಶಿ

ಇದು ಹೃದಯ ರೋಗಿಗಳಿಗೆ ಕಾಫಿ ಬಿಡಲು ಸರಿಯಾದ ಸಮಯ. ಯಾವುದೇ ಮುಂದುವರಿದ ಬಳಕೆ ನಿಮ್ಮ ಹೃದಯದ ಮೇಲೆ ಅನವಶ್ಯಕ ಒತ್ತಡ ತರುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ.

### ಕನ್ಯಾ ರಾಶಿ

ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ತುಂಬ ಬೇಡಿಕೆಯಿಡುತ್ತಾರೆ.

### ತುಲಾ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ನಿಮ್ಮ ಪ್ರೀತಿ ಅಸಮ್ಮತಿಯನ್ನು ಆಮಂತ್ರಿಸಬಹುದು.

### ವೃಶ್ಚಿಕ ರಾಶಿ

ಸಾಧ್ಯವಾದರೆ ದೀರ್ಘ ಪ್ರಯಾಣವನ್ನು ತಪ್ಪಿಸಿ. ಏಕೆಂದರೆ ನೀವು ಪ್ರಯಾಣಿಸು ತುಂಬಾ ದುರ್ಬಲರಾಗಿದ್ದೀರಿ ಹಾಗೂ ಇದು ಮತ್ತಷ್ಟು ನಿಮ್ಮನ್ನು ದುರ್ಬಲಗೊಳಿಸುತ್ತದೆ. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ಮಕ್ಕಳ ಜೊತೆಗಿನ ನಿಮ್ಮ ಕಠಿಣ ವರ್ತನೆ ನಿಮಗೆ ಸಿಟ್ಟುಬರಿಸಬಹುದು.

### ಧನು ರಾಶಿ

ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ.

### ಮಕರ ರಾಶಿ

ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಕೆಲವರಿಗೆ ಮದುವೆಯಾಗುವ ಸಾಧ್ಯತೆಗಳು ಹಾಗೂ ಇನ್ನೂ ಕೆಲವರಿಗೆ ಪ್ರಣಯ ಕಾಲ. ನಿಮ್ಮ ಆಂತರಿಕ ಶಕ್ತಿ ದಿನದ ಕೆಲಸವನ್ನು ಉತ್ತಮಗೊಳಿಸುವಲ್ಲಿ ನಿಮ್ಮನ್ನು ಬೆಂಬಲಿಸುತ್ತದೆ.

### ಕುಂಭ ರಾಶಿ

ನೀವು ಅಭಿಪ್ರಾಯ ನೀಡುವಾಗ ಇತರರ ಭಾವನೆಗಳನ್ನು ವಿಶೇಷವಾಗಿ ಪರಿಗಣಿಸಿ. ನೀವು ಮಾಡಿದ ಯಾವುದೇ ತಪ್ಪು ನಿರ್ಧಾರ ಅವರಿಗೆ ಮಾತ್ರ ವ್ಯತಿರಿಕ್ತ ಪರಿಣಾಮ ಉಂಟುಮಾಡದೇ ನಿಮಗೂ ಮಾನಸಿಕ ಒತ್ತಡ ನೀಡುತ್ತದೆ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

### ಮೀನ ರಾಶಿ

ಹೆಚ್ಚಿನ ಕ್ಯಾಲೋರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ಹಣಕಾಸಿನಲ್ಲಿ ಸುಧಾರಣ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ಸಮಸ್ಯೆಗಳನ್ನು ದೂರ ತಳ್ಳಿ ಹಾಗೂ ಮನೆಯಲ್ಲಿ ಸ್ನೇಹಿತರ ನಡುವೆಯೆರಡೂ ನಿಮ್ಮ ಸ್ಥಾನವನ್ನು ಸುಧಾರಿಸುವಲ್ಲಿ ಮನಸ್ಸು ನೀಡಿ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ಒಂದು ಕಠಿಣ ಸಮಯದ ನಂತರ, ಕೆಲಸದಲ್ಲಿ ಏನಾದರೂ ಸುಂದರವಾದ್ದರಿಂದ ಈ ದಿನ ನಿಮಗೆ ಆಶ್ಚರ್ಯವನ್ನುಂಟು ಮಾಡುತ್ತದೆ.

## ವೃದ್ದನಿಗೆ ಚಿಕಿತ್ಸೆ ಕೊಡಿಸಿ ಮಾನವೀಯತೆ ಮೆರೆದ ನ್ಯಾ. ಡಿ.ಕೆ.ವೇಲಾ



**ದಾವಣಗೆರೆ:** ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಶನಿವಾರ ಮಧ್ಯಾಹ್ನ ಹರಿಹರ ನ್ಯಾಯಾಲಯಕ್ಕೆ ಆಗಮಿಸಿದ ಸಮಯದಲ್ಲಿ ದೊಡ್ಡಬತಿ ಸಮೀಪದ ಮಂದಾರ ಶಾಲೆಯ ಹತ್ತಿರದ ಮುಖ್ಯರಸ್ತೆಯಲ್ಲಿ ವೃದ್ದರೊಬ್ಬರು ನಿತ್ರಾಣಗೊಂಡು ರಸ್ತೆ ಬದಿಯಲ್ಲೇ ಬಿದ್ದಿದ್ದನ್ನು ಕಂಡು ಅವರನ್ನು ಹರಿಹರದ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿ ಮಾನವೀತೆ ಮೆರೆದಿದ್ದಾರೆ. ಈ ದೃಶ್ಯವನ್ನು ಕಂಡ ಸಾರ್ವಜನಿಕರು ಸಾಕಷ್ಟು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ವೃದ್ದನ ಹೆಸರು ಮತ್ತು ವಿಳಾಸವನ್ನು ವಿಚಾರಿಸಲಾಗಿ ಹರಪನಹಳ್ಳಿ ತಾಲ್ಲೂಕಿನ ತೆಲಗಿ ಗ್ರಾಮದ ಕರಿಯಪ್ಪ ತಂದೆ ಬಸಪ್ಪ ಎಂದು ತಿಳಿದಿದೆ.

## ಎಲ್ಲಾ ಪಿಡುಗುಗಳಿಗೂ ವಚನ ಸಾಹಿತ್ಯವೇ ಪರಿಹಾರ



**ದಾವಣಗೆರೆ:** ಎಲ್ಲಾ ಪಿಡುಗುಗಳಿಗೂ ವಚನ ಸಾಹಿತ್ಯವೇ ಪರಿಹಾರ ದೇಶದಲ್ಲಿ ಮೂರು ಮುಖ್ಯ ಪಿಡುಗುಗಳಿವೆ

ಮೂಢನಂಬಿಕೆ, ಭ್ರಷ್ಟಾಚಾರ, ಮತ್ತು ಜಾತಿವ್ಯವಸ್ಥೆ ಈ ಮೂರು ಪಿಡುಗುಗಳಿಂದಾಗಿ ದೇಶದ ಅಭಿವೃದ್ಧಿ ಕುಂಠಿತ ಆಗಿದೆ ಈ ಎಲ್ಲಾ ಸಮಸ್ಯೆಗಳಿಗೆ ವಚನ ಸಾಹಿತ್ಯವೇ ಪರಿಹಾರ ಎಂದು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶರಣ ಎಸ್ ಬಿ ರುದ್ರೇಗೌಡರು ಅಭಿಪ್ರಾಯ ಪಟ್ಟರು

ಅವರು ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ವತಿಯಿಂದ ಅವರಗೆರೆ ಗ್ರಾಮದ ಶ್ರೀ ಮಂಜುನಾಥ ಪ್ರೌಢಶಾಲೆಯಲ್ಲಿ ನಡೆದ ವಚನ ಸಂರಕ್ಷಣೆ ದಿನ ಹಾಗೂ ಪಾ ಗೂ ಹಳಕಟ್ಟಿ ಜನ್ಮದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು

ದತ್ತಿ ದಾನಿಗಳಾದ ಶರಣ ವಿಭೂತಿ ಬಸವಾನಂದ ಶರಣರು ಮಾತನಾಡಿ ಭಾರತ ಸರ್ವ ಜನಾಂಗದ ಶಾಂತಿಯ ತೋಟ ಆಗಬೇಕು

ಇದು ಬಹುತ್ವದ ಭಾರತವಾಗಿ ಉಳಿಯಬೇಕಾದರೆ ವಚನ ಸಾಹಿತ್ಯ ಪ್ರಚಾರ ಆಗಬೇಕು ಎಂದು ತಿಳಿಸಿದರುದಾವಣಗೆರೆ ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭೆಯ ಅಧ್ಯಕ್ಷರಾದ ಶರಣ ಅವರಗೆರೆ ರುದ್ರಮುನಿ ಮಾತನಾಡಿ ಸುಸಂಸ್ಕೃತ ಸಮಾಜ ನಿರ್ಮಾಣ ಮಕ್ಕಳಿಂದಲೇ ಸಾಧ್ಯ ಹಾಗಾಗಿ ಮಕ್ಕಳಿಗೆ ವಚನ ಸಾಹಿತ್ಯ ಉಣಬಡಿಸುವ ಕಾರ್ಯ ಮಹತ್ವದ್ದು ಎಂದು ತಿಳಿಸಿದರು

ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಖಜಾಂಚಿಗಳಾದ ಮುದೇಗೌಡ್ರ ನಾಗರಾಜ್ ಕಕ್ಕರಗೊಳ್ಳ ಅವರು ದತ್ತಿ ದಾನಿಗಳ ಪರಿಚಯ ಮಾಡಿಕೊಟ್ಟರು ಸಮಾರಂಭದ ಉದ್ಘಾಟನೆಯನ್ನು ಶಾಲಾ ಮುಖ್ಯೋಪಾಧ್ಯಾಯರಾದ ಶರಣ ಪ್ರಕಾಶ್ ಎಂಬಿ ನೆರವೇರಿಸಿದರು

ಅನುಭವ ನೀಡಿದ ಶರಣ ಸಾಹಿತ್ಯ ಪರಿಷತ್ತಿನ ಪ್ರಧಾನ ಕಾರ್ಯದರ್ಶಿಗಳಾದ ಶರಣ ವಿಶ್ವೇಶ್ವರಯ್ಯ ಬಿಎಂ ಹೆಮ್ಮನಬೇತೂರು ಇವರು ವಚನ ಸಾಹಿತ್ಯದ ನಾಶ ಮಾಡುವ ಕೆಲಸ ಹೇಗಾಯಿತು ಅದರ ಸಂರಕ್ಷಣೆಗಾಗಿ ಶರಣರ ಪ್ರಾಣ ಒತ್ತೆ ಇಟ್ಟು ರಕ್ಷಣೆ ಮಾಡಿದ ಬಗೆ ಹಾಗೂ ಪಾ ಗೂ ಹಳಕಟ್ಟಿ ಅವರ ಕುರಿತು ಅನುಭವವನ್ನು ಹಂಚಿಕೊಂಡರು.

ಪ್ರಾಸ್ತಾವಿಕವಾಗಿ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿಗಳಾದ ಶರಣ ಕರೂರು ಹನುಮಂತಪ್ಪ ನವರು ವಚನ ಸಾಹಿತ್ಯದ ಕುರಿತು ಹಾಗೂ ಮಾನವ ಬಂಧುತ್ವ ವೇದಿಕೆಯ ಚಟುವಟಿಕೆಗಳ ಬಗ್ಗೆ ವಿವರಣೆ ನೀಡಿದರು ಕಾರ್ಯಕ್ರಮದಲ್ಲಿ ದಾವಣಗೆರೆ ತಾಲೂಕು ಮಹಿಳಾ ಬಂದುತ್ವ ವೇದಿಕೆಯ ಸುಮಲತಾ ಸೇರಿದಂತೆ ಶಾಲಾ ಸಿಬ್ಬಂದಿ ವರ್ಗ ಮತ್ತು ಗ್ರಾಮಸ್ಥರು ಶಾಲಾ ಮಕ್ಕಳು ಭಾಗವಹಿಸಿದ್ದರು. ಶಿಕ್ಷಕರಾದ ಲೋಕೇಶ್ ಅವರು ಸ್ವಾಗತಿಸಿದರೆ, ವಿರೂಪಾಕ್ಷಪ್ಪ ಇವರು ನಿರೂಪಣೆ ಮಾಡಿದರು. ಜಗದೀಶ್ ಎಲ್ಲರಿಗೂ ಶರಣು ಸಮರ್ಪಣೆ ಮಾಡಿದರು

## ವಿವಿಧ ಇಲಾಖೆಗಳಿಂದ 106 ಕೋಟಿ ಬಾಕಿ :ಕೆಎಸ್ಎಂಸಿಎ ಅಧ್ಯಕ್ಷ ಸತೀಶ್ ಸೈಲ್

**ಹುಬ್ಬಳ್ಳಿ :** ಲೋಕೋಪಯೋಗಿ, ನಗರ ಪಾಲಿಕೆ ಸೇರಿದಂತೆ ಸರ್ಕಾರದ ವಿವಿಧ ಇಲಾಖೆಗಳಿಂದ ಜಾಹಿರಾತುಬಾಬ್ತು 106 ಕೋಟಿರು.ಗೂಅಧಿಕ ಮೊತ್ತ ಬರಬೇಕಾಗಿದೆಎಂದುಕರ್ನಾಟಕರಾಜ್ಯಮಾರ್ಕೆಟಿಂಗ್ಕಮ್ಯುನಿಕೇಷನ್ಅಂಡ್ ಅಡ್ವರ್ಟೈಸಿಂಗ್ಲಿಮಿಟೆಡ್(ಕೆಎಸ್ಎಂಸಿಎ)ನಿಗಮದಅಧ್ಯಕ್ಷ, ಕಾರವಾರ ಶಾಸಕ ಸತೀಶ್ ಸೈಲ್ಹೇಳಿದ್ದಾರೆ.



ಅವರು ಶುಕ್ರವಾರ ಮಂಗಳೂರಿನ ಯೆಯ್ಯಾಡಿಯಲ್ಲಿ ಕೆಎಸ್ಎಂಸಿಎ ಸ್ಥಳಾಂತರಿತ ಮಂಗಳೂರುಶಾಖೆಯಉದ್ಘಾಟನೆ ನೆರವೇರಿಸಿ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.ಇಂಡಿಯನ್ ನ್ಯೂಸ್ ಪೇಪರ್ ಸೊಸೈಟಿ(ಐಎನ್ಎಸ್) ನಿಯಮ ಪ್ರಕಾರ ಸರ್ಕಾರಿಜಾಹಿರಾತುಗಳನ್ನು ಪತ್ರಿಕೆಗಳಿಗೆ ನೀಡಿದ 60 ದಿನಗಳಲ್ಲಿ ಕೆಎಸ್ಎಂಸಿಎ ಬಿಲ್ಪಾವತಿಸುತ್ತದೆ. ಆದರೆ ಕೆಎಸ್ಎಂಸಿಎ ಬಳಿಕ ಅದನ್ನು ಸರ್ಕಾರದಿಂದ ಪಡೆಯುವುದುಕ್ರಮ.2022ರಿಂದ ವಸೂಲಿಗೆ ಬಾಕಿ ಮೊತ್ತಇರುವ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗಿದೆ.ಇಲ್ಲಿವರೆಗೆ 106 ಕೋಟಿರೂ.ಗೂ ಅಧಿಕ ಮೊತ್ತ ಬರಬೇಕಾಗಿದೆ. ಮೊತ್ತ ಬಾಕಿ ಇರಿಸಿರುವಇಲಾಖೆಗಳಿಂದ ಪಾವತಿಗೆಕ್ರಮ ಕೈಗೊಳ್ಳುವಂತೆ ಕೋರಿ ಜಿಲ್ಲಾಧಿಕಾರಿಗಳು, ಸಹಾಯಕಕಮಿಷನರ್ಗಳಿಗೆ ಪತ್ರ ಮೂಲಕ ಕೋರಲಾಗಿದೆಎಂದರು.ಮಾಧ್ಯಮಗಳಿಗೆ ಸರ್ಕಾರದ ಇಲಾಖೆಗಳು ನೀಡುವಜಾಹಿರಾತು ಮೊತ್ತದಲ್ಲಿ ಶೇ.15ರಷ್ಟುಕಮಿಷನ್ನು ಕೆಎಸ್ಎಂಸಿಎ ಪಡೆದುಕೊಳ್ಳುತ್ತದೆ. ಪತ್ರಿಕೆಗಳಿಗೆ ಪ್ರಯೋಜನವಾಗುವಸಲುವಾಗಿ ಈ ಕಮಿಷನ್(ಏಜೆಂಟ್ಚಾರ್ಜ್) ಮೊತ್ತವನ್ನು ಶೇ.10ಕ್ಕೆ ಇಳಿಸುವ ಬಗ್ಗೆಚಿಂತಿಸಲಾಗುತ್ತಿದೆಎಂದರು.ಜಾಹಿರಾತು ಮತ್ತು ಈವೆಂಟ್ಗಳನ್ನು ಕೆಎಸ್ಎಂಸಿಎ ಆಯೋಜಿಸುತ್ತಿದೆ. ಈವೆಂಟ್ಆಯೋಜನೆಯಲ್ಲಿ 4ಜಿವಿನಾಯ್ತಿಯನ್ನು 25 ಲಕ್ಷರೂ.ನಿಂದ 200 ಲಕ್ಷರೂ.ಗೆವಿಸ್ತರಿಸಲಾಗಿದೆ. ವಿವಿಧ ಸ್ಟಾರ್ಟ್ಅಪ್ ಗಳ ವೃತ್ತಿಪರರಜೊತೆ ಹಾಗೂ ವಿವಿಧಕಂಪನಿಗಳು, ಎಂಎಸ್ಎಂಇ, ಬ್ಯಾಂಕ್ಗಳು, ಪಿಎಸ್ಯುಗಳು, ಗ್ರಾಹಕರೊಂದಿಗೆಚರ್ಚಿಸಲಾಗುತ್ತಿದೆ. ಇವುಗಳ ಜೊತೆ ಸಂಪರ್ಕ ಸೇತುವೆಯಾಗಿ ಹಾಗೂ ತಂತ್ರಜ್ಞಾನಪ್ಲಾಟ್ಫಾರಂ ಆಗಿ ಕೆಎಸ್ಎಂಸಿಎ ವೇದಿಕೆ ಒದಗಿಸುತ್ತದೆಎಂದರು.17 ಕೋಟಿರೂ. ಲಾಭ:ವಾಣಿಜ್ಯ ಮತ್ತುಕೈಗಾರಿಕಾಇಲಾಖೆಯಅಧೀನದಲ್ಲಿ 1972ರಲ್ಲಿ ಕೆಎಸ್ಎಂಸಿಎಅಸ್ತಿತ್ವಕ್ಕೆ ಬಂದಿದೆ. 2002ರಲ್ಲಿ ಹುಬ್ಬಳ್ಳಿಯಲ್ಲಿ ತನ್ನ ಪ್ರಥಮ ಶಾಖೆಆರಂಭಿಸಿದ್ದು, ಪ್ರಸ್ತುತರಾಜ್ಯದಲ್ಲಿ 15 ಶಾಖೆ ಹಾಗೂ ಮುಂಬೈ, ದೆಹಲಿಯಲ್ಲಿಶಾಖೆಗಳು ಕಾರ್ಯನಿರ್ವಹಿಸುತ್ತಿವೆ. 2023-24ರಲ್ಲಿ 412.12 ಕೋಟಿರು. ವಹಿವಾಟುನಡೆಸಲಾಗಿದ್ದು, 2024-25ನೇ 431.81 ಕೋಟಿರು. ವಹಿವಾಟು ನಡೆಸಿದೆ. ಕಳೆದಸಾಲಿನಲ್ಲಿ 17 ಕೋಟಿರು. ಲಾಭ ಗಳಿಸಿದೆ ಎಂದರು.ಕಳೆದ 5 ವರ್ಷಗಳಲ್ಲಿ ಸಿಎಸ್ಆರ್ ನಿಧಿಯಡಿ 285.37 ಲಕ್ಷರು. ವೆಚ್ಚ ಮಾಡಿದೆ.ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ವಾರ್ಷಿಕತಲಾ 1 ಕೋಟಿರು. ದೇಣಿಗೆ ನೀಡಿದೆ.ಪ್ರಸಕ್ತ ಸಾಲಿನಲ್ಲಿಕಂಪನಿಯ ಲಾಭದಲ್ಲಿ 5.28 ಕೋಟಿ ರು.ಗಳ ಲಾಭಾಂಶವನ್ನುಸರ್ಕಾರಕ್ಕೆ ಸಂದಾಯ ಮಾಡಲಾಗಿದೆ. ವಿಶೇಷ ಲಾಭಾಂಶ 3 ಕೋಟಿರು. ನೀಡಲುಉದ್ದೇಶಿಸಲಾಗಿದೆ ಎಂದರು.ಕೆಎಸ್ಎಂಸಿಎ ಭವನ ನಿರ್ಮಾಣ:ಸಂಸ್ಥೆಗೆ ವಿವಿಧ ಜಿಲ್ಲೆಗಳಲ್ಲಿ ಹಂಚಿಕೆ, ನೋಂದಣಿಯಾಗಿರುವ 12 ನಿವೇಶನಗಳಲ್ಲಿ ಕೆಎಸ್ಎಂಸಿಎ ಭವನ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಈ ಸಂಸ್ಥೆಗೆ ಕೆಐಎಡಿಬಿಯಿಂದಬೆಂಗಳೂರಿನಲ್ಲಿ ಹಂಚಿಕೆಯಾಗಿರುವ 1 ಎಕರೆಕೈಗಾರಿಕಾ ಭೂಮಿಲ್ಲಿ ಮುದ್ರಣ ಮತ್ತು ಐಟಿ,ಐಟಿಇಎಸ್ಚಟುವಟಿಕೆಯಕಾರ್ಯಯೋಜನೆ ಸಿದ್ಧಪಡಿಸಲಾಗುತ್ತಿದೆ ಎಂದರು.ಮಂಗಳೂರು ಶಾಖೆ 2009ರಲ್ಲಿ ಸ್ಥಾಪನೆಯಾಗಿದ್ದು, ಕಾವೂರಿನಲ್ಲಿಇಲ್ಲಿನ ಪ್ರಥಮ ಶಾಖೆಆರಂಭಿಸಲಾಗುತ್ತಿದೆಎಂದರು.ಸಂಸ್ಥೆಯಎಂಡಿ ಮೊಹಮ್ಮದ್ಅತಿಕುಲ್ಲಾ ಶರೀಫ್, ಡಿಜಿಎಂ ನಂದೀಶ್, ಶಾಖಾ ಪ್ರಬಂಧಕರಾಘವೇಂದ್ರ ಶಾಸ್ತ್ರಿ, ವಿಶೇಷಅಧಿಕಾರಿಅನುರಾಧಇದ್ದರು.

## ತೋಟಗಾರಿಕೆ ಬೆಳೆಗಳ ನಷ್ಟ ಪರಿಹಾರಕ್ಕೆ ರೈತರಿಂದ ಅರ್ಜಿಆಹ್ವಾನ

**ಚಿಕ್ಕಮಗಳೂರು:** ತಾಲ್ಲೂಕು ತೋಟಗಾರಿಕೆಇಲಾಖೆಯಿಂದ 2025-26ನೇ ಸಾಲಿನ ಬೆಳೆಗಳ ಬಿತ್ತನೆಯಿಂದಕಟಾವು ಹಂತದವರೆಗೆ ಸಂಭವಿಸುವ ಬೆಳೆನಷ್ಟಗಳಿಗೆ ಪರಿಹಾರಒದಗಿಸಲು ಅವಕಾಶ ಕಲಿಸಲಾಗಿದೆಎಂದುತೋಟಗಾರಿಕೆಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಕರ್ನಾಟಕರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ(ವಿಮಾ) ಯೋಜನೆಗಳಡಿ ಬೆಳೆಗಳಿಗೆ ನಷ್ಟ ಪರಿಹಾರಒದಗಿಸಲು ಸರ್ಕಾರ ಆದೇಶಿಸಿದೆ ಎಂದಿದ್ದಾರೆ.

ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಈ ವಿಮಾಯೋಜನೆಗೆ ನೋಂದಣಿ ಮಾಡಿಕೊಂಡುಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಮನವಿ ಮಾಡಿದ್ದಾರೆ.2025 ರ ಮುಂಗಾರು ಹಂಗಾಮಿನಲ್ಲಿ ವಿವಿಧ ಬೆಳೆಗಳಿಗೆ ಹೋಬಳಿ ಮಟ್ಟದಲ್ಲಿ ನಿಗಧಿಪಡಿಸಲಾಗಿರುವಅಧಿಸೂಚಿತ ಬೆಳೆಗಳು, ಇಂಡಿಮ್ನಿಟಿ ಮಟ್ಟ, ವಿಮಾ ಮೊತ್ತ ಮತ್ತು ವಿಮಾಕಂತಿನ ವಿವರಗಳನ್ನು ಓರಿಯಂಟಲ್ಜನರಲ್ಇನ್ಸೂರೆನ್ಸ್ ಕಂಪನಿ ಪ್ರತಿನಿಧಿ ಮೊಬೈಲ್ ಸಂಖ್ಯೆ-7019641384 ಇವರನ್ನು ಜು.15 ರೊಳಗೆ ಸಂಪರ್ಕಿಸಬಹುದಾಗಿದೆ.ಕಸಬಾ ಹೋಬಳಿ, ಲಕ್ಯಾ ಹೋಬಳಿ ಟೊಮ್ಯಾಟೋ, ಕಸಬಾ, ಅಂಬಳೆ ಹೋಬಳಿ ಮಳೆಯಾಶ್ರಿತ ಆಲೂಗಡ್ಡೆ ಬೆಳೆ, ಲಕ್ಯಾ ಹೋಬಳಿ ಮಳೆಯಾಶ್ರಿತ ಈರುಳ್ಳಿ ಬೆಳೆ ಹಾಗೂ ಎಲೆಕೋಸು ಈ ಬೆಳೆಗಳಿಗೆ ವಿಮಾ ಸೌಲಭ್ಯದ ಮೂಲಕ ಬೆಳೆನಷ್ಟ ಪರಿಹಾರವನ್ನು ನೀಡಲಾಗುವುದೆಂದು ತಿಳಿಸಿದ್ದಾರೆ. ಹೆಚ್ಚನ ಮಾಹಿತಿಗಾಗಿ ಹೋಬಳಿ ಮಟ್ಟದರೈತ ಸಂಪರ್ಕಕೇಂದ್ರದ ಸಹಾಯಕತೋಟಗಾರಿಕೆಅಧಿಕಾರಿ ನಟೇಶ್ಕುಮಾರ್, ಕಸಬಾ ಹೋಬಳಿ ಮೊಬೈಲ್ ಸಂಖ್ಯೆ-7899048055, ಗುರುರಾಜ್. ಎಸ್ ಸಹಾಯಕತೋಟಗಾರಿಕೆಅಧಿಕಾರಿ, ಲಕ್ಯಾ ಮತ್ತು ಅಂಬಳೆ ಹೋಬಳಿ ಮೊಬೈಲ್ ಸಂಖ್ಯೆ-7892338387 ಇವರುಗಳನ್ನು ಸಂಪರ್ಕಿಸಲುಕೋರಲಾಗಿದೆ.

## ಮೈಸೂರು ಯೋಗಾಸನ ಸ್ಪರ್ಧೆಗೆ 25 ಯೋಗ ಪಟುಗಳು ಭಾಗಿ



**ದಾವಣಗೆರೆ:** ಮೈಸೂರು ವಿಶ್ವವಿದ್ಯಾಲಯದ ಸಹಯೋಗದಲ್ಲಿ ಕರ್ನಾಟಕ ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆ ಮೈಸೂರಿನಲ್ಲಿ ಜೂ.29ರಂದು ನಡೆಯಲಿದ್ದು, ನಗರದ ಎಸ್ ಎ ಎಸ್ ಎಸ್ ಯೋಗ ಕೇಂದ್ರದ ಸಂಸ್ಥಾಪಕ, ಯೋಗ ಗುರು ಡಾ. ಎನ್. ಪರಶುರಾಮ್ ಮಾರ್ಗದರ್ಶನದಲ್ಲಿ 25 ಜನ ಯೋಗ ಪಟುಗಳು ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ.

ಈ ಹಿನ್ನೆಲೆಯಲ್ಲಿ ನರಗದ ಎಸ್ಎ ಎಸ್ ಎಸ್ ಯೋಗ ಕೇಂದ್ರದಲ್ಲಿ ಯೋಗ ಪಟುಗಳಿಗೆ ಶುಭ ಕೋರಲಾಯಿತು. ನಂತರ ಹಿರಿಯರಾದ ರುದ್ರಪ್ಪ, ನಮ್ಮ ಯೋಗ ಕೇಂದ್ರದ ವತಿಯಿಂದ ಎಲ್ಲಾ ವಿಭಾಗದಲ್ಲೂ ಪುರುಷರು ಮತ್ತು ಮಹಿಳೆಯರು ಮತ್ತು ಬಾಲಕ ಬಾಲಕಿಯರು ಭಾಗವಹಿಸುತ್ತಿದ್ದು, ಹೆಚ್ಚಿನ ಪರಿಶ್ರಮದಿಂದ ಅಭ್ಯಾಸ ಮಾಡಿದ್ದಾರೆ. ಅದೇ ರೀತಿ ಉತ್ತಮ ಯೋಗ ಪ್ರ ನಂತರದರ್ಶನ ಮಾಡುವ ಮೂಲಕ ಹೆಚ್ಚಿನ ಬಹುಮಾನ ಗೆಲ್ಲುವಂತೆ ಹಾರೈಸಿದರು.

ಈ ಸಂದರ್ಭದಲ್ಲಿ ಯೋಗ ಗುರು ಡಾ.ಎನ್.ಪರಶುರಾಮ್, ರಾಜಣ್ಣ, ಗೋಪಾಲಸ್ವಾಮಿ, ರಾಘವೇಂದ್ರ ಚೌಹಾಣ್, ಬಾತಿ ಶಂಕರ್, ಚಂದ್ರಣ್ಣ, ರೇಖಾ, ಪುಷ್ಪಲತಾ, ವಾಣಿಶ್ರೀ, ತಾರ ಮುಂತಾದವರು ಭಾಗವಹಿಸಿದ್ದರು.

## ಕಾಣೆಯಾಗಿದ್ದಾರೆ

**ಶಿವಮೊಗ್ಗ :** ನಗರದ ಹೊಸಮನೆ ಬಡಾವಣೆ ನಿವಾಸಿ ಅಶೋಕ್ ಕುಮಾರ್ (59) ಅವರು ದೊಡ್ಡಮ್ಮ ದೇವಸ್ಥಾನದ ಹತ್ತಿರ ವಾಸವಾಗಿದ್ದು ಕಳೆದ ನಾಲ್ಕು ದಿವಸದಿಂದ ಕಾಣೆಯಾಗಿದ್ದಾರೆ, ಇವರು ಪ್ರತಿನಿತ್ಯ ಸುತ್ತಮುತ್ತಲಿನ

ದೇವಸ್ಥಾನಕ್ಕೆ ಹೋಗಿ ಬರುವ ಅಭ್ಯಾಸವಿದ್ದು, ಕಾಣೆಯಾದ ದಿವಸ ಕೂಡ ದೇವಸ್ಥಾನ ಹೋಗಿ ಬರುವುದಾಗಿ ಹೇಳಿ ಹೋದವರು ಇಲ್ಲಿಯ ತನಕ ಬಂದಿರುವುದಿಲ್ಲ, ಇವರ ಚಹರೆ ವರ್ಷ 59, ಸುಮಾರು 5.5 ಅಡಿ ಎತ್ತರ, ತೆಳವಾದ ಮೈಕಟ್ಟುವ ಕೋಲು ಮುಖ, ಗೋದಿ ಮೈಬಣ್ಣ ಮರಾಠಿ ಹಾಗೂ ಕನ್ನಡ ಭಾಷೆಯನ್ನು ಮಾತನಾಡುತ್ತಾರೆ. ಹೋಗುವಾಗ ಬಿಳಿ ಬಣ್ಣದ ಶರ್ಟ್ ಹಾಗೂ ಕಪ್ಪು ಬಣ್ಣದ ಪ್ಯಾಂಟ್ನ್ನು ಧರಿಸಿದ್ದರು. ಇವರ ಸುಳಿವು ದೊರೆತಲ್ಲಿ, ಹತ್ತಿರದ ಪೊಲೀಸ್ ಠಾಣೆ ಅಥವಾ ಮೊ : 9019952800 ಸಂಖ್ಯೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದ್ದಾರೆ.

### ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಜಗಳೂರು

ಸಿ.ಆರ್ ಮಿಸ್. ನಂ: 398/2025

**ಅರ್ಜಿದಾರರು :** 1)ಶೀಮತಿ ಸಣ್ಣ ಕಾಟಮ್ಮ ಕೋಂ ಲೇಟ್ ಬಾಲಪ್ಪ ವಯಸ್ಸು 60 ವರ್ಷ 2)ಶ್ರೀ ಬಾಲಪ್ಪ ಬಿನ್ ಲೇಟ್ ಬಾಲಪ್ಪ ವಯಸ್ಸು 22 ವರ್ಷ3) ರಂಜಿತ ಬಿನ್ ಲೇಟ್ ಬಾಲಪ್ಪ, ವಯಸ್ಸು 21 ವರ್ಷ ಎಲ್ಲರೂ ಜಿರಾಯ್ತಿ ವಾಸ: ಅಣಬೂರು ಗೊಲ್ಲರಹಟ್ಟಿ ಗ್ರಾಮ, ಜಗಳೂರು ತಾಲ್ಲೂಕು. ದಾವಣಗೆರೆ ಜಿಲ್ಲೆ.

**ವಿರುದ್ಧ**

**ಎದುರುದಾರರು :** 1) ತಹಶೀಲ್ದಾರ್‌ರವರು
ತಾಲ್ಲೂಕು ಕಛೇರಿ ಜಗಳೂರು
ಜಗಳೂರುತಾಲ್ಲೂಕು

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣದಲ್ಲಿನ 1ನೇ ಅರ್ಜಿದಾರರ ಗಂಡ ಹಾಗೂ 2 ಮತ್ತು 3ನೇ ಅರ್ಜಿದಾರರ ತಂದೆಯವರಾದ ಬಾಲಪ್ಪ ಬಿನ್ ಬಾಲಪ್ಪ ಇವರು ದಿನಾಂಕ:23.04.2009ರಂದು ಜಗಳೂರು ತಾಲ್ಲೂಕು, ಅಣಬೂರು ಗೊಲ್ಲರಹಟ್ಟಿ ಗ್ರಾಮದ ಅರ್ಜಿದಾರರ ಮನೆಯಲ್ಲಿ ಮರಣ ಹೊಂದಿದ್ದು, ಸದರಿ ದಿನಾಂಕವನ್ನು ಎದುರುದಾರರು ಸಂಬಂಧಪಟ್ಟ ದಾಖಲೆಯಲ್ಲಿ ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಅರ್ಜಿದಾರರ ಅರ್ಜಿಯನ್ನು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ:01.08.2025ರಂದು ಬೆಳಿಗ್ಗೆ 11-00 ಗಂಟೆಗೆ ವಿಚಾರ-ಣಗೆ ನಿಗಧಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗಧಿತ ದಿನಾಂಕದ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ

**ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:28.06.2025ರಂದು ನೀಡಲಾಗಿದೆ.**

ನ್ಯಾಯಾಲಯದ ಆದೇಶದ ಮೇರೆಗೆ

| | |
|---|---|
| ಸಹಿ/-<br>ಅರ್ಜಿದಾರರ ಪರ ವಕೀಲರು<br>(ಹೆಚ್.ಪಿ ಮಲ್ಲಿಕಾರ್ಜುನ)<br>ವಕೀಲರು<br>ದಿನಾಂಕ: | ಸಹಿ/-<br>ಶಿರಸ್ತೇದಾರರು<br>ಸಿವಿಲ್ ಮತ್ತು ಜೆ.ಎಂ.ಎಫ್.ಸಿ.<br>ನ್ಯಾಯಾಲಯ,<br>ಜಗಳೂರು |

### ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಜಗಳೂರು

ಸಿ.ಆರ್ ಮಿಸ್. ನಂ: 397/2025

**ಅರ್ಜಿದಾರರು :** 1)ಶ್ರೀ ನೀಲಪ್ಪ ಬಿನ್ ಲೇಟ್ ಕರಿಹಾಲಪ್ಪ ವಯಸ್ಸು 37 ವರ್ಷ 2) ಶ್ರೀ ಚನ್ನಮಲ್ಲಪ್ಪ ಬಿನ್ ಲೇಟ್ ಕರಿಹಾಲಪ್ಪ ವಯಸ್ಸು 35 ವರ್ಷ 3)ಶ್ರೀ ಗುಡದಪ್ಪ ಬಿನ್ ಲೇಟ್ ಕರಿಹಾಲಪ್ಪ,ವಯಸ್ಸು 33 ವರ್ಷ
4)ಶ್ರೀ ಚಂದ್ರಪ್ಪ ಬಿನ್ ಲೇಟ್ ಕರಿಹಾಲಪ್ಪ, ವಯಸ್ಸು 33 ವರ್ಷ ಎಲ್ಲರೂ ಜಿರಾಯ್ತಿ ವಾಸ:ಅಣಬೂರು ಗೊಲ್ಲರಹಟ್ಟಿ ಗ್ರಾಮ ಜಗಳೂರು ತಾಲ್ಲೂಕು ದಾವಣಗೆರೆ ಜಿಲ್ಲೆ

**ವಿರುದ್ಧ**

**ಎದುರುದಾರರು :** 1) ತಹಶೀಲ್ದಾರ್‌ರವರು
ತಾಲ್ಲೂಕು ಕಛೇರಿ ಜಗಳೂರು
ಜಗಳೂರುತಾಲ್ಲೂಕು

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣದಲ್ಲಿ ನಂ1 ರಿಂದ 4ನೇ ಅರ್ಜಿದಾರರ ತಾಯಿಯವರಾದ ಶ್ರೀಮತಿ ಈರಮ್ಮ ಕೋಂ ಕರಿಮಲ್ಲಪ್ಪ ಇವರು ದಿನಾಂಕ:25.06.2006 ರಂದು ಜಗಳೂರು ತಾಲ್ಲೂಕು, ಅಣಬೂರು ಗೊಲ್ಲರಹಟ್ಟಿ ಗ್ರಾಮದ ಅರ್ಜಿದಾರರ ಮನೆಯಲ್ಲಿ ಮರಣ ಹೊಂದಿದ್ದು, ಸದರಿ ದಿನಾಂಕವನ್ನು ಎದುರುದಾರರು ಸಂಬಂಧಪಟ್ಟ ದಾಖಲೆಯಲ್ಲಿ ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ ಸದರಿ ಅರ್ಜಿದರರ ಅರ್ಜಿಯನ್ನು ಮಾನ್ಯ ಘನ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ:01.08.2025 ರಂದು ಬೆಳಿಗ್ಗೆ 11-00 ಗಂಟೆಗೆ ವಿಚಾರಣೆಗೆ ನಿಗಧಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರದಾದರೂ ತಕರಾರು ಇದ್ದಲ್ಲಿ ತಾವಾಗಲೀ ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗಧಿತ ದಿನಾಂಕದ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ.

**ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:28.06.2025ರಂದು ನೀಡಲಾಗಿದೆ.**

ನ್ಯಾಯಾಲಯದ ಆದೇಶದ ಮೇರೆಗೆ

| | |
|---|---|
| ಸಹಿ/-<br>ಅರ್ಜಿದಾರರ ಪರ ವಕೀಲರು<br>(ಹೆಚ್.ಪಿ ಮಲ್ಲಿಕಾರ್ಜುನ)<br>ವಕೀಲರು<br>ದಿನಾಂಕ: | ಸಹಿ/-<br>ಶಿರಸ್ತೇದಾರರು<br>ಸಿವಿಲ್ ಮತ್ತು ಜೆ.ಎಂ.ಎಫ್.ಸಿ.<br>ನ್ಯಾಯಾಲಯ,<br>ಜಗಳೂರು |

# ಬೆಳೆ ವಿಮೆ: ಮುಂಗಾರು ಹಂಗಾಮಿನ ನೋಂದಣಿಗೆ ಮನವಿ

**ಚಿಕ್ಕಮಗಳೂರು :** 2025–26ರ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ (ವಿಮಾ) ಯೋಜನೆಯನ್ನು ಅನುಷ್ಠಾನಗೊಳಿಸಿದ್ದು, ಪ್ರಕೃತಿ ವಿಕೋಪ ಹಾಗೂ ರೋಗ ಬಾಧೆಯಿಂದ ನಷ್ಟ ಪರಿಹಾರ ನೀಡಲು ಮುಂಗಾರು ಹಂಗಾಮಿನ ನೋಂದಣಿ ಕಾರ್ಯ ನಡೆಯುತ್ತಿದೆ.

ಮಳೆ ಅಭಾವದಿಂದ ಶೇ.75 ಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಬಿತ್ತನೆ ವಿಫಲಗೊಂಡಿದ್ದಲ್ಲಿ, ತೇವಾಂಶ ಕೊರತೆ, ತೀವ್ರ ಬರಗಾಲ, ಮುಳುಗಡೆ ಮುಂತಾದ ಸಮಸ್ಯೆಯಿಂದ ಬಿತ್ತನೆಯಾದ ನಂತರ ಕಟಾವಿಗೆ 15 ದಿನಗಳಿಗಿಂತ ಮೊದಲು ಬೆಳೆಹಾನಿಯಾದಲ್ಲಿ ಹಾಗೂ ಕಟಾವು ಮಾಡಿದ ನಂತರ ಎರಡು ವಾರಗಳೊಳಗೆ ಜಮೀನಿನಲ್ಲೇ ಒಣಗಲು ಬಿಟ್ಟಂತಹ ಬೆಳೆಯು ಚಂಡ ಮಾರುತ, ಅಕಾಲಿಕ ಮಳೆಯಿಂದಾಗಿ ನಾಶವಾದಲ್ಲಿ ವಿಮೆ ಭರಿಸಲಾಗುವುದು. ಬೆಳೆ ಸಾಲ ಪಡೆದ ಹಾಗೂ ಪಡೆಯದ ಎರಡೂ ವಿಭಾಗದ ರೈತರು ವಿಮೆ ಮಾಡಿಸಬಹುದು.

ಚಿಕ್ಕಮಗಳೂರು ಜಿಲ್ಲೆಗೆ ಓರಿಯಂಟಲ್ ಜನರಲ್ ಇನ್ಶ್ಯೂರೆನ್ಸ್ ಕಂಪನಿ ನಿಗದಿಯಾಗಿದ್ದು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಬೆಳೆವಿಮೆಗೆ ನೋಂದಾಯಿಸಿ ಪ್ರಯೋಜನ ಪಡೆದುಕೊಳ್ಳಬೇಕೆಂದು ಜಂಟಿ ಕೃಷಿ ನಿರ್ದೇಶಕರು ಕೋರಿದ್ದಾರೆ. ಬೆಳೆ ವಿಮೆ ನೋಂದಣಿಗೆ ಜಮೀನಿನ ಸರ್ವೇ ನಂಬರ್‌ಗಳು ಪೂಟ್ಸ್ ತಂತ್ರಾಂಶದಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಂಡಿರಬೇಕು. ರೈತರು ಪೂಟ್ಸ್ ಐಡಿ ದಾಖಲಿಸಲು ಅಥವಾ ಯಾವುದೇ ಮಾರ್ಪಾಡಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಬಹುದು ಎಂದು ಅವರು ತಿಳಿಸಿದ್ದಾರೆ.

ಈ ಯೋಜನೆಯಡಿ ಗ್ರಾಮ ಪಂಚಾಯಿತಿ ಮಟ್ಟ ಮತ್ತು ಹೋಬಳಿ ಮಟ್ಟಕ್ಕೆ ವಿವಿಧ ಬೆಳೆಗಳನ್ನು ಅಧಿಸೂಚಿಸಲಾಗಿದ್ದು, ವಿಮೆಗೆ ಅರ್ಹವಾದ ಬೆಳೆಗಳ ವಿವರ ಇಲ್ಲಿವೆ. ಉದ್ದು (ಮಳೆ ಆಶ್ರಿತ) ಪ್ರತೀ ಎಕರೆಗೆ ವಿಮಾ ಮೊತ್ತ ರೂ.13,254 ಹಾಗೂ ರೈತರು ಪ್ರತೀ ಎಕರೆಗೆ ಪಾವತಿಸಬೇಕಾದ ವಿಮಾ ಕಂತು ರೂ. 265 ಆಗಿದ್ದು, ಇದೇ ರೀತಿ ಉಳಿದ ಬೆಳೆಗಳ ಜೊತೆಗೆ ವಿಮಾ ಮೊತ್ತ ಹಾಗೂ ವಿಮಾ ಕಂತನ್ನು ಕ್ರಮವಾಗಿ ನಮೂದಿಸಲಾಗಿದೆ. ಹೆಸರು (ಮಳೆ ಆಶ್ರಿತ) ರೂ.13,457 ಹಾಗೂ ರೂ. 269, ಎಳ್ಳು (ಮಳೆ ಆಶ್ರಿತ) ರೂ.11,635 ಹಾಗೂ ರೂ. 233, ಈ ಬೆಳೆಗಳ ವಿಮಾ ನೋಂದಣಿಗೆ ಜೂನ್ 30 ಕೊನೆ ದಿನವಾಗಿದೆ.

ಆಲೂಗಡ್ಡೆ (ನೀರಾವರಿ) ರೂ.60,100 ಹಾಗೂ ರೂ. 3,005, ಆಲೂಗಡ್ಡೆ (ಮಳೆ ಆಶ್ರಿತ) 29,240 ಹಾಗೂ ರೂ.1,462, ಈರುಳ್ಳಿ (ಮಳೆ ಆಶ್ರಿತ) ರೂ.30,657 ಹಾಗೂ ರೂ.1,533, ಎಲೆಕೋಸು ರೂ.30,556 ಹಾಗೂ ರೂ.1,528, ಟೊಮ್ಯಾಟೋ ರೂ.57,267 ಹಾಗೂ ರೂ.2,863, ಇವುಗಳ ನೋಂದಣಿಗೆ ಜುಲೈ 15 ಕೊನೆಯ ದಿನವಾಗಿದೆ.

# ಗ್ಯಾರಂಟಿ ಯೋಜನೆ ಜಾರಿ ಬಳಿಕ ಜನರ ಜೀವನದಲ್ಲಿ ಸುಧಾರಣೆ: ಕೆ.ಎಸ್.ಆನಂದ್

**ಚಿಕ್ಕಮಗಳೂರು, ಜೂ.27:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಜಾರಿಯಾದ ಬಳಿಕ ಜನರ ಜೀವನ ಮಟ್ಟದಲ್ಲಿ ಬಹಳಷ್ಟು ಸುಧಾರಣೆಯಾಗಿದೆ. ಟೀಕೆಗಳ ನಡುವೆಯೂ ಈ ಯೋಜನೆಗಳು ಯಶಸ್ಸು ಕಂಡಿವೆ ಎಂದು ಶಾಸಕ ಕೆ.ಎಸ್.ಆನಂದ್ ಹೇಳಿದರು.



ಕಡೂರು ಪಟ್ಟಣದ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣದಲ್ಲಿ ಕೇಂದ್ರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಶ್ರಯದಲ್ಲಿ ಎರಡು ವರ್ಷಗಳ ಸಾಧನಾ ಸಂಭ್ರಮ ಪ್ರಗತಿಯತ್ತ ಕರ್ನಾಟಕ ಕುರಿತ ವಸ್ತು ಪ್ರದರ್ಶನವನ್ನು ಇಂದು ಬೆಳಿಗ್ಗೆ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರದ ಐದೂ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ಯಶಸ್ವಿ ಎರಡು ವರ್ಷಗಳು ಕಳೆದಿವೆ. ಈ ಯೋಜನೆಗಳು ಜನರಿಗೆ ಶಕ್ತಿಯನ್ನು ತುಂಬಿವೆ. ಅಭಿವೃದ್ಧಿ ಕಾರ್ಯದಲ್ಲೂ ನಮ್ಮ ಸರ್ಕಾರ ಹಿಂದೆ ಬಿದ್ದಿಲ್ಲ. ಆ ಯಶಸ್ಸಿನ ಬಗ್ಗೆ ವಾರ್ತಾ ಇಲಾಖೆಯ ಮೂಲಕ ಗ್ಯಾರಂಟಿಯ ಪ್ರಗತಿ ನೋಟವನ್ನು ವೀಕ್ಷಿಸಲು ಅನುವಾಗುವಂತೆ ಇದೀಗ ವಸ್ತು ಪ್ರದರ್ಶನವನ್ನು ಆಯೋಜಿಸಲಾಗಿದೆ ಎಂದರು.

ಶಕ್ತಿ ಯೋಜನೆಯಿಂದ ಮಹಿಳೆಯರು ನಿಗಮದ ಬಸ್‌ಗಳಲ್ಲಿ ಉಚಿತವಾಗಿ ಸಂಚರಿಸಲು ತುಂಬಾ ಅನುಕೂಲವಾಗಿದೆ. ಗೃಹಲಕ್ಷ್ಮೀ ಯೋಜನೆಯಿಂದ ಮಹಿಳೆಯರು ನೆಮ್ಮದಿಯಿಂದ ಸಂಸಾರ ನಡೆಸುತ್ತಿದ್ದಾರೆ. ಗೃಹಲಕ್ಷ್ಮೀ ಹಾಗೂ ಗೃಹಜ್ಯೋತಿ ಯೋಜನೆಗಳಿಂದ ಪ್ರತಿ ಕುಟುಂಬಗಳಿಗೆ ವಾರ್ಷಿಕ ತಲಾ ಸುಮಾರು 35 ಸಾವಿರ ರೂ. ಉಳಿತಾಯವಾಗುತ್ತಿದೆ. ಫಲಾನುಭವಿಗಳು ಈ ಸಂತಸವನ್ನು ಹಂಚಿಕೊಳ್ಳುತ್ತಿದ್ದಾರೆ ಎಂದರು.

ಭದ್ರಾ ಕಾಡಾ ಅಧ್ಯಕ್ಷ ಡಾ.ಕೆ.ಪಿ.ಅಂಶುಮಂತ್ ಅವರು ಮಾತನಾಡಿ, ರಾಜ್ಯ ಸರ್ಕಾರವು ನುಡಿದಂತೆ ನಡೆದಿದ್ದು, ಎರಡು ವರ್ಷಗಳಲ್ಲಿ ನೀಡಿದ ಎಲ್ಲ ಭರವಸೆಗಳನ್ನು ಈಡೇರಿಸಿದೆ. ಕೇವಲ ಗ್ಯಾರಂಟಿ ಯೋಜನೆಗೆ ಸೀಮಿತವಾಗದೆ ಜನರ ಬದುಕಿಗೆ ಪೂರಕವಾಗಿ ಸಮಾಜದಲ್ಲಿ ಸುಧಾರಣೆ ತರುವಂತಹ ಕಾರ್ಯಕ್ರಮಗಳನ್ನು ಕೈಗೊಂಡಿದೆ ಎಂದು ಬಣ್ಣಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಗ್ಯಾರಂಟಿ ಯೋಜನೆಗಳ ಕೈಪಿಡಿಯನ್ನು ಬಿಡುಗಡೆ ಮಾಡಿದರು. ವಸ್ತುಪ್ರದರ್ಶನದಲ್ಲಿ ಸರ್ಕಾರದ ಸಾಧನೆಗಳ ವಿವರ, ಫಲಾನುಭವಿಗಳ ಅನಿಸಿಕೆಗಳು, ಗ್ಯಾರಂಟಿ ಯೋಜನೆಗಳ ವಿವರವನ್ನು ಅನಾವರಣ ಮಾಡಲಾಗಿತ್ತು.

ಕಡೂರು ಪುರಸಭೆಯ ಅಧ್ಯಕ್ಷ ಭಂಡಾರಿ ಶ್ರೀನಿವಾಸ್, ಕಡೂರು ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಆಸಂದಿ ಕಲ್ಲೇಶ್, ಜಿಲ್ಲಾ ಕೆಡಿಪಿ ಸದಸ್ಯ ಗುಮ್ಮನಹಳ್ಳಿ ಅಶೋಕ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಹೇಮಾವತಿ, ಸದಸ್ಯರುಗಳಾದ ಪುಷ್ಪಾ ರಮೇಶ್, ಸುಜಾತ ಚಂದ್ರಶೇಖರ್, ತಾ.ಪಂ. ಮಾಜಿ ಅಧ್ಯಕ್ಷ ದಾಸಯ್ಯನಗುತ್ತಿ ಚಂದ್ರಪ್ಪ, ಪುರಸಭಾ ಸದಸ್ಯ ಕೃಷ್ಣಪ್ಪ ಮತ್ತಿತರರು ಭಾಗವಹಿಸಿದ್ದರು.

# ಹನಿ ಹನಿ ನೀರನ್ನು ಸಂಗ್ರಹಿಸಿ ಇಟ್ಟುಕೊಂಡು ಬಳಸುವ ಜಾಣ್ಮೆ ಸಾರ್ವಜನಿಕರಲ್ಲಿ ಬರಬೇಕು

**ಚಿತ್ರದುರ್ಗ :** ಹನಿ ಹನಿ ನೀರನ್ನು ಸಂಗ್ರಹಿಸಿ ಇಟ್ಟುಕೊಂಡು, ಬಳಸುವ ಜಾಣ್ಮೆಯು ಸಾರ್ವಜನಿಕರಲ್ಲಿ ಬಂದಾಗ ಮಾತ್ರ ಪರಿಸರದ ಬಗ್ಗೆ ಕಾಳಜಿ ಇದೆ ಎಂಬುದು ಸಾಕ್ಷ್ಯಾಧಾರಗಳು ದೊರಕುತ್ತದೆ. ಮಿತವ್ಯವಾಗಿ ನೀರನ್ನು ಬಳಕೆ ಮಾಡಿ, ಪರಿಸರದ ಮೇಲೆ ಬೀಳುವ ಒತ್ತಡವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಯೋಚಿಸುವಂತಾಗಬೇಕು, ವ್ಯರ್ಥವಾಗಿ ಹರಿದು ಹೋಗುವ ನೀರನ್ನು ಸಂಗ್ರಹಿಸಿ ಇಟ್ಟುಕೊಂಡು, ಬಳಕೆ ಮಾಡುವಷ್ಟು ಜಾಣ್ಮೆ ನಾಗರಿಕರಲ್ಲಿ ಜಾಗೃತಗೊಂಡರೆ, ಪರಿಸರ ನಿರ್ವಹಣೆ ಸುಲಭವಾಗುತ್ತದೆ ಎಂದು ಕರ್ನಾಟಕ ಜ್ಞಾನ–ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಸ್ವಾಮಿ ಅವರು ಕರೆ ನೀಡಿದ್ದಾರೆ.

ಅವರು ಚಿತ್ರದುರ್ಗ ನಗರದ ಸ್ಟೇಡಿಯಂ ರಸ್ತೆಯಲ್ಲಿ, ರಸ್ತೆ ಬದಿಯಲ್ಲಿ ಹಾಕಿರುವ ಬೋರ್ವೆಲ್ನಿಂದ ಹನಿ ಹನಿ ನೀರು ಸಹ ವ್ಯರ್ಥವಾಗುವುದನ್ನು ಬಕೆಟ್ಗಳಲ್ಲಿ ಸಂಗ್ರಹಿಸಿ ಇಟ್ಟುಕೊಂಡು, ಜನರು ಬಳಕೆ ಮಾಡುತ್ತಿರುವ ಜಾಣ್ಮೆಯನ್ನು ಮೆಚ್ಚಿ, ಜನರಲ್ಲಿ ನೀರಿನ ಮಿತವ್ಯದ ಬಗ್ಗೆ ಜಾಗೃತಗೊಳಿಸುತ್ತಿದ್ದರು.

ಪ್ರತಿಯೊಂದರಲ್ಲೂ ಸಹ ಮಿತವ್ಯಯ ಮತ್ತು ಮರುಬಳಕೆಯ ಬಗ್ಗೆ ಜನರಲ್ಲಿ ವೈಜ್ಞಾನಿಕ ಪರಿಜ್ಞಾನವನ್ನ ತುಂಬಿರಬೇಕು, ಶಿಕ್ಷಣದಲ್ಲೆ ಮಕ್ಕಳಿದ್ದಾಗಲೇ ಅವರಿಗೆ ನೈಸರ್ಗಿಕ ಸಂಪನ್ಮೂಲಗಳನ್ನ ಮಿತವಾಗಿ ಬಳಕೆ ಮಾಡಿ, ಸರಳವಾದ ಜೀವನವನ್ನು ಅಳವಡಿಸಿಕೊಂಡರೆ, ಪರಿಸರದಲ್ಲಿ ಎಲ್ಲರಿಗೂ ಸಾಕಾಗುವಷ್ಟು ವಸ್ತುಗಳು ಸೌಲಭ್ಯಗಳು ದೊರಕುತ್ತವೆ ಎಂದರು.

ನಿಸರ್ಗ ನೀಡುವ ಹಲವಾರು ವಸ್ತುಗಳನ್ನು ನಾವು ಯಥೇಚ್ಛವಾಗಿ, ಮನಸಾ ಇಚ್ಛೆ ಬಳಕೆ ಮಾಡಿ, ಅವುಗಳನ್ನು ದುರ್ಬಳಕೆ ಮಾಡುತ್ತಿರುವುದರಿಂದ, ಸಾಕಷ್ಟು ಜನರಿಗೆ ಆ ವಸ್ತುಗಳು ಕೊರತೆ ಉಂಟಾಗಿ ನರಳುವಂತಾಗುತ್ತದೆ, ಹಾಗಾಗಿ ಯಾರಲ್ಲಿ ಯಾವ ವಸ್ತುಗಳು ಹೆಚ್ಚು ಸಂಗ್ರಹವಾಗಿರುತ್ತದೆಯೋ ಅವರು ಮಿತ ಬಳಕೆ ಮಾಡಿ, ಇನ್ನಿತರಿಗೆ ಹಂಚುವ ಪದ್ಧತಿಯನ್ನು ಅಳವಡಿಸಿಕೊಂಡರೆ, ಪರಿಸರದಲ್ಲಿ ಸಮತೋಲನ ಕಾಯ್ದುಕೊಳ್ಳುತ್ತದೆ ಎಂದರು.



ಬೇಸಿಗೆ ಕಾಲದಲ್ಲಿ ನೀರಿಲ್ಲ ನೀರಿಲ್ಲ ಎಂದು ಪರಿತಪಿಸುವ ಜನರು, ಮನೆಯ ಮುಂದೆ ನಲ್ಲಿಯಲ್ಲಿ ಯಥೇಚ್ಛವಾಗಿ ನೀರು ಹರಿದು ಹೋಗುತ್ತಿದ್ದರೂ ಸಹ, ಯಾರು ಗಮನ ಹರಿಸದೆ ಇರುವುದರಿಂದ, ನೀರು ಸರಬರಾಜು ಮಾಡುವವರ ಮೇಲೆ ಒತ್ತಡ ಬೀಳುತ್ತಾ ಹೋಗುತ್ತದೆ, ಹಾಗಾಗಿ ಹರಿಯುವ ನೀರನ್ನ ಸಂಗ್ರಹಿಸಿ ಇಟ್ಟುಕೊಂಡು, ಅದನ್ನು ಬಳಕೆ ಮಾಡುವಷ್ಟು ಜನರಲ್ಲಿ ಜಾಗೃತಿ ಮೂಡಿಸಬೇಕಾಗಿದೆ ಎಂದರು.

ಹನಿ ನೀರಾವರಿ ಮುಖಾಂತರ ಕೃಷಿ ಚಟುವಟಿಕೆಯಲ್ಲಿ ನೀರು ಉಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ, ಇಸ್ರೇಲ್ ನಲ್ಲಿ ಹನಿ ಹನಿ ನೀರನ್ನು ಸಂಗ್ರಹಿಸಿ ಇಟ್ಟುಕೊಂಡಿ ವ್ಯವಸಾಯ ಮಾಡುತ್ತಾರೆ, ಬರಗಾಲದಲ್ಲೂ ಸಹ ರೈತರನ್ನು ಕಾಪಾಡಿಕೊಳ್ಳಲು ಈ ಹನಿ ನೀರಾವರಿ ಸಹಾಯಕವಾಗುತ್ತದೆ, ಡ್ಯಾಮ್ ನಲ್ಲಿರುವ ಹನಿ ಹನಿ ನೀರಿಗೂ ಸಹ ಲೆಕ್ಕ ತೆಗೆದುಕೊಳ್ಳಬೇಕಾಗುತ್ತದೆ, ಹಾಗಾಗಿ ಜನರು ಎಲ್ಲೇ ಒಂದು ಹನಿ ನೀರು ಸಹ ವ್ಯರ್ಥವಾಗದಂತೆ ಸಂಗ್ರಹಿಸಿ ಇಟ್ಟು–ಕೊಂಡು, ಅದರಿಂದ ಕೈತೋಟಗಳ ನಿರ್ವಹಣೆ ಅಥವಾ ಸ್ವಚ್ಛತಾ ಕಾರ್ಯಕ್ರಮಗಳಿಗೆ, ವಾಹನ ತೊಳೆಯುವುದಕ್ಕೆ, ಬಟ್ಟೆ ತೊಳೆಯುವುದಕ್ಕೆ ಮುಂತಾದ ಕೆಲಸಗಳಿಗೆ ಮರುಬಳಕೆ ಮಾಡಿಕೊಂಡರೆ, ಪರಿಸರದಲ್ಲಿ ಸಿಗುವ ವಸ್ತುಗಳಿಗೆ ಬೆಲೆ ನೀಡಿದಂತಾಗುತ್ತದೆ ಎಂದರು.

ರೂ. 20 ಕೊಟ್ಟು ಕುಡಿಯುವ ನೀರನ್ನು ಕೊಂಡುಕೊಳ್ಳುತ್ತಿರುವ ಜನರಿಗೆ, ಕುಡಿಯುವ ನೀರು ಯಥೇಚ್ಛವಾಗಿ ವ್ಯರ್ಥವಾಗುತ್ತಿದ್ದು, ಸಿಹಿ ನೀರು ಸಹ ಹರಿದು ಹೋಗುತ್ತಿದೆ, ನಾವು ಯಾವುದೇ ಭಾವನೆಗಳಿಲ್ಲದಂತೆ ಬದುಕು ಸಾಗಿಸುತ್ತಿದ್ದೇವೆ, ಇವುಗಳ ಬಗ್ಗೆ ಗಮನಹರಿಸಿ ಅವುಗಳ ನಿಯಂತ್ರಣದ ಬಗ್ಗೆ ಯೋಚಿಸಿ, ಕಾರ್ಯಯೋನ್ಮುಖರಾಗಲು ಸಾರ್ವಜನಿಕರಲ್ಲಿ ವಿನಂತಿಸಿಕೊಂಡರು.

ನೀರು ಸಂಗ್ರಹ ಮಾಡಲು ಇಡುವ ಬಕೆಟ್ ಗಳನ್ನೇ, ಪ್ಲಾಸ್ಟಿಕ್ ವಸ್ತುಗಳನ್ನು ಕಳ್ಳತನ ಮಾಡುವ ಈಗಿನ ಕಾಲದಲ್ಲಿ, ರಸ್ತೆ ಬದಿಯಲ್ಲಿ ಕನಿಷ್ಠ ಪಕ್ಷ ಎರಡು ಬಕೆಟ್ಗಳಲ್ಲಿ ನೀರು ಸಂಗ್ರಹ ಮಾಡುತ್ತಿರುವ ದೃಶ್ಯ ಆಶ್ಚರ್ಯ ತರುವಂತಿದೆ, ಹಾಗಾಗಿ ಯಾವುದಾದರೂ ವಸ್ತುಗಳನ್ನ ಕಳ್ಳತನ ಮಾಡುವುದಕ್ಕಿಂತ ಮುಂಚೆ ಯಾವುದಕ್ಕೆ ಬಳಕೆ ಮಾಡುತ್ತಿದ್ದಾರೆ ಎಂದು ಯೋಚಿಸಿ ಸಹಕರಿಸಿದರೆ ಮಾತ್ರ ಜನರು ರಸ್ತೆಗಳಲ್ಲಿ ಧೈರ್ಯವಾಗಿ ಬಕೆಟ್ ಗಳನ್ನು ಇಟ್ಟು, ನೀರು ಸಂಗ್ರಹ ಮಾಡಿಕೊಳ್ಳುತ್ತಾರೆ ಎಂದು ವಿನಂತಿಸಿಕೊಂಡಿದ್ದಾರೆ.

ಸೋರುತ್ತಿರುವ ನಲ್ಲಿ ನೀರಿನ ಪೈಪ್ಗಳನ್ನ ನಗರಸಭೆಯವರು ಸೂಕ್ತವಾಗಿ ರಿಪೇರಿ ಮಾಡಿ, ನೀರಿನ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕೆಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ವಿದ್ಯಾರ್ಜನೆ ಪೂರೈಸಿ ನಿಗದಿತ ಗುರಿ ತಲುಪುವುದೇ ಜಾಣತನ : ನ್ಯಾ. ವಿ.ಹನುಮಂತಪ್ಪ

**ಚಿಕ್ಕಮಗಳೂರು:** ಹರೆಯದ ವಯಸ್ಸಿನಲ್ಲಿ ವಿದ್ಯಾರ್ಥಿಗಳು ಆರೋಗ್ಯವನ್ನು ಹದಗೆಡಿಸುವ ಚಟ ಹಾಗೂ ಪ್ರೀತಿ–ಪ್ರೇಮದಂತ ಆಕರ್ಷಣೆ ಸಹಜ. ಬದಲಾಗಿ ಕಲಿಕೆಯ ವಯಸ್ಸಿನಲ್ಲಿ ವಿದ್ಯಾರ್ಜನೆ ಪೂರೈಸಿ ನಿಗಧಿತ ಗುರಿ ತಲುಪುವುದೇ ಜಾಣತನ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನ್ಯಾಯಾಧೀಶ ವಿ.ಹನುಮಂತಪ್ಪ ಹೇಳಿದರು.

ನಗರದ ಆದಿಚುಂಚನಗಿರಿ ಬಡಾವಣೆಯ ಬಿಜಿಎಸ್ ಶಾಲಾವರಣದಲ್ಲಿ ಬಿಜಿಎಸ್ ಸಮೂಹ ಸಂಸ್ಥೆಗಳು, ಶ್ರೀ ಶಕ್ತಿ ಅಯೋಸಿಯೇಷನ್ ಐ.ಆರ್.ಸಿ.ಎ ಸಹಯೋಗದಲ್ಲಿ ಏರ್ಪಡಿಸಿದ್ದ ಅಂತರಾಷ್ಟ್ರೀಯ ಮದ್ಯವ್ಯಸನ ಮತ್ತು ಮಾದಕ ವಸ್ತು ವಿರೋಧಿ ದಿನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇತ್ತೀಚೆಗೆ ನಶೆ ಪದಾರ್ಥಗಳು ಅತಿಹೆಚ್ಚು ವೇಗದಲ್ಲಿ ಯುವಸಮೂಹವನ್ನು ಆವರಿಸುತ್ತಿದೆ. ಧೂಮಪಾನ, ಮದ್ಯಸೇವನೆ, ಗಾಂಜಾ, ಹಫೀಮು ಆರಂಭದಲ್ಲಿ ಖುಷಿಕೊಟ್ಟರೂ ಕಾಲ ಕಳೆಯದಂತೆ ಶರೀರದ ಅಂಗಾಂಗಗಳನ್ನು ಹಂತ ಹಂತವಾಗಿ ಹಾಳುಮಾಡುತ್ತವೆ. ಈ ಬಗ್ಗೆ ಇಂದಿನಿಂದಲೇ ವಿದ್ಯಾರ್ಥಿಗಳು ದುರಾಭ್ಯಾಸ ಚಟಗಳಿಗೆ ದಾಸರಾಗದೇ ವಿದ್ಯಾಭ್ಯಾಸದ ಕಡೆಗೆ ಹೆಚ್ಚು ಒಲವು ಹೊಂದಬೇಕು ಎಂದರು.

ಮಾದಕವಸ್ತು ಸೇವಿಸಿದರೆ ಸಾವು ಸಂಭವಿಸಲಿದೆ ಎಂಬ ಎಚ್ಚರಿಕೆ ಗಂಟೆ ನೀಡಿದರೂ ಜನಸಾಮಾನ್ಯರು ಅಲ್ಲಗೆಳೆಯುತ್ತಾರೆ. ಇದರಿಂದ ಕರುಳು, ಸಣ್ಣಕರುಳು, ಜಠರ, ಹೃದಯದಲ್ಲಿ ಸಣ್ಣಸಣ್ಣ ರಂಧ್ರಗಳಾಗಿ ಆರೋಗ್ಯ ಸಂಪತ್ತು ಕ್ಷೀಣಿಸುತ್ತದೆ. ಹೀಗಾಗಿ ಕಾಯಿಲೆಗಳು ಬರುವ ಮುನ್ನವೇ ಎಚ್ಚೆತ್ತುಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಹೇಳಿದರು.

ಆ ನಿಟ್ಟಿನಲ್ಲಿ ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲು ಕಾರ್ಯಕ್ರಮ ರೂಪಿಸುತ್ತಿರುವುದು ಹೆಮ್ಮೆಯ ಸಂಗತಿ. ಬಾಲ್ಯಾವಸ್ಥೆಯಲ್ಲೇ ಅರಿವಿನ ಜ್ಞಾನ ತುಂಬಿದರೆ ಯೌವ್ವನದಲ್ಲಿ ಪರಿವರ್ತನೆಗೊಳ್ಳಲು ಸಾಧ್ಯ. ಇದೀಗ ಪ್ರತಿ ಮನೆಗಳಲ್ಲಿ ಮೊಬೈಲ್ ಎಂಬ ಮಾದಕವಸ್ತು ಹೆಚ್ಚಳಗೊಂಡು ಭವಿಷ್ಯದ ಮಕ್ಕಳನ್ನು ಹಾಳುಮಾಡುತ್ತಿರುವುದು ದುರ್ದೈವ ಎಂದರು.

ಆಧುನಿಕತೆ ಜಗತ್ತಿನಲ್ಲಿ ಮಕ್ಕಳು ಸಿನಿತಾರೆಯನ್ನು ನಿಜವಾದ ಹಿರೋಗಳೆಂದು ಬಿಂಬಿಸಿಕೊಳ್ಳುತ್ತಿದೆ. ನಟರಿಗೆ ನೀವ್ಯಾರು ತಿಳಿದಿಲ್ಲ. ನಿಮಗೆ ನಟರ ಪರಿಚಯವಿದೆ. ಕೇಸಿನ ಪ್ರಕರಣಗಳಲ್ಲಿ ಸಿಲುಕಿರುವ ನಟರು ನಿಜವಾದ ಹೀರೋಗಳಲ್ಲ. ನಿಮ್ಮ ಭವಿಷ್ಯವನ್ನು ಸುಂದರವಾಗಿ ರೂಪಿಸುವ ಪಾಲಕರು ಮತ್ತು ಶಿಕ್ಷಕರೇ ನಿಜವಾದ ಹೀರೋಗಳೆಂದು ಭಾವಿಸಬೇಕು ಎಂದರು.

ಯೌವ್ವನದಲ್ಲಿ ಪ್ರೀತಿ–ಪ್ರೇಮ ಕೇವಲ ಆಕರ್ಷಣೆಯಷ್ಟೇ. ಓದುವ ವಯಸ್ಸಿನಲ್ಲಿ ಹಳಿ ತಪ್ಪಿದರೆ ಇಡೀ ಬದುಕೇ ನರಕವಾಗುತ್ತದೆ. ಒಂದು ವೇಳೆ ಆಚಾತುರ್ಯ ಸಂಭವಿಸಿದರೆ ಪಾಲಕರು ಬೆಂಬಲಿಸುವುದಿಲ್ಲ, ಮತ್ತೊಂದೆಡೆ ಪ್ರೀತಿಸಿದ ಹುಡುಗ ದ್ರೋಹವೆಸಗಿದರೆ ಬದುಕು ಸಾವಿಗಿಂತ ಕಡೆ. ಹೀಗಾಗಿ ಮಕ್ಕಳು ನಿಮ್ಮ ಗುರಿಯನ್ನು ಪೂರೈಸಿದ ನಂತರ ಆಸಕ್ತಿ ತೋರಬೇಕು ಎಂದರು.



ನಗರ ಠಾಣೆ ಇನ್ಸ್‌ಪೆಕ್ಟರ್ ಅಭಯ್ ಪ್ರಕಾಶ್ ಮಾತನಾಡಿ, ಮಾದಕ ದ್ರವ್ಯಗಳ ಸೇವಿಸುವ ಮನುಷ್ಯನನ್ನು ಸಮಾಜ ನೋಡುವ ದೃಷ್ಟಿಯೇ ಬೇರೆ. ಸದಾಕಾಲ ನಶೆ ಪದಾರ್ಥಗಳಿಂದ ಶಾರೀರಿಕ ಹಾಗೂ ಮಾನಸಿಕ ಸ್ತಿಮಿತತೆ ಕಳೆದುಕೊಂಡು ಜೀವನವೇ ದುಸ್ತರವಾಗಲಿದೆ. ಈ ಹಾವಳಿ ಕಾಲೇಜುಗಳಲ್ಲಿ ಧಾವಿಸುತ್ತಿವೆ. ಹೀಗಾಗಿ ಇಂತಹ ಮಾಹಿತಿಗಳನ್ನು ಮಕ್ಕಳು ನೀಡುವ ಮೂಲಕ ಸಮಾಜದ ಒಳಿತಿಗೆ ಶ್ರಮಿಸಬೇಕು ಎಂದು ಹೇಳಿದರು.

ಭಾರತೀಯ ಸಂಸ್ಕೃತಿ ವಿಶೇಷತನದಿದ ಕೂಡಿ–ದೆ. ಮಕ್ಕಳು ಸಂಸ್ಕಾರವಂತರಾಗಿ ಬದುಕುವುದನ್ನು ರೂಢಿಸಿಕೊಳ್ಳಬೇಕು. ಭವಿಷ್ಯದ ಪ್ರಜೆಗಳು ಶ್ರೇಷ್ಠ ಪ್ರಜೆಗಳಾಗುವುದೇ ಹಿರಿಯರ ಆಶಯ. ಹಾಗಾಗಿ ಸರಿ–ತಪ್ಪಿನ ಅರಿವು ತಿಳಿದಿರುವ ವಿದ್ಯಾರ್ಥಿಗಳು ಮಾನಸಿಕವಾಗಿ ಗಟ್ಟಿಯಾಗಬೇಕು ಎಂದು ತಿಳಿಸಿದರು.

ಶ್ರೀ ಶಕ್ತಿ ಅಸೋಸಿಯೇಷನ್ ಯೋಜನಾ ನಿರ್ದೇಶಕ ಡಾ. ಕೆ.ಎ. ಅನೀತ್‌ಕುಮಾರ್ ಮಾತನಾಡಿ, ಕಳೆದ ಇಪ್ಪತ್ತೈದು ವರ್ಷಗಳಿಂದ ಅಸೋಸಿಯೇಷನ್ ಮದ್ಯವ್ಯಸನಿಗಳ ದಾಸರಾಗಿರುವ ವ್ಯಕ್ತಿಗಳಿಗೆ ಸಮಗ್ರ ಚಿಕಿತ್ಸೆಯನ್ನು ನೀಡುವ ಮೂಲಕ ಸುಮಾರು 5 ಸಾವಿರಕ್ಕೂ ಹೆಚ್ಚು ಮದ್ಯವ್ಯಸನಿಗಳನ್ನು ಗುಣಮುಖರಾಗಿಸಿ ಸಾತ್ವಿಕ ಜೀವನಕ್ಕೆ ದಾರಿ ಮಾಡಕೊಡಲಾಗಿದೆ ಎಂದು ಹೇಳಿದರು.


ಈ ಸಂದರ್ಭದಲ್ಲಿ ಬ್ರಹ್ಮಕುಮಾರೀಸ್ ಸಂಸ್ಥೆ ಜಿಲ್ಲಾ ಸಂಚಾಲಕಿ ಭಾಗ್ಯ, ವಿಕಲಚೇತನರ ಕಲ್ಯಾಣಾಧಿಕಾರಿ ಎಂ. ವೀರಭದ್ರಯ್ಯ, ಶ್ರೀ ಶಕ್ತಿ ಅಸೋಸಿಯೇಷನ್‌ನ ವ್ಯವಸ್ಥಾಪಕ ಮಂಜುನಾಥ್, ಬಿಜಿಎಸ್ ಪಿಯು ಕಾಲೇಜು ಪ್ರಾಂಶುಪಾಲ ಜೆ.ಜಿ. ಸುರೇಂದ್ರ, ಪ್ರೌಢಶಾಲೆ ಮುಖ್ಯೋಪಾಧ್ಯಾಯ ಜಿ.ಆರ್. ಚಂದ್ರಶೇಖರ್, ಅಸೋಸಿಯೇಷನ್ ಕಾರ್ಯದರ್ಶಿ ವಿ.ಎಂ.ಶಶಿಕುಮಾರ್, ಶಾಲಾ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಲಬುರಗಿಯಲ್ಲಿ ಬೆಚ್ಚಿ ಬೀಳಿಸುವ ಘಟನೆ, ಅಮಾನುಷವಾಗಿ ಕೊಚ್ಚಿ ಮೂವರ ಕೊಲೆ

**ಕಲಬುರಗಿ:** ಕಲಬುರಗಿಯಲ್ಲಿ ಬೆಚ್ಚಿ ಬೀಳಿಸುವ ಘಟನೆಯೊಂದು ನಡೆದಿದ್ದು, ಏಕಕಾಲಕ್ಕೆ ಮಾರಕಾಸ್ತ್ರಗಳಿಂದ ಕೊಚ್ಚಿ ಮೂವರನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ನಡೆದಿದೆ. ಕಲಬುರಗಿ ನಗರದ ಹೊರವಲಯದ ಪಟ್ನಾ ಗ್ರಾಮದ ಬಳಿ ಮಾರಕಾಸ್ತ್ರಗಳಿಂದ ಕೊಚ್ಚಿ ಮೂವರನ್ನು ಭೀಕರವಾಗಿ ಕೊಲೆ ಮಾಡಲಾಗಿದೆ. ಸಿದ್ಧಾರೂಢ (32), ಜಗದೀಶ (25), ರಾಮಚಂದ್ರ (35) ಎಂಬವರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಲಾಗಿದೆ. ಕೊಲೆಯಾದ ಮೂವರು ವ್ಯಕ್ತಿಗಳು ಸಂಬಂಧಿಕರಾಗಿದ್ದಾರೆ.

ಹಳೆ ವೈಷಮ್ಯದಿಂದ ಮೂವರನ್ನು ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಈ ಮೂವರೂ ಒಂದು ಢಾಬಾದಲ್ಲಿ ಕೆಲಸ ಮಾಡುತ್ತಿದ್ದರು. ದುಷ್ಕರ್ಮಿಗಳು ಆ ಢಾಬಾಗೇ ನುಗ್ಗಿ ಮಾರಕಾಸ್ತ್ರಗಳಿಂದ ಕೊಚ್ಚಿ ಪರಾರಿಯಾಗಿದ್ದಾರೆ. ಸ್ಥಳಕ್ಕೆ ಸಬ್ ಅರ್ಬನ್ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸಿಸಿ ಟಿವಿ ದೃಶ್ಯಾವಳಿ ಆಧರಿಸಿ ಆರೋಪಿಗಳನ್ನು ಹಿಡಿಯಲು ಪೊಲೀಸರು ಬಲೆ ಬೀಸಿದ್ದಾರೆ.

# ವಿದ್ಯಾರ್ಥಿಗಳನ್ನು ಸತ್ಪ್ರಜೆಗಳಾಗಿ ರೂಪಿಸುವ ಜವಾಬ್ದಾರಿ ಶಿಕ್ಷಕರದ್ದು : ತಿಪ್ಪೇರುದ್ರಪ್ಪ



**ಚಿಕ್ಕಮಗಳೂರು:** ವಿದ್ಯಾರ್ಥಿಗಳನ್ನು ಭವ್ಯ ಭಾರತದ ಸತ್ಪ್ರಜೆಗಳಾಗಿ ರೂಪಿಸಿ ಸಮಾಜದ ಒಂದು ಹಂತಕ್ಕೆ ಕೊಂಡೊಯ್ಯುವ ಮಹತ್ತರ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ಸಾಹಿತಿ ಬಿ. ತಿಪ್ಪೇರುದ್ರಪ್ಪ ಹೇಳಿದರು.

ಕಡೂರು ತಾಲ್ಲೂಕಿನ ಎಸ್. ಕೋಡಿಹಳ್ಳಿ ವಾಸಿಯಾದ ಚಂದ್ರಪ್ಪನವರು ಜ್ಯೂನಿಯರ್ ಕಾಲೇಜು ಉಪನ್ಯಾಸ ವೃತ್ತಿಯಿಂದ ನಿವೃತ್ತರಾದ ಹಿನ್ನೆಲೆಯಲ್ಲಿ ಸ್ನೇಹಿತರು ಮನೆಗೆ ಭೇಟಿನೀಡಿ ಗೌರವ ಸಮರ್ಪಿಸಿದರು.

ಸಾವಿರಾರು ಮಕ್ಕಳನ್ನು ತಮ್ಮ ಅನುಭವ, ಆದ್ಯತೆ, ವಿಷಯಾಧಾರಿತ, ಬೋಧನೆ ನೀಡಿ, ತಿದ್ದಿ, ಶೈಕ್ಷಣಿಕ ಹಾಗೂ ಶೈಕ್ಷಣಿಕೇತರವಾಗಿ ಸಂಸ್ಕಾರ ತುಂಬುವ ಜೊತೆಗೆ ಪರಿಸರದ ಕಾಳಜಿ, ಶಿಸ್ತು, ಸಂಯಮ ಮೂಡಿಸುವುದು ಶಿಕ್ಷಕರ ಮತ್ತು ಉಪನ್ಯಾಸಕರ ಮೂಲ ಧ್ಯೇಯವಾಗಬೇಕು ಎಂದರು.

ಇತ್ತೀಚೆಗೆ ಸರ್ಕಾರಿ ಶಾಲಾ–ಕಾಲೇಜುಗಲ್ಲಿ ಮಕ್ಕಳ ದಾಖಲಾತಿ ಕ್ಷೀಣಿಸುತ್ತಿದ್ದು, ಇದಕ್ಕೆ ಮೂಲ ಕಾರಣ ಪಾಲಕರ ಆಂಗ್ಲ ಭಾಷೆಯ ವ್ಯಾಮೋಹವಾಗಿದೆ. ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಗಣನೀಯವಾಗಿ ದಾಖಲಾತಿ ಕಡಿಮೆಯಾಗುವುದರ ಮೂಲಕ ಸರ್ಕಾರಿ ಶಾಲೆಗಳು ಮುಚ್ಚುತ್ತಿದ್ದು ಪಾಲಕರು ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಿ ಶಾಲೆಗಳನ್ನು ಉಳಿಸಬೇಕಿದೆ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪತ್ರಕರ್ತ ರಮೇಶ್ ನಾರಿನಿಂಗಜ್ಜಿ, ಶಿಕ್ಷಕರಾದ ಶಿವಮೂರ್ತಿ, ಗಂಗಾಧರಪ್ಪ ಇದ್ದರು.

# ಬಿ.ಹೆಚ್. ರಸ್ತೆಯಲ್ಲಿ ಕನಕದಾಸರ ಪ್ರತಿಮೆ ಸ್ಥಾಪಿಸಲು ಶಾಸಕ ಶ್ರೀನಿವಾಸ್ ಭರವಸೆ

**ತರೀಕೆರೆ :** ಪಟ್ಟಣದ ಬಿ.ಹೆಚ್.ರಸ್ತೆಯಲ್ಲಿ ಸರ್ವಸಮ್ಮತ ಸ್ಥಳದಲ್ಲಿ ಶ್ರೀ ಕನಕದಾಸರ ಪ್ರತಿಮೆ ಸ್ಥಾಪಿಸಲಾಗುವುದು ಎಂದು ಶಾಸಕ ಜಿ.ಹೆಚ್. ಶ್ರೀನಿವಾಸ್ ಹೇಳಿದರು.



ಅವರು ಶ್ರೀ ಗುರು ರೇವಣಸಿದ್ದೇಶ್ವರ ಕುರುಬ ಸಮಾಜ ವತಿಯಿಂದ ಪಟ್ಟಣದ ಶ್ರೀ ಗುರು ರೇವಣಸಿದ್ದೇಶ್ವರ ರುದ್ರಭೂಮಿಯಲ್ಲಿ ಪ್ರತಿಷ್ಠಾಪಿಸಲಾದ ಶ್ರೀ ಸತ್ಯಹರಿಶ್ಚಂದ್ರ ಪ್ರತಿಮೆ ಮತ್ತು ಗುರುವಿನ ಮನೆ ಉದ್ಘಾಟಿಸಿ ಮಾತನಾಡುತ್ತಿದ್ದರು.

ಶ್ರೀ ಸತ್ಯಹರಿಶ್ಚಂದ್ರ ಚಕ್ರವರ್ತಿ ಸ್ಮಶಾನ ಕಾದಿದ್ದು ಇತಿಹಾಸ ಇದೆ. ಸರ್ವರ ಸಹಕಾರದಿಂದ ಶ್ರೀ ಗುರು ರೇವಣಸಿದ್ದೇಶ್ವರ ರುದ್ರಭೂಮಿಯಲ್ಲಿ ಶ್ರೀ ಸತ್ಯ ಹರಿಶ್ಚಂದ್ರ ಪ್ರತಿಮೆ ಸ್ಥಾಪಿಸಿರುವುದು ಸಂತೋಷ ತಂದಿದೆ. ಕುರುಬ ಸಮಾಜ ಬಹಳ ದೊಡ್ಡ ಸಮಾಜವಾಗಿದ್ದು, ಪ್ರತಿ ವರ್ಷ ಶ್ರೀ ಗುರು ರೇವಣಸಿದ್ದೇಶ್ವರಸ್ವಾಮಿಯವರ ತೇರು, ಉತ್ಸವ ನಡೆಸಲು ತೇರು ನಿರ್ಮಾಣವಾಗುತ್ತಿರುವುದು ಸಂತೋಷ ತಂದಿದೆ ಎಂದು ಅವರು ಹೇಳಿದರು.

ಪುರಸಭೆ ಸದಸ್ಯ ಟಿ.ಎಂ. ಬೋಜರಾಜ್ ಮಾತನಾಡಿ, ಶ್ರೀ ಗುರು ರೇವಣಸಿದ್ದೇಶ್ವರ ರುದ್ರಭೂಮಿಯಲ್ಲಿ ಶ್ರೀ ಸತ್ಯ ಹರಿಶ್ಚಂದ್ರ ಪ್ರತಿಮೆ ಅನಾವರಣ ಮಾಡಿರುವುದು ಎಲ್ಲರಿಗೂ ಸಂತೋಷ ತಂದಿದೆ. ಶ್ರೀ ಸತ್ಯಹರಿಶ್ಚಂದ್ರ ನುಡಿದಂತೆ ನಡೆದ ಮಹಾನ್ ಮಾನವತಾವಾದಿ. ಸತ್ಯ ಮತ್ತು ನ್ಯಾಯವನ್ನು ಎತ್ತಿಹಿಡಿದರು. ಸತ್ಯಕ್ಕಾಗಿ ಸಾಮ್ರಾಜ್ಯವನ್ನೇ ತ್ಯಜಿಸಿದರು. ಎಂತಹ ಕಷ್ಟಗಳು ಬಂದರೂ ಎದೆಗುಂದದೆ ಸತ್ಯದ ಹಾದಿಯಲ್ಲಿ ನಡೆದರು. ಇಂತಹ ಪುಣ್ಯಪುರುಷನ ಪ್ರತಿಮೆ ಅನಾವರಣವಾಗುತ್ತಿರುವುದು ಎಲ್ಲರಿಗೂ ಸಂತೋಷ ತಂದಿದೆ ಎಂದು ಅವರು ಹೇಳಿದರು. ಶ್ರೀ ಗುರು ರೇವಣಸಿದ್ದೇಶ್ವರ ಕುರುಬ ಸಮಾಜ ಅಧ್ಯಕ್ಷರು ಟಿ.ಎಸ್. ರಮೇಶ್ ಅವರು ಮಾತನಾಡಿ, ಎಲ್ಲಾ ಬಳಗದವರ ಸಹಕಾರ ಪಡೆದು ಶ್ರೀ ಸತ್ಯಹರಿಶ್ಚಂದ್ರರ ಪ್ರತಿಮೆ ಸ್ಥಾಪಿಸಲಾಗಿದೆ. ಶ್ರೀ ಸತ್ಯಹರಿಶ್ಚಂದ್ರರು ಧರ್ಮದ ಹಾದಿಯಲ್ಲಿ ಸತ್ಯದ ಹಾದಿಯಲ್ಲಿ ನಡೆದ ಮಹಾನ್ ಚೇತನ. ಶಾಸಕ ಜಿ.ಹೆಚ್. ಶ್ರೀನಿವಾಸ್ ಅವರು ಪ್ರತಿಮೆ ಸ್ಥಾಪನೆಗೆ ನೆರವು ನೀಡಿದ್ದಾರೆ ಎಂದು ತಿಳಿಸಿದ ಅವರು, ಪ್ರತಿಮೆ ಸ್ಥಾಪನೆಗೆ ಸಹಕರಿಸಿದ ಸರ್ವರಿಗೂ ಕೃತಜ್ಞತೆಗಳನ್ನು ಸಲ್ಲಿಸಿದರು.

ಮುಖಂಡರಾದ ಟಿ.ಆರ್. ಇಂದ್ರಯ್ಯ, ರಂಗಪ್ಪ, ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರಯ್ಯ ಅವರು ಮಾತನಾಡಿದರು. ಪುರಸಭೆ ಸದಸ್ಯ ಚೇತನ್ ಕುಮಾರ್, ಮುಖಂಡರಾದ ಗೋವಿಂದಪ್ಪ, ರೇವಣ್ಣ, ಟಿ.ಎನ್. ಶಿವಣ್ಣ, ಟಿ.ಎನ್. ಕುಮಾರಸ್ವಾಮಿ, ಟಿ.ಜಿ. ಹರೀಶ್, ಎಸ್.ಆರ್.ಎಸ್. ರಾಮು, ಟಿ.ಡಿ. ರವಿಕುಮಾರ್, ಪ್ರಸನ್ನಕುಮಾರ್, ಎಸ್. ರವಿ, ಗೋವಿಂದಣ್ಣ, ಮಲ್ಲಿಕಣ್ಣ, ಟಿ.ಎಂ. ಹರೀಶ್, ಮಧು, ನವೀನ್ ಒಡೆಯರ್ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಅನಾದಿಕಾಲದಿಂದಲೇ ಮಹಿಳೆಯರು ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ : ಡಾ. ಉಮಾದೇವಿ



**ಮಹಿಳಾ ಕವಿಯತ್ರಿಯರ ಧ್ವನಿ ಹಾಗೂ ಹೆಜ್ಜೆ ಗುರುತಿಸಿ ಈ ವೇದಿಕೆ ಸಾಕ್ಷಿಯಾಗಬೇಕು. ಈ ಸಮ್ಮೇಳನ ಮಹಿಳಾ ಸಾಹಿತ್ಯ ಪ್ರೇಮಿಗಳಿಗೆ ಹೊಸದಾರಿಯಾಗುವ ಜೊತೆಗೆ ಶಾಲೆಗಳಲ್ಲಿ ಪುಟ್ಟ ಹೆಣ್ಣುಮಕ್ಕಳ ಸಾಹಿತ್ಯದ ಆಸಕ್ತಿ ಬೆಳೆಸುವಂಥ ಕಾರ್ಯಕ್ರಮ ಹಮ್ಮಿಕೊಳ್ಳಲಿ.**
**-ಹೆಚ್.ಡಿ. ತಮ್ಮಯ್ಯ**

**ಚಿಕ್ಕಮಗಳೂರು:** ಮಹಿಳೆಯರ ಸಾಹಿತ್ಯ ಕ್ಷೇತ್ರದ ಸಾಧನೆ ನಿನ್ನೆ-ಮೊನ್ನೆಯಿಂದಲ್ಲ, ಹತ್ತನೇ ಶತಮಾನದಿಂದಲೇ ಜಾನಪದ ಗೀತೆಗಳ ಮೂಲಕ ಸಾಹಿತ್ಯಕ್ಷೇತ್ರಕ್ಕೆ ಮಹಿಳಾ ಮಣಿಯರು ತಮ್ಮದೇ ಶೈಲಿಯಲ್ಲಿ ಕೊಡುಗೆ ನೀಡಿದ್ದಾರೆ ಎಂದು ಮೈಸೂರು ವಿಶ್ರಾಂತ ಸಹ ಪ್ರಾಧ್ಯಾಪಕಿ ಡಾ. ಎಸ್.ಪಿ.ಉಮಾದೇವಿ ಪುತ್ತೂರು ಹೇಳಿದರು.

ನಗರದ ಕುವೆಂಪು ಕಲಾಮಂದಿರದಲ್ಲಿ ನಡೆದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಮಹಿಳಾ ಘಟಕದ ಪ್ರಪ್ರಥಮ ಸಮ್ಮೇಳನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದಿನಿಂದಲೇ ಮಹಿಳೆಯರು ಜಾನಪದ ಗೀತೆಗಳನ್ನು ಕಟ್ಟಿ ಬೆಳೆಸಿದ ಪರಿಣಾಮ ವಿಶ್ವಮಾನ್ಯದಲ್ಲಿ ಮನ್ನಣೆ ಗಳಿಸಿ ಕನ್ನಡ ಸಾಹಿತ್ಯಕ್ಕೆ ವಿಶೇಷ ಸ್ಥಾನಮಾನ ಸಿಕ್ಕಿದೆ. ಇಂದು ಕನ್ನಡಭಾಷೆಗೆ ಇರುವಂಥ ಜೀವಂತಿಕೆ ಬೇರೆ ಯಾವುದೇ ಭಾಷೆಗೆ ದೊರೆತಿಲ್ಲ. ಹಿರಿಯರ ಜಾನಪದವು ಜನವಾಣಿ, ಕವಿವಾಣಿಯಾಗಿ ಇಂದು ಸುಗಂಧಭರಿತ ಹೂವಾಗಿ ಎಲ್ಲೆಡೆ ಹಬ್ಬಿಕೊಂಡಿದೆ ಎಂದರು.

ಪುರುಷರಂತೆಯೇ ಹೆಣ್ಣು ಸಾಹಿತ್ಯ ಲೋಕದಲ್ಲಿ ಹಿಂದೆ ಬಿದ್ದಿಲ್ಲ. ಜೀವನದ ನೋವುನಲಿವು, ಬದುಕಿನ ಬವಣೆ, ಕರುಣಾಜನಕ ಸ್ಥಿತಿಗತಿಯನ್ನು ಉಕ್ಕಿ ಹರಿಸಿ ಬರವಣಿಗೆ ಮುಖೇನಾ ಪುಸ್ತಕಗಳನ್ನು ರಚಿಸಿ ಸಮಾಜದ ಮುಂದಿಟ್ಟು ಸಾಧನೆ ಮಾಡಲು ಸಾಹಿತ್ಯಕ್ಷೇತ್ರ ಸ್ಫೂರ್ತಿ ನೀಡಿದೆ ಎಂದು ಹೇಳಿದರು.

ಹನ್ನೆರಡನೇ ಶತಮಾನದಲ್ಲಿ ಹಲವಾರು ವಚನಗಾರ್ತಿಯರು ಕನ್ನಡದಲ್ಲಿ ವಚನಗಳನ್ನು ರಚಿಸಿ ಒಂದು ಚಳವಳಿಯನ್ನೇ ನಡೆಸಿದರು. ಮಹಿಳೆಯರು ತಮ್ಮ ಸಾಹಿತ್ಯದಲ್ಲಿ ಸಮಾಜದ ಬಗ್ಗೆ ಗಂಭೀರವಾಗಿ ಚಿಂತನೆ ನಡೆಸಿ, ಸಾಹಿತ್ಯ ರಚಿಸತೊಡಗಿದ್ದನ್ನು ಕೆಲವು ಹಂತಗಳಲ್ಲಿ ಗುರುತಿಸಲಾಗಿದ್ದು, ಸಾಹಿತ್ಯ ಎಂದಿಗೂ ಒಂದು ಸಮಾಜಕ್ಕೆ ಸೀಮಿತಗೊಳ್ಳದೇ ಪ್ರತಿ ಜನಾಂಗದಲ್ಲೂ ಹುಟ್ಟಿಕೊಂಡಿತು ಎಂದರು.

ಇತಿಹಾಸ ಚರಿತ್ರೆಗಳ ಪುಟಗಳಲ್ಲಿ ಸಂಚಿಹೊನ್ನಮ್ಮ, ಶೃಂಗಾರಮ್ಮ, ತಿರುಮಲಾಂಬ, ಅಕ್ಕಮಹಾದೇವಿ ಸೇರಿದಂತೆ ಅನೇಕ ಮಹಾನ್ ವಚನಗಾರ್ತಿಯರು ಸಾಹಿತ್ಯಕ್ಕೆ ಕೊಡುಗೆ ನೀಡಿದರು. ಕಾಲಕಳೆಯದಂತೆ ಆಧುನಿಕತೆ ಜಗತ್ತಿನಲ್ಲಿ ಬಹಳಷ್ಟು ಕವಿಯತ್ರಿಯರು ಉದಯಿಸಿ ವಿಶಿಷ್ಟ ಹಾಗೂ ವಿಭಿನ್ನ ಶೈಲಿಯಲ್ಲಿ ಕಥೆ, ಕವನಗಳನ್ನು ರಚಿಸಿ ಸಾಹಿತ್ಯ ಲೋಕಕ್ಕೆ ತಮ್ಮದೇಯಾದ ಕೊಡುಗೆ ನೀಡುತ್ತಿದ್ದಾರೆ ಎಂದರು.

# ಸಾಹಿತ್ಯ ಸಮ್ಮೇಳನ ನಿತ್ಯ ನಿರಂತರ ಚಿಂತನೆಯ ದಾರಿ :



**ಚಿಕ್ಕಮಗಳೂರು:** ಸಾಹಿತ್ಯ ಸಮ್ಮೇಳನ ಕೇವಲ ನುಡಿಜಾತ್ರೆಯಲ್ಲ. ನಿತ್ಯ ನಿರಂತರ ಮಹಿಳೆಯರಿಗೆ ಚಿಂತನೆಯ ದಾರಿಯಾಗಬೇಕು. ನಮ್ಮಿಂದ ಈ ಸಮಾಜಕ್ಕೆ ಒಳ್ಳೆದಾಗುವ ಬಗೆ ಹಾಗೂ ಯಾವ ದಾರಿಯಲ್ಲಿ ನಡೆಯಬೇಕು ಎಂಬುದರ ಬಗ್ಗೆ ಚರ್ಚಿಸಬೇಕು ಎಂದು ಸಮ್ಮೇಳನಾಧ್ಯಕ್ಷೆ ಲಕ್ಷ್ಮೀ ಶ್ಯಾಮರಾವ್ ತಿಳಿಸಿದರು.

ನಗರದ ಕುವೆಂಪು ಕಲಾಮಂದಿರದಲ್ಲಿ ನಡೆದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಮಹಿಳಾ ಘಟಕದ ಪ್ರಪ್ರಥಮ ಸಮ್ಮೇಳನ ಕಾರ್ಯಕ್ರಮದ ಅಧ್ಯಕ್ಷರಾಗಿ ಅವರು ಮಾತನಾಡಿದರು.

ಗೃಹಿಣಿ ಗೃಹ ಮುಚ್ಚತೆ ಎಂಬ ಮಾತಿನಂತೆ ವೃತ್ತಿನಿರತ ಮಹಿಳೆಯರು ಮನೆಯ ನಿರ್ವಹಣೆ ಮಾಡುತ್ತಾ ಇರುವ ಸಮಯವನ್ನೆ ದಿಟ್ಟತನದಿಂದ ಸಾಧನೆ ಮಾಡುವ ಮಹಿಳೆಯರು ಸಾಧಿಸಲು ಹೊರಟ ಮಹಿಳೆಯರು ಇಂದು ಭಾರತದ ಉದ್ದಗಲಕ್ಕೂ ಇದ್ದಾರೆನ್ನುವುದು ಸತ್ಯವಾಗಿದೆ ಎಂದರು.

ಪ್ರಾಚೀನ ಕಾಲದಿಂದಲೂ ಇಲ್ಲಿ ಮಹಿಳೆಯರು ಸ್ಥಾನಮಾನಕ್ಕೆ ಅಡ್ಡಿ ಆತಂಕಗಳು ಇದ್ದೇ ಇವೆ. ಮಹಿಳೆಯರ ಹಾದಿ ಅಷ್ಟೇನು ಸುಗಮ ಹಾದಿಯಲ್ಲ ಎಂದರು.

# ತಿಗಡ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ



**ತರೀಕೆರೆ:** ತಾಲ್ಲೂಕಿನ ತಿಗಡ ಗ್ರಾಮ ಪಂಚಾಯಿತಿಯ ಅನೇಕ ಗ್ರಾಮಗಳಲ್ಲಿ ಬೀದಿನಾಯಿಗಳ ಹಾವಳಿ ಮಿತಿಮೀರಿ ಹೋಗಿದ್ದು, ಈ ನಾಯಿಗಳ ಉಪಟಳದಿಂದ ಶಾಲಾ ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರುಗಳು ರೋಸಿಹೋಗಿದ್ದು, ರಸ್ತೆಗಳಲ್ಲಿ ನಡೆದಾಡುವವರೆನ್ನೆಲ್ಲ ಬೀದಿನಾಯಿಗಳು ಅಟ್ಟಾಡಿಸಿಕೊಂಡು ಕಚ್ಚಿ ಗಾಯಗೊಳಿಸಿ ಆಸ್ಪತ್ರೆಗಳಿಗೆ ದಾಖಲಾಗುವಂತೆ ಮಾಡುತ್ತಿವೆ ಎಂದು ಜೈಪುರ ಗ್ರಾಮಸ್ಥರು ಆರೋಪಿಸಿದ್ದಾರೆ.

**ಗ್ರಾಮ ಪಂಚಾಯಿತಿಯ ಜನ ಪ್ರತಿನಿಧಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇತ್ತ ಗಮನ ಹರಿಸಿ ಬೀದಿನಾಯಿಗಳನ್ನು ಸ್ಥಳಾಂತರ ಮಾಡಬೇಕು. ಇಲ್ಲವೇ ಸಂತಾನ ಹರಣ ಚಿಕಿತ್ಸೆಯನ್ನಾದರೂ ಮಾಡಬೇಕೆಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ.**

ರಸ್ತೆಗಳಲ್ಲಿ ಸಾಗುವ ದ್ವಿಚಕ್ರ ವಾಹನಗಳ ಹಿಂದೆಯೇ ಬೊಗಳುತ್ತಾ ಓಡಿಸಿಕೊಂಡು ಹೋಗುವ ನಾಯಿಗಳಿಂದ ರಕ್ಷಿಸಿಕೊಳ್ಳುವ ಬರಾಟೆಯಲ್ಲಿ ಅನೇಕ ದ್ವಿಚಕ್ರ ವಾಹನ ಸವಾರರುಗಳು ಗಾಬರಿಯಿಂದ ಆಯಾತಪ್ಪಿ ನೆಲಕ್ಕುರುಳಿ ಅನೇಕ ಅಪಘಾತಗಳುಂಟಾಗುತ್ತಿರುವುದಲ್ಲದೇ, ಕಾರು, ಬಸ್ಸು, ಲಾರಿಗಳ ಹಾರನ್ ಶಬ್ದ ಕೇಳಿದೊಡನೆ ಕೂಗಲು ಪ್ರಾರಂಭಿಸುವ ಬೀದಿನಾಯಿಗಳ ಹಿಂಡು ನಂತರ 15 ರಿಂದ 20 ನಿಮಿಷಗಳವರೆಗೂ ಬೊಗಳುತ್ತಾ ಶಬ್ದ ಮಾಡುತ್ತಿರುವುದಲ್ಲದೇ ವಿವಿಧ ಸಾಕುಪ್ರಾಣಿಗಳು ಕಚ್ಚಿ ಗಾಯಗೊಳಿಸುತ್ತಿರುವುದರಿಂದ ಗ್ರಾಮಸ್ಥರು ಬೀದಿನಾಯಿಗಳ ಕಾಟದಿಂದ ಬೇಸತ್ತು ಹೋಗಿದ್ದಾರೆ.

# ಧ್ವಜಾರೋಹಣ ನೆರವೇರಿಸುವ ಮೂಲಕ ಸಮ್ಮೇಳನಕ್ಕೆ ಚಾಲನೆ

**ಚಿಕ್ಕಮಗಳೂರು:** ನಾಡಿನ ಪರಂಪರೆಯನ್ನು ಪ್ರತಿಬಿಂಬಿಸುವ ನಿಟ್ಟಿನಲ್ಲಿ ಪ್ರಪಥಮ ಮಹಿಳಾ ಘಟಕದ ಸಮ್ಮೇಳನ ಜಿಲ್ಲೆಯ ಮಹಿಳಾ ಲೇಖಕಿಯರು, ಬರಹಗಾರರಿಗೆ ವಿಶೇಷವಾಗಲಿದೆ ಎಂದು ಕಸಾಪ ಸ್ವಾಗತ ಸಮಿತಿ ಅಧ್ಯಕ್ಷೆ ರೇಖಾ ಹುಲಿಯಪ್ಪಗೌಡ ಹೇಳಿದರು.

ನಗರದ ಕುವೆಂಪು ಕಲಾಮಂದಿರದಲ್ಲಿ ಏರ್ಪಡಿಸಲಾಗಿದ್ದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಥಮ ಮಹಿಳಾ ಸಮ್ಮೇಳನ ಕಾರ್ಯಕ್ರಮದ ಧ್ವಜಾರೋಹಣ ನೆರವೇರಿಸುವ ಮೂಲಕ ಕಾರ್ಯಕ್ರಮಕ್ಕೆ ಅದ್ದೂರಿ ಚಾಲನೆ ನೀಡಿ ಅವರು ಮಾತನಾಡಿದರು.

ನಾಡಿನ ಸಂಸ್ಕೃತಿಯಲ್ಲಿ ಪರಿಷತ್ ಅಥವಾ ಸರ್ಕಾರಿ ಕಾರ್ಯಕ್ರಮಗಳಲ್ಲಿ ರಾಷ್ಟ್ರ, ನಾಡು



ಹಾಗೂ ಪರಿಷತ್ತಿನ ಧ್ವಜಾರೋಹಣ ನೆರವೇರಿಸುವುದು ಸಂಪ್ರದಾಯವಾಗಿದೆ. ವಿಶೇಷವಾಗಿ ರಾಷ್ಟ್ರ ಧ್ವಜಾರೋಹಣಕ್ಕೆ ಅವಕಾಶ ನೀಡಿರುವುದು ಹೆಮ್ಮೆಯಿದೆ ಎಂದ ಅವರು, ಈ ಸಮ್ಮೇಳನದ ಕಾರ್ಯಕ್ರಮವು ಅತ್ಯಂತ ಯಶಸ್ವಿಯಾಗಲಿದೆ ಎಂದು ಆಶಾಭಾವ ವ್ಯಕ್ತಪಡಿಸಿದರು.

ರಾಜ್ಯದಲ್ಲೇ ಪ್ರಪ್ರಥಮ ಬಾರಿಗೆ ಜಿಲ್ಲಾ ಕೇಂದ್ರದಲ್ಲಿ ಮಹಿಳಾ ಸಮ್ಮೇಳನ ನಡೆಯುತ್ತಿರುವುದು ಮಹಿಳಾ ಲೇಖಕಿಯರು, ಸಾಹಿತ್ಯಾಸಕ್ತರಿಗೆ ಹುರುಪು ತಂದಿದೆ. ಜಿಲ್ಲೆಯ ವಿವಿಧ ಭಾಗಗಳಿಂದ ಸಾಹಿತ್ಯ ಪ್ರೇಮಿಗಳು ಹಾಗೂ ಪರಿಷತ್ ಸದಸ್ಯರು ಕುಟುಂಬ ಸಮೇತರಾಗಿ ಸಮ್ಮೇಳನದಲ್ಲಿ ಭಾಗವಹಿಸುತ್ತಿರುವುದು ವಿಶೇಷವಾಗಿದೆ ಎಂದು ತಿಳಿಸಿದರು.

**ನಗರದ ಆಜಾದ್‌ಪಾರ್ಕ್‌ನಿಂದ ಸಮ್ಮೇಳನಾಧ್ಯಕ್ಷೆ ಲಕ್ಷ್ಮೀಶ್ಯಾಮಾರಾವ್ ಅವರನ್ನು ವೀರಗಾಸೆ, ಚಟ್ಟಿಮೇಳ, ಕರಡಿ ಕುಣಿತ, ಭರತನಾಟ್ಯ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳೊಂದಿಗೆ ಕಸಾಪ ಮಹಿಳಾ ಘಟಕದ ಪದಾಧಿಕಾರಿಗಳು ನಾಡಿನ ಸಂಪ್ರದಾಯದಂತೆ ಕಳಸಹೊತ್ತುಕೊಂಡು ಸಮ್ಮೇಳನಾಧ್ಯಕ್ಷರನ್ನು ವಿಜೃಂಭಣೆಯಿಂದ ಕಲಾಮಂದಿರಕ್ಕೆ ಕರೆತಂದರು. ಸಮ್ಮೇಳನಾಧ್ಯಕ್ಷರ ಮೆರವಣಿಯುದ್ದಕ್ಕೂ ಮಹಿಳಾ ಸಾಹಿತ್ಯಾಸಕ್ತರು, ಪುರುಷರು ಹಾಗೂ ಸಾರ್ವಜನಿಕರು ಕನ್ನಡಶಾಲು ಧರಿಸಿಕೊಂಡು ಪ್ರಪ್ರಥಮ ಸಮ್ಮೇಳನಕ್ಕೆ ಅತ್ಯಂತ ಸಂಭ್ರಮದಿಂದ ಕುಣಿದು ಕುಪ್ಪಳಿಸಿದರು. ಪುಟಾಣಿ ಮಕ್ಕಳ ಭರತನಾಟ್ಯವು ನೋಡುಗರ ಹೆಚ್ಚು ಗಮನ ಸೆಳೆಯಿತು. ವಿಶೇಷವಾಗಿ ಕನ್ನಡ ಸೇನೆಯಿಂದ ಹತ್ತಾರು ಆಟೋಗಳು ನಾಡಿನ ಧ್ವಜದಿಂದ ಶೃಂಗರಿಸಿ ಮೆರವಣಿಗೆಯಲ್ಲಿ ಸಾಗಿದವು.**

ಪರಿಷತ್ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಕಸಾಪ ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ಕನ್ನಡ ಸಮೃದ್ಧ ಭಾಷೆ. ಸರಳ ಹಾಗೂ ಸುಲಭವಾಗಿ ಪ್ರತಿಯೊಬ್ಬರು ಬಳಸಬಹುದಾದ ಭಾಷೆಯಾಗಿದೆ. ಕನ್ನಡಿಗರ ಸ್ವಾಭಿಮಾನಕ್ಕೆ ಪ್ರತೀಕವಾಗಿದೆ. ದೇಶ-ವಿದೇಶಗಳಲ್ಲಿ ತೆರಳಿದರೂ ಮಾತೃಭಾಷಾ ಸೊಗಡನ್ನು ಮರೆಯದೇ ಪ್ರೀತಿಯಿಂದ ಅಪ್ಪುತ್ತಿದ್ದಾರೆ ಎಂದರು.



**ತರೀಕೆರೆ ಪಟ್ಟಣದ ಬನಶಂಕರಿ ದೇವಸ್ಥಾನದ ಬಳಿ ಕೂಲಿಕಾರ್ಮಿಕರೊಂದಿಗೆ ಇದ್ದ ಮಕ್ಕಳನ್ನು ಉಪವಿಭಾಗಾಧಿಕಾರಿ ಕೆ.ಜೆ. ಕಾಂತರಾಜ್ ಮತ್ತು ತಾಲ್ಲೂಕು ಆಡಳಿತದ ಸಹಾಯದಿಂದ ಪೊಲೀಸ್ ಅಧಿಕಾರಿಗಳ ಸಹಾಯದೊಂದಿಗೆ ರಕ್ಷಿಸಿ, ಕಾನೂನು ಕ್ರಮವಹಿಸಿ ಮಕ್ಕಳನ್ನು ಅವರ ಸ್ವಂತ ಊರಿಗೆ ಕಳಿಸಲಾಯಿತು ಎಂದು ಶಿಶು ಅಭಿವೃದ್ಧಿ ಅಧಿಕಾರಿ ಚರಣ್‌ರಾಜ್ ತಿಳಿಸಿದ್ದಾರೆ.**

# ಧರ್ಮ-ಪ್ರಕೃತಿ ನಡುವೆ ಅವಿನಾಭಾವ ಸಂಬಂಧ: ರಂಭಾಪುರಿ ಶ್ರೀ

**ಚಿಕ್ಕಮಗಳೂರು:** ಆರೋಗ್ಯಯುಕ್ತ ಪರಿಸರ ನಿರ್ಮಾಣ ಇಂದಿನ ಅಗತ್ಯ. ಪ್ರಕೃತಿ ಹಾಗೂ ಮಾನವರ ನಡುವಿನ ಬಾಂಧವ್ಯ ಬೆಸೆಯುವಲ್ಲಿ ಪಂಚಪೀಠಗಳು ಅನಾದಿ ಕಾಲದಿಂದಲೂ ಆಸಕ್ತಿವಹಿಸಿವೆ ಎಂದು ಬಾಳೆಹೊನ್ನೂರಿನ ಶ್ರೀಮದ್ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಿಸಿದರು.

ಮಾಧ್ಯಮ ಸಂಸ್ಕೃತಿ ಪ್ರತಿಷ್ಠಾನ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ನಗರದ ಶ್ರೀಜಗದ್ಗುರು ರೇಣುಕಾಚಾರ್ಯ ಸಮುದಾಯಭವನದ ಆವರಣದಲ್ಲಿ ನಿನ್ನೆ ಸಂಜೆ ಆಯೋಜಿಸಿದ್ದ 'ಹಸಿರು' ಕಾರ್ಯಕ್ರಮದಲ್ಲಿ ಹಣ್ಣಿನ ಸಸಿಗಳನ್ನು ಅವರು ವಿತರಿಸಿದರು.

ಧರ್ಮ ಮತ್ತು ಪ್ರಕೃತಿಯ ನಡುವೆ ಅವಿನಾಭಾವ ಸಂಬಂಧವಿದೆ. ಪರಿಸರ ಸಂರಕ್ಷಣೆ ಧಾರ್ಮಿಕಾಚರಣೆ ಭಾಗವಾಗಿದೆ. ಬಿಲ್ವಪತ್ರೆ, ಅಶ್ವತ್ಥವೃಕ್ಷ, ಬನ್ನಿಮರ ಸೇರಿದಂತೆ ಮಾನವನಿಗೆ ಉಪಯುಕ್ತವಾದ ಹತ್ತುಹಲವು ಗಿಡಮರಗಳನ್ನು ದೈವಿಕ ಭಾವನೆಯಿಂದ ನೋಡುವ ಆಚರಣೆ ಇದೆ. ದೇವರಕಾಡು ಸೇರಿದಂತೆ ವಿವಿಧ ಕಾರಣಗಳಿಂದ ವನಗಳ ಸಂರಕ್ಷಣೆ ಮಾಡಿಕೊಂಡು ಬರಲಾಗಿದೆ ಎಂದರು.

ಪೃಥ್ವಿಯ ಹಸಿರುಕ್ರಾಂತಿ ಮೂಲ ರೇಣುಕ ಭಗವತ್ಪಾದರು. ಯುಗದ ಆದಿಯಲ್ಲಿ ಆವಿರ್ಭವಿಸಿದ ಶ್ರೀಜಗದ್ಗುರು ರೇಣುಕಾಚಾರ್ಯರು ಮನುಕುಲಕ್ಕೆ ಉತ್ತುವ-ಬಿತ್ತುವ, ಉಣ್ಣುವ-ಉಡುವ ಸಂಸ್ಕೃತಿಯನ್ನು ಕಲಿಸಿದವರು. ಗೆಡ್ಡೆಗೆಣಸು ಹಸಿಯಾಗಿ ತಿಂದು ಹಸಿವು ನೀಗಿಸಿಕೊಳ್ಳುತ್ತಿದ್ದ ಕಾಲಘಟ್ಟದಲ್ಲೇ ಕೃಷಿ ಸಂಸ್ಕೃತಿಯನ್ನು ಕಲಿಸಿಕೊಟ್ಟವರು. ನಾಗರಿಕ ಬದುಕಿಗೆ ಅಂಕುರಾರ್ಪಣೆ ಮಾಡಿದವರು. ಇಂದಿನ ಆಂಧ್ರಪ್ರದೇಶ ಕೊಲ್ಲನುಪಾಕಿ ಶ್ರೀಸೋಮೇಶ್ವರ ಲಿಂಗದಲ್ಲಿ ಆವಿರ್ಭವಿಸಿ ಮನುಕುಲಕ್ಕೆ ಬಾಳಿ ಬದುಕುವ ಮಾರ್ಗದರ್ಶನ ಮಾಡಿದ ಮೂಲ ಪುರುಷರೆಂದರು.

ಶ್ರೀ ರೇಣುಕರು, ರೇವಣಸಿದ್ದರು ಸೇರಿದಂತೆ ಶ್ರೀಪೀಠದ ಪೂರ್ವಾಚಾರ್ಯರು ಕೆರೆಕಟ್ಟೆಗಳ ನಿರ್ಮಾಣ, ವನಸ್ಪತಿ ವನಗಳು ಸೇರಿದಂತೆ ಹಸಿರು ಹೆಚ್ಚಿಸಲು ಪ್ರೇರಣೆ ನೀಡಿರುವುದು ಇತಿಹಾಸ. ಪೂಜೆ, ಧಾರ್ಮಿಕ ಸಮಾರಂಭಗಳ ಸಂದರ್ಭಗಳಲ್ಲಿ ಸವಿನೆನಪಿಗಾಗಿ ಸಸಿ ನೆಡುವ ಸಂಪ್ರದಾಯ ಶ್ರೀಪೀಠ ಹಾಗೂ ಶಾಖಾಮಠಗಳಲ್ಲಿ ಅನೂಚಾನವಾಗಿ ನಡೆದುಕೊಂಡು ಬಂದಿದೆ ಎಂದು ಶ್ರೀರಂಭಾಪುರಿ ಜಗದ್ಗುರುಗಳು ಉಲ್ಲೇಖಿಸಿದರು.

ಬಾಳೆಹೊನ್ನೂರಿನಲ್ಲಿ ಸಂಸ್ಥಾಪನೆಗೊಂಡ ವೀರ ಸಿಂಹಾಸನ ಪೀಠ ಹಸಿರು ಪೀಠವೆಂದೇ ಹೆಸರಾಗಿದೆ. ಲಾಂಛನ ಹಸಿರುಧ್ವಜವಾಗಿದ್ದು, ಪೃಥ್ವೀ ತತ್ತ್ವವನ್ನು ಬೋಧಿಸಲಾಗುತ್ತಿದೆ. ಮಾಧ್ಯಮ ಸಂಸ್ಕೃತಿ ಪ್ರತಿಷ್ಠಾನ ಪ್ರಕೃತಿ ಸಂರಕ್ಷಣೆಯನ್ನು ಆದ್ಯತೆಯಾಗಿ ಸ್ವೀಕರಿಸಿ ಜಗದ್ಗುರುಗಳ ಸಾನಿಧ್ಯದಲ್ಲಿ ಹಸಿರು ಪಾದಯಾತ್ರೆ-ಸಸ್ಯಾರೋಪಣ-ಸಸಿ ವಿತರಣೆ ಜೊತೆಗೆ ಸಸ್ಯಗಳ ಮಹತ್ವ ಕುರಿತಂತೆ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿಕೊಂಡು ಬರುತ್ತಿರುವುದು ಮಾದರಿ ಎಂದ ಡಾ.ವೀರಸೋಮೇಶ್ವರ ಜಗದ್ಗುರುಗಳು, ಸಸ್ಯ ಸಂರಕ್ಷಣೆ ಎಲ್ಲರ ಬದುಕಿನ ಭಾಗವಾಗಬೇಕು ಎಂದರು.

# ಕ್ಯಾನ್ಸರ್ ಪೀಡಿತ ಮಕ್ಕಳಿಗೆ ಪ್ರತ್ಯೇಕ ಶಾಲೆ

**ಶಿವಮೊಗ್ಗ:** ಕ್ಯಾನ್ಸರ್ ನಿಂದ ಬಳಲುತ್ತಿರುವ ಮಕ್ಕಳಿಗಾಗಿ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದ್ದು ಅಂತಹ ಮಕ್ಕಳಿಗೆ ಪ್ರತ್ಯೇಕ ಶಾಲೆ ಪ್ರಾರಂಭಿಸುವ ನಿರ್ಧಾರ ತೆಗೆದುಕೊಂಡಿದೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ಯಾನ್ಸರ್‌ನಿಂದ ಬಳಲುತ್ತಿರುವ ಮಕ್ಕಳಿಗಾಗಿ ನಾವು ಪ್ರತ್ಯೇಕ ಶಾಲೆ ಆರಂಭಿಸುತ್ತಿದ್ದೇವೆ. ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆ ಬಳಿ ಇದನ್ನು ಆರಂಭಿಸಲು ನಿರ್ಧರಿಸಿದ್ದೇವೆ. ಇಲ್ಲಿ ಚಿಕಿತ್ಸೆಯ ಜೊತೆಗೆ ಶಿಕ್ಷಣವನ್ನೂ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಮಕ್ಕಳಿಗೆ ಶಿಕ್ಷಣದಲ್ಲಿ ಗುಣಮಟ್ಟ, ಸಮಾನತೆ ಮತ್ತು ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ನಾವು ಈ ಕ್ರಮ ಕೈಗೊಳ್ಳುತ್ತಿದ್ದೇವೆ.

ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ನಾವು ಈ ಯೋಜನೆಯನ್ನು ಜಾರಿಗೆ ತರುತ್ತಿದ್ದೇವೆ. ಪ್ರಸ್ತುತ, ನಮ್ಮ ರಾಜ್ಯದಲ್ಲಿ 3,500 ಮಕ್ಕಳು ಕ್ಯಾನ್ಸರ್ ನಿಂದ ಬಳಲುತ್ತಿರಬಹುದು ಎಂದು ಅಂದಾಜಿಸಲಾಗಿದೆ. 1,500 ಮಕ್ಕಳು ಬರುವ ನಿರೀಕ್ಷೆಯಿದೆ. 1 ರಿಂದ 10 ನೇ ತರಗತಿಯವರೆಗೆ ಶಾಲೆ ಆರಂಭಿಸುತ್ತಿದ್ದೇವೆ.

## ಜೈನ ಬಸದಿಗಳ ಅರ್ಚಕರ ಮಾಸಿಕ ಗೌರವಧನಕ್ಕೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26 ನೇ ಸಾಲಿನಲ್ಲಿ ಜೈನ ಬಸಿದಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ಪ್ರಧಾನ ಅರ್ಚಕರು ಮತ್ತು ಸಹಾಯಕ ಅರ್ಚಕರುಗಳಿಗೆ ಮಾಸಿಕ ಗೌರವಧನ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿ ಹಾಗೂ ತಾಲೂಕು ಮಾಹಿತಿ ಕೇಂದ್ರಗಳಿಂದ ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಬಸದಿ ನೋಂದಣಿ ಪ್ರತಿ, ಆಡಳಿತ ಮಂಡಳಿಯ ಪ್ರತಿ, ಅರ್ಚಕರುಗಳ ಭಾವಚಿತ್ರ, ಕಳೆದ ಮೂರು ವರ್ಷಗಳಲ್ಲಿ ವಾಸವಿರುವ ಬಗ್ಗೆ ದಾಖಲೆ, ಅರ್ಚಕರ ಬ್ಯಾಂಕ್ ಖಾತೆ ವಿವರ, ಅರ್ಚಕರುಗಳ ಆಧಾರ್ ಕಾರ್ಡ್ ಪ್ರತಿ, ಮಾಹೆವಾರು ಕರ್ತವ್ಯದ ಹಾಜರಾತಿ, ಸೇವಾ ದೃಢೀಕರಣ ಪತ್ರ, ಧಾರ್ಮಿಕ ವಿದ್ಯಾರ್ಹತೆ ಕುರಿತು ಅಗತ್ಯ ದಾಖಲೆ, 200/- ರೂ.ಗಳ ಛಾಪಾ ಕಾಗದದಲ್ಲಿ ಪ್ರಮಾಣ ಪತ್ರಗಳನ್ನು ಲಗತ್ತಿಸಿ ಜೂ. 16 ರಿಂದ 30ರೊಳಗಾಗಿ ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ 1 ನೆ ಮಹಡಿ, ಸತ್ಯಶ್ರೀ ಆರ್ಕೆಡ್, 5ನೇ ಪ್ಯಾರಲಾಲ್ ರಸ್ತೆ, ದುರ್ಗಿಗುಡಿ ದೂ.ಸಂ.08182-220206, ಅಲ್ಪಸಂಖ್ಯಾತರ ಇಲಾಖೆಯ ಮಾಹಿತಿ ಕೇಂದ್ರಗಳ ಸಂಪರ್ಕ ಸಂಖ್ಯೆಗಳು ಶಿವಮೊಗ್ಗ - 7676888388, ಭದ್ರಾವತಿ- 9538853680,

# ರಾಷ್ಟ್ರೀಯ ಬೆಳವಣಿಗೆಗೆ ಕರ್ನಾಟಕದ ಆರ್ಥಿಕ ಶಕ್ತಿಯೇ ಇಂಧನ

## 16ನೇ ಹಣಕಾಸು ಆಯೋಗದ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಪ್ರತಿಪಾದನೆ

**ನವದೆಹಲಿ:** ಮುಖ್ಯಮಂತ್ರಿ ಸಿದ್ದರಾಮಯ್ಯ 16ನೇ ಹಣಕಾಸು ಆಯೋಗದ ಅಧ್ಯಕ್ಷ ಅರವಿಂದ ಪರಗಾರಿಯಾ ಮತ್ತು ಸದಸ್ಯರನ್ನು ಭೇಟಿಯಾಗಿ ರಾಜ್ಯದ ಹೆಚ್ಚುವರಿ ಜ್ಞಾಪನಾ ಪತ್ರವನ್ನು ಆಯೋಗಕ್ಕೆ ಸಲ್ಲಿಸಿದರು.

16ನೇ ಹಣಕಾಸು ಆಯೋಗದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಕರ್ನಾಟಕದ ಆರ್ಥಿಕ ಬಲವು ರಾಷ್ಟ್ರೀಯ ಬೆಳವಣಿಗೆಗೆ ಇಂಧನವಾಗಿದೆ. ಕರ್ನಾಟಕ ಆರ್ಥಿಕವಾಗಿ ಬೆಳವಣಿಗೆಯಾದರೆ ಕೇಂದ್ರ ಸರ್ಕಾರದ ಬೆಳವಣಿಗೆಯೂ ಆಗುತ್ತದೆ. ಹಾಗಾಗಿ ನ್ಯಾಯಯುತವಾಗಿ ತೆರಿಗೆ ಹಂಚಿಕೆಯಾಗಬೇಕು ಎಂದು ಕೋರಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಪ್ರತಿ ವರ್ಷ 4.5 ಲಕ್ಷ ಕೋಟಿ ತೆರಿಗೆ ನೀಡುತ್ತದೆ. ಒಂದು ರೂ.ಗಳು ನೀಡಿದರೆ 15 ಪೈಸೆ ನಮಗೆ ವಾಪಸ್ಸು ಬರುತ್ತದೆ. ಈ ಅನ್ಯಾಯ 16ನೇ ಹಣಕಾಸು ಆಯೋಗದಲ್ಲಿ ಆಗಬಾರದು. 14ನೇ ಹಣಕಾಸು ಆಯೋಗದಲ್ಲಿ ನಮ್ಮ ತೆರಿಗೆ



ಪಾಲು 4.713%ಕ್ಕೆ ಮತ್ತು 15 ನೇ ಹಣಕಾಸು ಆಯೋಗದಲ್ಲಿ ತೆರಿಗೆ ಪಾಲು 3.647%ಕ್ಕೆ ಇಳಿಕೆ ಮಾಡಿದ್ದರಿಂದ ತೆರಿಗೆ ಹಂಚಿಕೆಯಲ್ಲಿ ನಮ್ಮ ಪಾಲನ್ನು ಒಟ್ಟಾರೆ 23% ರಷ್ಟು ಇಳಿಕೆ ಮಾಡಲಾಗಿದೆ. 5 ವರ್ಷಗಳಲ್ಲಿ ಒಟ್ಟು 68,275 ಕೋಟಿ ರೂ.ಗಳು ಕಡಿಮೆಯಾಗಿದೆ ಎಂದು ಮನವಿ ಮನವರಿಕೆ ಮಾಡಿಕೊಟ್ಟರು.

ಸೆಸ್, ಸರ್ಜಾರ್ಜ್ ನಲ್ಲಿ ಪಾಲು ಕೊಡದ ಕೇಂದ್ರ ಸರ್ಕಾರ: ಕೇಂದ್ರ ಸರ್ಕಾರ ಸೆಸ್ ಮತ್ತು ಸರ್ಜಾರ್ಜ್ ನಲ್ಲಿ ನಮಗೆ ಮಾತ್ರವಲ್ಲ ಯಾವ ರಾಜ್ಯಕ್ಕೂ ಪಾಲು ಕೊಡುವುದಿಲ್ಲ. ಕರ್ನಾಟಕದಿಂದ 2024-25ರಲ್ಲಿ ಒಟ್ಟು ರೂ. 5,41,709 ಕೋಟಿ ಸಂಗ್ರಹವಾಗಿದೆ. 8,084 ಕೋಟಿ ರೂ.ಗಳು ಕರ್ನಾಟಕ್ಕೆ ನಷ್ಟವಾಗಿದೆ. ಸೆಸ್ ಮತ್ತು ಸರ್ಚಾಜ್ ಶೇ.5ನ್ನು ಮೀರಬಾರದು, ಒಂದು ವೇಳೆ 5% ಮೀರಿದರೆ ರಾಜ್ಯಗಳ ತೆರಿಗೆ ಹಂಚಿಕೆಯ ಪಾಲಿನಲ್ಲಿ ಶೇ.50 ರಷ್ಟು ಹೆಚ್ಚಳ ಮಾಡಬೇಕು ಎಂದು ಮನವಿ ಮಾಡಲಾಗಿದೆ ಎಂದರು.

ಬೆಂಗಳೂರು ಅಭಿವೃದ್ಧಿಗೆ 1ಲಕ್ಷದ 15 ಸಾವಿರ ಕೋಟಿ ಅನುದಾನಕ್ಕೆ ಮನವಿ: 15ನೇ ಹಣಕಾಸಿನ ಆಯೋಗವು ರಾಜ್ಯಕ್ಕೆ 5,495 ಕೋಟಿ ರೂ.ಗಳ ವಿಶೇಷ ಅನುದಾನವನ್ನು ಕರ್ನಾಟಕ, ತೆಲಂಗಾಣ ಮತ್ತು ಮಿಜೋರಾಂ ರಾಜ್ಯಗಳಿಗೆ ಒದಗಿಸಬೇಕೆಂದು ಶಿಫಾರಸ್ಸು ಮಾಡಿತ್ತು. ಆದರೆ ಕೇಂದ್ರ ಸರ್ಕಾರ ಈ ಅನುದಾನವನ್ನು ಒದಗಿಸಲು ನಿರಾಕರಿಸಿತು. ಇದಲ್ಲದೇ ಪೆರಿಫೆರಲ್ ರಿಂಗ್ ರಸ್ತೆಗೆ ?3,000 ಕೋಟಿ ಹಾಗೂ ಕೆರೆಗಳ ಅಭಿವೃದ್ಧಿಗೆ ?3,000 ಕೋಟಿ ನೀಡಬೇಕೆಂದು ಶಿಫಾರಸ್ಸು ಮಾಡಿತ್ತು. ಎರಡೂ ಸೇರಿ 11,495 ಕೋಟಿ ರೂ.ಗಳನ್ನು ಒದಗಿಸಬೇಕೆಂದು 15ನೇ ಹಣಕಾಸಿನ ಆಯೋಗವು ಶಿಫಾರಸ್ಸು ಮಾಡಿತ್ತು. ಈ ಹಣ ಬಂದಿಲ್ಲ. ಬೆಂಗಳೂರು ನಗರ ವೇಗವಾಗಿ ಅಭಿವೃದ್ಧಿಯಾಗುತ್ತಿದ್ದು, ನಮ್ಮ ಮನವಿಯಲ್ಲಿ ಕೋರಿರುವಂತೆ ಅನುದಾನವನ್ನು ಒದಗಿಸದೇ ಹೋದರೆ ಬೆಂಗಳೂರು ಅಭಿವೃದ್ಧಿಗೆ 1ಲಕ್ಷದ 15 ಸಾವಿರ ಕೋಟಿ ರೂ.ಗಳನ್ನು ಒದಗಿಸಬೇಕು ಎಂದು ಕೋರಿರುವುದಾಗಿ ತಿಳಿಸಿದರು.

ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಅನುದಾನಕ್ಕೆ ಒತ್ತಾಯ: ಕಲ್ಯಾಣ ಕರ್ನಾಟಕದಲ್ಲಿ ಏಳು ಜಿಲ್ಲೆಗಳನ್ನು ಒಳಗೊಂಡಿದ್ದು 5 ಜಿಲ್ಲೆಗಳ ವಾರ್ಷಿಕ ವರಮಾನವು ರಾಜಸ್ಥಾನ, ಬಿಹಾರ, ಉತ್ತರ ಪ್ರದೇಶ, ಒರಿಸ್ಸಾ ಮತ್ತು ಪಶ್ಚಿಮ ಬಂಗಾಳದ ಸರಿಸಮಾನವಿದೆ. ಮಲೆನಾಡು ಪ್ರದೇಶಗಳಲ್ಲಿ ನಮಗೆ ಪ್ರವಾಹ, ಭೂ ಕುಸಿತದಂತಹ ಸಮಸ್ಯೆಗಳು ತಲೆದೋರುತ್ತವೆ. ಅದ್ದರಿಂದ ವಿಶೇಷ ಅನುದಾನ ಒದಗಿಸಬೇಕು ಎಂದು ಕೋರಿದೇವೆ ಎಂದರು. ಕೇರಳ, ತಮಿಳುನಾಡಿಗೂ ನಮ್ಮಷ್ಟೇ ನಷ್ಟವಾಗಿದ್ದರೂ, ಅವರಿಗೆ ರಾಜಸ್ವ ಕೊರತೆ ಅನುದಾನವನ್ನು ನೀಡಲಾಗಿದೆ. ನಮಗೇಕೆ ಕೊಟ್ಟಿಲ್ಲ ಎಂದು ಪ್ರಶ್ನಿಸಲಾಗಿದೆ. ಜನಸಂಖ್ಯೆ ಆಧಾರದ ಮೇಲೆ ಅನುದಾನ ಹಂಚಿಕೆ ಮಾಡಬಾರದು ಎಂದು ನಾವು ಹೇಳುವುದಿಲ್ಲ. ಆದರೆ ತೆರಿಗೆ ಹಂಚಿಕೆ ವೈಜ್ಞಾನಿಕವಾಗಿ ಮಾಡಬೇಕು ಎಂದು ಕೋರಲಾಗಿದೆ. ಈ ಬಗ್ಗೆ ಇತರೆ ರಾಜ್ಯಗಳು ಧ್ವನಿ ಎತ್ತಿವೆ. ಸಭೆಯು ಒಂದೂ ಕಾಲ ಗಂಟೆಗಳ ಕಾಲ ಸೌಹಾರ್ದಯುತವಾಗಿ ನಡೆದಿದ್ದು, ಆಯೋಗದ ಅಧ್ಯಕ್ಷರು ನಮ್ಮ ಸಲಹೆಗಳನ್ನು ಸ್ವೀಕರಿಸಿದ್ದಾರೆ. ನಮ್ಮ ಕೋರಿಕೆಗಳನ್ನು ಈಡೇರಿಸುತ್ತಾರೆ ಎನ್ನುವ ಭರವಸೆ ಹೊಂದಿದ್ದೇವೆ ಎಂದು ಮುಖ್ಯಮಂತ್ರಿ ಹೇಳಿದರು.

# ಹುಬ್ಬಳ್ಳಿ: ಮೃತ ಹುಸೇನಸಾಬ್ ಕಳಸ ಕುಟುಂಬಕ್ಕೆ 5 ಲಕ್ಷ ಪರಿಹಾರ ವಿತರಿಸಿದ ಸಂತೋಷ್ ಲಾಡ್

**ಹುಬ್ಬಳ್ಳಿ:** ಇತ್ತೀಚಿಗೆ ಸುರಿದ ಭಾರಿ ಮಳೆಯಿಂದ ನೀರಿನಲ್ಲಿ ಕೊಚ್ಚಿ ಹೋಗಿ ಮೃತಪಟ್ಟಿದ್ದ ಹುಸೇನಸಾಬ್ ಕಳಸ ಕುಟುಂಬದ ಸದಸ್ಯರಿಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಶನಿವಾರ 5 ಲಕ್ಷ ರೂ. ಪರಿಹಾರದ ಆದೇಶವನ್ನು ಹಸ್ತಾಂತರಿಸಿದರು.

ಹುಬ್ಬಳ್ಳಿ ಹೊರವಲಯದ ಮಾವನೂರು ರಸ್ತೆಯ ಬಳಿ ಬುಧವಾರ ರಾತ್ರಿ ಹುಸೇನಸಾಬ್ ಅವರು ಮಳೆನೀರಿನಲ್ಲಿ ಕೊಚ್ಚಿ ಹೋಗಿ ಮೃತಪಟ್ಟಿದ್ದರು.

ಇಂದು ಹುಸೇನಸಾಬ್ ಅವರ ಮನೆಗೆ ತೆರಳಿ, ಅವರ ಕುಟುಂಬಕ್ಕೆ ಸಾಂತ್ವನ ಹೇಳಿ, ಪರಿಹಾರದ ಆದೇಶದ ಪ್ರತಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಂತೋಷ್ ಲಾಡ್, ಜಿಲ್ಲೆಯಲ್ಲಿ ಭಾರಿ ಮಳೆಯಿಂದಾಗಿ ಇಲ್ಲಿಯವರೆಗೆ ಒಟ್ಟು ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು ಬೆಳೆ ನಷ್ಟದ ಬಗ್ಗೆ ಸರ್ವೆ ಮಾಡಬೇಕಾಗಿದೆ ಎಂದು



ತಿಳಿಸಿದರು. ಅಲ್ಲದೆ ಸರ್ವೇ ಮುಗಿದ ನಂತರ, ಅದನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ. ಜೂನ್ 12 ರಂದು, ಹುಬ್ಬಳ್ಳಿಯ ಹೊರವಲಯದ ಮಾವನೂರು ರಸ್ತೆಯ ಬಳಿಯ ತಗ್ಗು ಪ್ರದೇಶದಲ್ಲಿ ಬುಧವಾರ ರಾತ್ರಿ ಸುರಿದ ಭಾರೀ ಮಳೆ ಮತ್ತು ಬಲವಾದ ಗಾಳಿಯ ನಂತರ, ಹುಸೇನಸಾಬ್ ನೀರಿನಲ್ಲಿ ಕೊಚ್ಚಿಹೋಗಿ ಸಾವನ್ನಪ್ಪಿದ್ದಾರೆ.

ಇನ್ನು ಹೆಚ್ಚಿನ ಮಳೆಯಾದಗ ಬೆಣ್ಣೆಹಳ್ಳದಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗುತ್ತದೆ. ಪ್ರತಿ ಬಾರಿ ಕೂಡಾ ಸಾವಿರಾರು ಎಕರೆಯಲ್ಲಿ ಬೆಳದಿದ್ದ ಬೆಳೆ ಹಾಳಾಗಿ ಹೋಗುತ್ತದೆ. ಹೀಗಾಗಿ ಬೆಣ್ಣೆಹಳ್ಳದಲ್ಲಿ ಉಂಟಾಗುತ್ತಿರುವ ಪ್ರವಾಹಕ್ಕೆ ಶಾಶ್ವತ ಪರಿಹಾರ ಕಲ್ಪಿಸುವುದರ ಜೊತೆಗೆ, ಬೆಳೆಹಾನಿಯಾದ ರೈತರಿಗೆ ಪರಿಹಾರ ಕೊಡಿಸುವ ಕೆಲಸ ಕೂಡಾ ಆಗಬೇಕಿದೆ ಎಂದು ಸಚಿವರು ಹೇಳಿದ್ದಾರೆ.

ಘಟನೆಯ ಕುರಿತು ಎಎನ್‌ಐ ಜೊತೆ ಮಾತನಾಡಿದ ಹುಬ್ಬಳ್ಳಿ ತಾಲೂಕು ತಹಶೀಲ್ದಾರ್ ಕಲ್ಲನಗೌಡ ಪಾಟೀಲ್ , "ಆ ವ್ಯಕ್ತಿಯನ್ನು ಪತ್ತೆಹಚ್ಚಲು ಅಗ್ನಿಶಾಮಕ ದಳದವರು ಶೋಧ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಕಳೆದ 10 ಗಂಟೆಗಳಿಂದ ಕಾರ್ಯಾಚರಣೆ ಮುಂದುವರೆದಿದೆ. ನಿನ್ನೆ ರಾತ್ರಿ ಸುಮಾರು 150 ಮಿ.ಮೀ ಮಳೆಯಾಗಿದೆ. ಇಂದು ಹುಬ್ಬಳ್ಳಿಯಲ್ಲಿ ಶಾಲೆಗಳನ್ನು ಬಂದ್ ಮಾಡಲಾಗಿದೆ. ಬುಧವಾರ ಭಾರೀ ಮಳೆಯ ನಂತರ ತನ್ನ ಜಮೀನಿಗೆ ತೆರಳಿದ್ದ ಕಾಣೆಯಾದ ಹುಸೇನಸಾಬ್ ಅವರ ಚಪ್ಪಲಿಗಳು ಪತ್ತೆಯಾಗಿವೆ" ಎಂದು ಹೇಳಿದ್ದಾರೆ.

# ಹಾವೇರಿ: ಸಾರಿಗೆ ಬಸ್‌ಗೆ ಕಾರು ಡಿಕ್ಕಿ ಸ್ಥಳದಲ್ಲೇ ಇಬ್ಬರ ದುರ್ಮರಣ



**ಹಾವೇರಿ:** ಸಾರಿಗೆ ಬಸ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಕಾರಿನಲ್ಲಿದ್ದ ಇಬ್ಬರು ಸಾವನ್ನಪ್ಪಿದ್ದು, ಓರ್ವ ಗಂಭೀರ ಗಾಯಗೊಂಡ ಘಟನೆ ಹಾವೇರಿ ಜಿಲ್ಲೆ ರಾಣೇಬೆನ್ನೂರು ತಾಲೂಕಿನ ಕುಮಾರಪಟ್ಟಣಂ ಗ್ರಾಮದ ಬೈಪಾಸ್ ಬಳಿ ನಡೆದಿದೆ.

ಘಟನೆಯಲ್ಲಿ ದಾವಣಗೆರೆ ಮೂಲದ ಪ್ರವೀಣ (36) ಸಾವನ್ನಪ್ಪಿದ್ದು, ಇನ್ನೊಬ್ಬರ ಗುರುತು ಪತ್ತೆಯಾಗಿಲ್ಲ. ಅಪಘಾತದಲ್ಲಿ ಗಂಭೀರ ಗಾಯಗೊಂಡ ಕೊಟ್ರೇಶ ಅಬಲೂರನ್ನು ದಾವಣಗೆರೆ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಸಾರಿಗೆ ಬಸ್ ಅಥಣಿಯಿಂದ ದಾವಣಗೆರೆಗೆ ಹೊರಟ್ಟಿದ್ದು, ಬೈಪಾಸ್‌ನಲ್ಲಿ ಮುಖಾಮುಖಿ ಡಿಕ್ಕಿಯಾಗಿ ದುರ್ಘಟನೆ ಸಂಭವಿಸಿದೆ. ಈ ಸಂಬಂಧ ಕುಮಾರಪಟ್ಟಣಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕಾಂಗ್ರೆಸ್ ನಾಯಕರ ಬಗ್ಗೆ ಬಿಜೆಪಿ ಅವಹೇಳನ ಖಂಡಿಸಿ ಯುವಕಾಂಗ್ರೆಸ್ ಬೃಹತ್ ಪ್ರತಿಭಟನೆ




**ಚಿಕ್ಕಮಗಳೂರು:** ಭಾರತದೇಶದಲ್ಲಿ ಸುದೀರ್ಘ ಆಡಳಿತ ನಡೆಸಿದ ಉಕ್ಕಿನ ಮಹಿಳೆ ಪ್ರಿಯದರ್ಶಿನಿ, ಮಾಜಿ ಪ್ರಧಾನಿ ಇಂದಿರಾಗಾಂಧಿಯವರ ಬಗ್ಗೆ ಹಗುರವಾಗಿ ಮಾತನಾಡಿರುವ ಬಿಜೆಪಿ ಮುಖಂಡರ ನಡೆಯನ್ನು ಖಂಡಿಸಿ ಇಂದು ಚಿಕ್ಕಮಗಳೂರು ವಿಧಾನಸಭಾಕ್ಷೇತ್ರದಯುವಕಾಂಗ್ರೆಸ್ ಸಮಿತಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

ನಗರದಅಜಾದ್ ವೃತ್ತದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರುಕೇಂದ್ರ ಸರ್ಕಾರ ಮತ್ತು ಬಿಜೆಪಿ ಮುಖಂಡರ ನಡೆಯನ್ನು ಖಂಡಿಸಿ ಘೋಷಣೆ ಕೂಗಿ ಹಿಟ್ಲರ್ ಎಂದು ಇಂದಿರಾಗಾಂಧಿಯವರನ್ನು ಬಿಜೆಪಿ ಸಾಮಾಜಿಕಜಾಲತಾಣದಲ್ಲಿ ಅವಮಾನಿಸಿರುವುದನ್ನು ಖಂಡಿಸಿದರು.

ಈ ಸಂದರ್ಭದಲ್ಲಿ ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿದ ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ಹೆಚ್.ಪಿ ಮಂಜೇಗೌಡ, ದೇಶದಅಭಿವೃದ್ಧಿಗೆ ಇಂದಿರಾಗಾಂಧಿಯವರು ಪ್ರಧಾನಿಯಾಗಿದ್ದಾಗ 20 ಅಂಶಗಳ ಕಾರ್ಯಕ್ರಮಗಳನ್ನು ಜಾರಿಗೆತಂದುದೇಶದ ಸರ್ವಾಂಗೀಣಅಭಿವೃದ್ಧಿಗೆ ಶ್ರಮಿಸಿದ ಇವರ ಬಗ್ಗೆ ಬಿಜೆಪಿ ಮತ್ತುಕೇಂದ್ರಸರ್ಕಾರ ಅವಹೇಳನ ಮಾಡಿದ್ದಾರೆಂದು ಆರೋಪಿಸಿದರು.

ಬ್ರಿಟೀಷ್ ಆಡಳಿತದಿಂದ ಖಾಲಿ ಖಜಾನೆಯಾಗಿದ್ದ ಭಾರತದೇಶದಲ್ಲಿ ಸರ್ವರಿಗೂ ಸಮಾನತೆತಂದುಕೊಟ್ಟ ಧೀಮಂತ ನಾಯಕಿಯಾಗಿದ್ದಾರೆ.ಇಂತಹವರ ಬಗ್ಗೆ ಕ್ಷುಲ್ಲಕರಾಜಕೀಯಕ್ಕಾಗಿ ಅವಹೇಳನ ಮಾಡಿರುವುದನ್ನು ಖಂಡಿಸಿದರು.

ಬಿಜೆಪಿ ಸೋಲಿನ ಭೀತಿಯಿಂದ ಹತಾಶೆಗೊಂಡು ಸಿ.ಟಿ. ರವಿ ಅವರು ಮನಬಂದಂತೆ ಮಾತನಾಡುತ್ತಿದ್ದಾರೆ, ಇಂದಿರಾಗಾಂಧಿ, ಸೋನಿಯಾಗಾಂಧಿ, ರಾಜೀವ್‌ಗಾಂಧಿ, ಮಲ್ಲಿಕಾರ್ಜುನ್‌ಖರ್ಗೆ, ರಾಹುಲ್‌ಗಾಂಧಿ ಇವರುಗಳನ್ನು ಕೀಳಾಗಿ ಕಾಣುವ ಮೂಲಕ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದ್ದಾರೆಂದುದೂರಿದರು.

ದೇಶಕ್ಕಾಗಿತ್ಯಾಗ, ಬಲಿದಾನ ಮಾಡಿದಇಂದಿರಾಗಾಂಧಿ, ರಾಜೀವ್‌ಗಾಂಧಿಯವರದೇಶಪ್ರೇಮವನ್ನು ಬಿಜೆಪಿ ಮುಖಂಡರಿಗೆ ಸಹಿಸಿಕೊಳ್ಳಲಾಗದೆ ಅವಹೇಳನಕಾರಿ ಹೇಳಿಕೆಯಲ್ಲಿ ತಲ್ಲೀನರಾಗಿದ್ದಾರೆಂದು ಟೀಕಿಸಿದ ಅವರು, ದೇಶಕ್ಕೆ ನಿಮ್ಮಕೊಡುಗೆ ಏನು ಎಂದು ಪ್ರಶ್ನಿಸಿದರು.

ಸಿ.ಟಿ. ರವಿ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಹಾಗೂ ನಾಯಕರ ಬಗ್ಗೆ ಸಿ.ಟಿ. ರವಿ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಹಾಗೂ ನಾಯಕರ ಬಗ್ಗೆ

ಅವಾಚ್ಯವಾಗಿ ಮಾತನಾಡಿ, ಅವರ ಬೂಟ್ ನೆಕ್ಕುವ ಪದ ಬಳಸಿದರೆ ರವಿಯವರಎಲ್ಲಾ ಕಾರ್ಯಕ್ರಮಗಳಿಗೆ ಕಪ್ಪು ಬಾವುಟ ಪ್ರದರ್ಶಿಸುವುದಾಗಿ ಎಚ್ಚರಿಸಿದರು.

ಕಾಂಗ್ರೆಸ್ ಪಕ್ಷ ಸಂವಿಧಾನ ಶಿಲ್ಪಿ ಡಾ.ಬಿ.ಆರ್‌ಅಂಬೇಡ್ಕರ್‌ಅವರು ಹಾಕಿಕೊಟ್ಟಂತ ಸಂವಿಧಾನದಆಶಯದಂತೆ ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲು ಎಂಬಂತೆಕಾರ್ಯಾಂಗ, ನ್ಯಾಯಾಂಗ, ಶಾಸಕಾಂಗ ಮೂರು ಅಂಗಗಳಲ್ಲಿ ಕೆಲಸ ಮಾಡುತ್ತಿದೆಎಂದು ಹೇಳಿದರು.


ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಿಸುತ್ತೇವೆ ಎಂಬ ಹೇಳಿಕೆಯಿಂದಾಗಿ ಚುನಾವಣೆ ಸಂದರ್ಭದಲ್ಲಿಜನರಿಂದತಿರಸ್ಕಾರಗೊಂಡಿರುವ ಸಿ.ಟಿ. ರವಿ ಸಂವಿಧಾನದ ಬಗ್ಗೆ ಮಾತನಾಡುವಯಾವುದೇ ನೈತಿಕತೆಇಲ್ಲಎಂದು ಲೇವಡಿ ಮಾಡಿದರು.

ಧಾರ್ಮಿಕ ಭಾವನೆಗಳನ್ನು ಕೆರಳಿಸಿ ಜಾತಿ–ಜಾತಿಗಳ ಮಧ್ಯೆ ವಿಶಬೀಜ ಬಿತ್ತಿಅಧಿಕಾರಕ್ಕಾಗಿಆಸೆಪಡುತ್ತಿರುವ ನೀವು ಸಂವಿಧಾನದ ಆಶಯಗಳನ್ನು ಗಾಳಿಗೆ ತೂರಿದ್ದೀರಿಎಂದುಕುಟುಕಿದರು.

ಸಂವಿಧಾನ ಮತ್ತುದೇಶದಜನರನ್ನುರಕ್ಷಣೆ ಮಾಡುವುದುಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಧ್ಯಎಂಬುದನ್ನು ಮನಗಾಣಬೇಕುಎಂದು ಹೇಳಿದರು.

ಪ್ರತಿಭಟನೆಯಲ್ಲಿಯುವಕಾಂಗ್ರೆಸ್ ಸಮಿತಿಅಧ್ಯಕ್ಷ ಲಾಕೇಶ್. ಆರ್, ಜಿಲ್ಲಾಕಾಂಗ್ರೆಸ್ ಮುಖಂಡರಾದ ಹಿರೇಮಗಳೂರು ರಾಮಚಂದ್ರ, ಜಗದೀಶ್, ಮಲ್ಲೇಶ್ ಸ್ವಾಮಿ, ಗಂಗಾಧರ್, ಲಕ್ಯಾ ಸಿದ್ದೇಶ್, ಹಿರೇಗೌಜ ಶಿವು, ನವೀನ್‌ಎತ್ತಿನಮನೆ, ಅಭಿಷೇಕ್, ಆದರ್ಶ್ ಬಹುಜನ್, ಮದನ್, ಪವನ್ ಮತ್ತಿತರರು ಉಪಸ್ಥಿತರಿದ್ದರು.

# ಕ್ಯಾಲಿಫೋರ್ನಿಯಾದಲ್ಲಿ ರಶ್ಮಿ ಗಾಯನ



**ಚಿಕ್ಕಮಗಳೂರು:** ಅಮೇರಿಕಾದಕ್ಯಾಲಿಫೋರ್ನಿಯಾದಲ್ಲಿಜುಲೈ ಮೂರರಿಂದ ಮೂರು ದಿನಗಳ ಕಾಲ ನಡೆಯಲಿರುವ ವಿಶ್ವ ಒಕ್ಕಲಿಗ ಸಮಾವೇಶದಲ್ಲಿಗೀತಗಾಯನ ನಡೆಸಲು ಚಿಕ್ಕಮಗಳೂರಿನ ಗಾಯಕಿ, ಮೈಸೂರು ವಿ.ವಿ.ಯ ಲಲಿತಕಲಾಕಾಲೇಜಿನಉಪನ್ಯಾಸಕಿ ರಶ್ಮಿ ಮಂಜುನಾಥ್‌ಆಯ್ಕೆಯಾಗಿದ್ದಾರೆ.

ಕರುನಾಡಿನಜನಪ್ರಿಯಜಾನಪದಗಾಯಕ ಶ್ರೀ ರಾಮೇಶ್ವರಾಚಾರ್‌ಅವರತಂಡದೊಂದಿಗೆ ತೆರಳಲಿರುವ ರಶ್ಮಿ, ಒಂದು ವಾರ ಕಾಲ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ತೊಗರಿಹಂಕಲ್‌ನ ಬಾಬು ಮತ್ತು ಸುಲೋಚನ ದಂಪತಿಗಳ ಪುತ್ರಿ ರಶ್ಮಿ ಚಿಕ್ಕಮಗಳೂರಿನ ಸುಗಮ ಸಂಗೀತಗಂಗಾದ ಸದಸ್ಯೆಯಾಗಿ, ರಾಜ್ಯ ಸುಗಮ ಸಂಗೀತ ಪರಿಷತ್ ವಿವಿಧೆಡೆ ನಡೆಸಿದ ಸಮ್ಮೇಳನಗಳು ಅಲ್ಲದೇ ಭಾರತದ ವಿವಿಧ ನಗರ, ಅಮೇರಿಕಾದರಿಚ್ಮಂಡ್‌ನಲ್ಲಿ ನಡೆದ ಅಕ್ಕ ಸಮ್ಮೇಳನದಲ್ಲೂ ತಮ್ಮ ಮಧುರಕಂಠದಿಂದಗಾಯನ ನೀಡಿಜನಪ್ರಿಯತೆ ಗಳಿಸಿದ್ದಾರೆ.ಮಂಡ್ಯ, ಮೈಸೂರು, ಚಿಕ್ಕಮಗಳೂರಿನಲ್ಲಿ ತಮ್ಮಧ್ವನಿ ಸಂಸ್ಥೆಯ ಮೂಲಕ ಆಫ್‌ಲೈನ್, ಆನ್‌ಲೈನ್ ಮೂಲಕ ಐನೂರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸಂಗೀತ ಮಾರ್ಗದರ್ಶನ ನೀಡುವ ರಶ್ಮಿ, ತಮ್ಮ ಪಿಎಚ್‌ಡಿಯನ್ನುಕೂಡಾ ಸುಗಮ ಸಂಗೀತದಕುರಿತಾಗಿಯೇ ನಡೆಸುತ್ತಿದ್ದಾರೆ. ಜೂನಿಯರ್ ವಾಣಿಜಯರಾಂಎಂದುಕರೆಂಯಲ್ಪಡುವ ನಮ್ಮೂರಗಾಯಕಿ ಈಗಾಗಲೇ ಉಪಾಸನಾ ಪ್ರಶಸ್ತಿ, ಪೂರ್ವಿ ನಾದೋಪಾಸನಾ ಪ್ರಶಸ್ತಿ, ಕಲ್ಕಟ್ಟೆ ವರ್ಷದಗಾಯಕಿ ಪ್ರಶಸ್ತಿ ಪಡೆದುದಲ್ಲದೇದೂರದರ್ಶನಚಂದನದಲ್ಲಿ ವಿಶೇಷ ಥಟ್‌ಅಂತ ಹೇಳಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮನ್ನಣೆ ಗಳಿಸಿದ್ದಾರೆ. ಚಿಕ್ಕಮಗಳೂರಿನ ಹೆಮ್ಮೆಯಗಾಯಕಿ, ವಿಲೆನಾಡಗಾಯನರಂಗದಕೀರ್ತಿಯನ್ನುಇನ್ನಷ್ಟು ಹೆಚ್ಚಿಸಲಿ ಎಂದು ವಿವಿಧ ಸಂಸ್ಥೆಗಳ ಪದಾಧಿಕಾರಿಗಳು, ರಶ್ಮಿ ಅಭಿಮಾನಿಗಳು ಶುಭ ಹಾರೈಸಿದ್ದಾರೆ.

# ಡಿಡಿಟಿ (ಡ್ರಿಂಕ್ಸ್, ಡ್ರಗ್ಸ್, ಟೊಬ್ಯಾಕೊ) ಬಳಸದೆ ಜೀವ ಉಳಿಸಿಕೊಳ್ಳಲು ಮನವಿ

**ದಾವಣಗೆರೆ** : ಇತ್ತೀಚಿನ ದಿನಗಳಲ್ಲಿ ಹೃದಯಾಘಾತಗಳು, ಅಪಘಾತ ಗಳು ಮತ್ತು ಕ್ಯಾನ್ಸರ್ ಗಳು ಹೆಚ್ಚಾಗಿದ್ದು ಅದಕ್ಕೆ ಪ್ರಮುಖ ಕಾರಣ ಒತ್ತಡ ಮತ್ತು ಡಿಡಿಟಿಯೆಂದು ಸಾಬೀತಾಗಿದೆ.

ಡಿಡಿಟಿಯಿಂದ ಒತ್ತಡವೇನೂ ಕಡಿಮೆ ಆಗುವುದಿಲ್ಲ ಆದರೆ ಅಮೂಲ್ಯವಾದ ಜೀವಗಳು 40 ರಿಂದ 50 ವರ್ಷ ದೊಳಗೆ ನಂದಿ ಹೋಗುತ್ತಿವೆ. ತಮ್ಮ ಅಮೂಲ್ಯವಾದ ಜೀವ ಉಳಿಸಿಕೊಂಡು ತಮ್ಮ ಚಿಕ್ಕ ಚಿಕ್ಕ ಮಕ್ಕಳು, ವಯಸ್ಸಾದ ತಂದೆ ತಾಯಿಗಳನ್ನು ರಕ್ಷಣೆ ಮಾಡಲು ಕರುಣ ಜೀವ ಕಲ್ಯಾಣ ಟ್ರಸ್ಟ್ ವಿನಂತಿ ಮಾಡುತ್ತದೆ.

ಡಿಡಿಟಿ (ಡ್ರಿಂಕ್ಸ್, ಡ್ರಗ್ಸ್, ಟೊಬ್ಯಾಕೊ) ಯೆಂಬ ಮಹಾಮಾರಿ ಯುವ ಜೀವಗಳ ಹರಣ ಮಾಡುವುದಲ್ಲದೇ ಸದ್ಯ ಅವರಲ್ಲಿರುವ ಕಿಂಚಿತ್ತೂ ನೈತಿಕ ಪ್ರಜ್ಞೆ, ಭಯ, ತಪ್ಪಿತಸ್ಥ ಮನೋಭಾವನೆಗಳೆಂಬ "ವಿವೇಕ"ಗಳನ್ನೇ ಕಿತ್ತೆಸೆದು, ಊಹಿಸಲಾಗದಂತ ಹೇಯ ಕೃತ್ಯಗಳಾದ ರೇಪ್, ಕೊಲೆ, ಸುಲಿಗೆ ದರೋಡೆಗಳಲ್ಲಿ ನಿರತರನ್ನಾಗಿ ಮಾಡುವುದು ನಮಗೆಲ್ಲಾ ಗೊತ್ತೇ ಇದೆ.

ಜ್ಞಾನಿ ತರುಣ್ ಸಾಗರ್ "ಯಾವುದೇ ಬಾವಿ, ಕೆರೆ, ಸಮುದ್ರಗಳಲ್ಲಿ ಮುಳುಗಿ ಸಾಯದಿರುವಷ್ಟು ಜನ, ಕೆಲವು ಇಂಚಿನ ಮದಿರಾ ಗ್ಲಾಸಿನಲ್ಲಿ ಮುಳುಗಿ ಸತ್ತಿದ್ದಾರೆ, ಸಾಯುತ್ತಿದ್ದಾರೆ ಎಂದು ಎಚ್ಚರಿಸಿದ್ದಾರೆ.

ಗಾಂಧೀಜಿಯವರು ಬಹಳ ಹಿಂದೆಯೇ ಸಿಗರೇಟ್ ಸೇದಲು ಬಳಸುವ ಹಣವನ್ನು ಭಾರತ ದೇಶದ ಒಳಿತಿಗಾಗಿ ನೀಡಿ ಎಂದು ಮನವಿ ಮಾಡಿದ್ದರು. ಈ ಸದಾಲೋಚನೆ ನಮ್ಮ ಆರೋಗ್ಯ ರಕ್ಷಣೆಯ ಜೊತೆಗೆ ಸತ್ಕಾರ್ಯವೆಸಗಲು ಸಹಕಾರಿಯಾದ ಉಪಾಯ. ಉದಾಹರಣೆಗೆ 1 ಸಿಗರೇಟಿನ ಬೆಲೆ ರೂ. 20 ಆದರೆ ಒಂದು ದಿನಕ್ಕೆ 1 ಪ್ಯಾಕ್ ಸಿಗರೇಟ್ ಸೇದಿದರೆ 200 ರೂ ಆಗುತ್ತದೆ. ತಿಂಗಳಿಗೆ 6000, ವರ್ಷಕ್ಕೆ 72,000 ಖರ್ಚಾಗುತ್ತದೆ. ಬರೀ ಸಿಗರೇಟಿನ ಚಟವನ್ನೇ ಬಿಟ್ಟರೆ ಸಾಕು 72,000 ಹಣ ಉಳಿಯುತ್ತದೆ. ಇನ್ನೂ ಗುಟ್ಕಾ, ಕುಡಿತದಿಂದ ಎಷ್ಟು ಹಣ ಉಳಿಸಬಹುದು. ಈ ಹಣವನ್ನು ಕಷ್ಟದಲ್ಲಿರುವ ಎಷ್ಟೋ ಬಡವರ ಜೀವನಕ್ಕೆ ಸದುಪಯೋಗಪಡಿಸಬಹುದು ಯೋಚಿಸಿ?

ಕರುಣಾ ಜೀವ ಕಲ್ಯಾಣ ಟ್ರಸ್ಟ್ ಸಾಕಷ್ಟು ಸಮಾಜೋಪಯೋಗಿ ಕಾರ್ಯಗಳಾದ ಬಡ ವಿದ್ಯಾರ್ಥಿಗಳಿಗೆ ಸ್ಕಾಲರ್ ಶಿಪ್ ವಿತರಣೆ, ಪಶು ಪಕ್ಷಿಗಳಿಗೆ ಕುಡಿಯುವ ನೀರಿನ ಸೌಲಭ್ಯ, ಗಿಡಗಳನ್ನು ಬೆಳೆಸುವುದು ಹೀಗೆ ಹಲವಾರು ಸತ್ಕಾರ್ಯಗಳನ್ನು ಮಾಡುತ್ತಲಿದೆ.

ದಯವಿಟ್ಟು ನೀವು ಡಿಡಿಟಿ (ಡ್ರಿಂಕ್ಸ್, ಡ್ರಗ್ಸ್, ಟೊಬ್ಯಾಕೊ) ಕ್ಕೆ ವಿನಿಯೋಗಿಸುವ ಹಣವನ್ನು ಕರುಣಾ ಟ್ರಸ್ಟಿನ ಸತ್ಕಾರ್ಯಗಳಿಗೆ ದಾನವಾಗಿ ನೀಡಿದರೆ ನಿಮ್ಮಿಂದ ಹಲವಾರು ಬಡವರ ಜೀವನ ನಿರ್ವಹಣೆಗೆ ಸಹಕಾರಿಯಾಗುತ್ತಿದೆ.

ಒಂದು ದೇಶವನ್ನು ಸಂಪೂರ್ಣ ನಾಶ ಮಾಡಲು ಅಣುಬಾಂಬ್, ನ್ಯೂಕ್ಲಿಯರ್ ಮಿಸ್ಸೈಲ್, ಶತ್ರು ರಾಷ್ಟ ಯಾವುದೂ ಬೇಕಿಲ್ಲ. ಆ ದೇಶದ ಯುವ ಜನತೆಯನ್ನು ದುಶ್ಚಟಗಳ ದಾಸರನ್ನಾಗಿ ಮಾಡಿದರಷ್ಟೆ ಸಾಕು. ಯುವಕರ ನಾಶದಿಂದ ಆ ನಾಡು ಅನಾಥ ಮಕ್ಕಳ, ವಿಧವೆಯರ, ಮುದುಕರ ಕೊಂಪೆಯಾಗುತ್ತದೆ ಎಂದು ದಾರ್ಶನಿಕರು ತಿಳಿಸಿದ್ದಾರೆ. ನಮ್ಮ ಸಿರಿಗನ್ನಡ ನಾಡನ್ನು ಕೊಂಪೆಯಾಗಿ ಮಾಡದಂತೆ "ಸದಾನಂದದ ಸರ್ವೋದಯದ ಸಿರಿಗಂಧದ ನಾಡಾಗಿ" ನಿರ್ಮಿಸುವ ನಿರ್ಧಾರ ಸಮಯೋಚಿತ ಆಲೋಚಿಸಿ.

## ನಗರಸಭೆಯಿಂದ ಸಾರ್ವಜನಿಕರ ಗಮನಕ್ಕೆ ನೀರು ಪೂರೈಕೆಯಲ್ಲಿ ವ್ಯತ್ಯಯವಾದಲ್ಲಿ ಟ್ಯಾಂಕರ್ ಮೂಲಕ ಉಚಿತ ನೀರು ಪೂರೈಕೆಗೆ ಪರ್ಯಾಯ ವ್ಯವಸ್ಥೆ

**ಗದಗ:** ಗದಗ ಬೆಟಗೇರಿಯ ಅವಳಿ ನಗರಕ್ಕೆ ದಿನಾಂಕ:19–06–2025 ರಿಂದ 27–06–2025 ರವರೆಗೆ ವಿವಿಧ ತಾಂತ್ರಿಕ ದೋಷಗಳಿಂದ ತುಂಗಭದ್ರಾ ನದಿ ನೀರು ಪೂರೈಕೆಯಲ್ಲಿ ತೊಂದರೆಯಾಗಿದೆ. ಈಗಾಗಲೇ ಈ ಕುರಿತು ದಿನಂಪ್ರತಿ ಪತ್ರಿಕೆಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಗಮನಕ್ಕೆ ತರಲಾಗಿದೆ.ದಿನಾಂಕ:28–06–2025 ರಿಂದ ಯಥಾವತ್ತಾಗಿ ಅವಳಿ ನಗರದಲ್ಲಿ ತುಂಗಭದ್ರಾ ನದಿಯ ಕುಡಿಯುವ ನೀರಿನ ಪೂರೈಕೆಯನ್ನು ಪ್ರಾರಂಭಿಸಲಾಗಿದೆ. ಒಂದು ವೇಳೆ ನೀರು ಪೂರೈಕೆಯಲ್ಲಿ ವಿಳಂಬವಾದ ಪ್ರದೇಶಗಳಿಗೆ ಈ ಕಚೇರಿಯಿಂದ ನಿಯೋಜಿಸಲಾದ ಟ್ಯಾಂಕರ್ ಗಳ ಮೂಲಕ ನೀರು ಪೂರೈಕೆಯನ್ನು ಉಚಿತವಾಗಿ ಮಾಡಲಾಗುವುದು. ದಯವಿಟ್ಟು ಸಾರ್ವಜನಿಕರು ನಗರಸಭೆ ಕಚೇರಿಯೊಂದಿಗೆ ಸಹಕರಿಸಲು ವಿನಂತಿಸಲಾಗಿದೆ ಹಾಗೂ ಈ ಮುಂದಿನ ದಿನಗಳಲ್ಲಿ ವಾರ್ಡುಗಳಲ್ಲಿ ನೀರಿನ ಪೂರೈಕೆಯ ಸಮಸ್ಯೆ ಉಂಟಾಗಿದ್ದಲ್ಲಿ ವಾರ್ಡ ನಂ. 1 ರಿಂದ 17 – ಶ್ರೀ ಮತಿ ಸಿಂಧೂ ಕಿರಿಯ ಅಭಿಯಂತರರು ಮೋಬೈಲ್ ಸಂಖ್ಯೆ: 8088498021 ಹಾಗೂ ವಾರ್ಡ ನಂ 18 ರಿಂದ 35 ರವರೆಗೆ ಶ್ರೀ ಸಿದ್ದು ಹುಣಸೀಮರದ ಕಿರಿಯ ಅಭಿಯಂತರರು ಮೋಬೈಲ್ ಸಂಖ್ಯೆ: 8088782451 ಗಳಿಗೆ ಸಂಪರ್ಕಿಸಿ ನೀರಿನ ಟ್ಯಾಂಕರ್ ಅನ್ನು ಪಡೆಯಲು ಈ ಮೂಲಕ ಕೋರಿದೆ.

ಅಲ್ಲದೇ ಯಾವುದೇ ಬೋರ್ ವೆಲ್ ಗಳು, ಪೈಪ್ ಲೈನ್ ಗಳು ಇತರೆ ದುರಸ್ತಿಗಳು ಬಂದಲ್ಲಿ ಈ ಕಾರ್ಯಕ್ಕೆ ಸಂಬಂಧಪಟ್ಟ ಮೇಲಿನ ಕಿರಿಯ ಅಭಿಯಂತರರನ್ನು ಸಂಪರ್ಕಿಸಲು ಸಾರ್ವಜನಿಕರಲ್ಲಿ ಗದಗ ಬೆಟಗೇರಿ ನಗರಸಭೆಯ ಪೌರಾಯುಕ್ತರು ಕೋರಿದ್ದಾರೆ.

# ಆದಿಶಕ್ತಿ ಮಾರಿಯಮ್ಮ ಭಕ್ತಿಗೀತೆ ಲೋಕಾರ್ಪಣೆ



ನಗರದ ನಾರಾಯಣಪುರದ ಶ್ರೀ ಆದಿಶಕ್ತಿ ಮಾರಿಯಮ್ಮದೇವಾಲಯದಲ್ಲಿಇತ್ತೀಚೆಗೆ ಏರ್ಪಡಿಸಿದ್ದ ಸಮಾರಂಭದಲ್ಲಿ ಭಕ್ತಿಗೀತೆ ಲೋಕಾರ್ಪಣೆ ಮಾಡಲಾಯಿತು.

**ಚಿಕ್ಕಮಗಳೂರು:** ನಮ್ಮನ್ನೆಲ್ಲಾ ನಿಯಂತ್ರಿಸುತ್ತಿರುವಕಾಣದ ಶಕ್ತಿಯೊಂದಿದೆ. ಅದನ್ನು ನಾವು ಒಂದೊಂದು ಹೆಸರಿನಿಂದಕರೆಯುತ್ತೇವೆ. ಒಂದೊಂದುರೀತಿ ಪೂಜಿಸುತ್ತೇವೆ. ಭಕ್ತಿಗೀತೆಯೂ ಈ ಪೂಜೆಯಒಂದು ವಿಧಾನಎಂದು ಕೆಂಪನಹಳ್ಳಿಯ ಶಿಕ್ಷಕ, ಗಾಯಕ, ಸುರೇಂದ್ರನಾಯಕ್ ತಿಳಿಸಿದರು.

ಕಲ್ಕಟ್ಟೆ ಪುಸ್ತಕದ ಮನೆ, ಅಖಿಲ ಭಾರತೀಯ ಸಾಹಿತ್ಯ ಪರಿಷತ್, ಶ್ರೀ ಗುರುಕೃಪಾ ಸಂಗೀತ ಸೇವಾ ಸಂಘ, ಸೂರಂಕಣ, ದೀವಿಗೆ ಬಳಗ ನಗರದ ನಾರಾಯಣಪುರದ ಶ್ರೀ ಆದಿಶಕ್ತಿ ಮಾರಿಯಮ್ಮದೇವಾಲಯದಲ್ಲಿಇತ್ತೀಚೆಗೆ ಏರ್ಪಡಿಸಿದ್ದ ಭಕ್ತಿಗೀತೆ ಲೋಕಾರ್ಪಣೆ ಸಮಾರಂಭದಲ್ಲಿಅವರು ಮಾತನಾಡಿದರು.

ನಾಗರಾಜರಾವ್ ಕಲ್ಕಟ್ಟೆ, ರೇಖಾ ನಾಗರಾಜರಾವ್ ಹಾಗೂ ಕೆ.ಎನ್.ನಾಗಭೂಷಣ್‌ಅವರ ಕಾಂಬಿನೇಶನ್‌ನಲ್ಲಿ ಹೆಚ್.ಎನ್.ಮಲ್ಲೇಶರಾವ್ ಸ್ಮರಣೆಯಲ್ಲಿ ಮೂಡಿ ಬರುತ್ತಿರುವಕಲ್ಕಟ್ಟೆ ಗಾನ ದೀವಿಗೆ ಸರಣಿಯ ಮೂವತ್ತೂರನೆಯ ಈ ಹಾಡು, ಇಲ್ಲಿ ಆಸ್ತಿಕರ ಪಾಲಿಗೆ ನಿಜಕ್ಕೂ ಹೆಮ್ಮೆಯನ್ನುತರುವಂತಿದೆ. ಗಾನಕ್ಕೆ ದೇವಿಯೂ ತಲೆದೂಗುತ್ತಾಳೆ. ಇಂತಹ ಹೆಜ್ಜೆಗಳೇ ಧರ್ಮದ ಮಹಾನಡಿಗೆಗೆಕಾರಣವಾಗುತ್ತವೆಎಂದೂಅವರು ನುಡಿದರು. ನಿವೃತ್ತ ಪ್ರಾಚಾರ್ಯರಾದ ಚಾಂದಿನಿ ಚಮಕ್ ಮಾತನಾಡಿ, ಮಾನವೀಯತೆಯೇ ಆಸ್ತಿಕತೆಯ ಮೂಲ ಧಾತು. ದೇವರು, ಪೂಜೆ–ಪುನಸ್ಕಾರ, ಆಚರಣೆಗಳು ನಮ್ಮನ್ನು ಸುಸಂಸ್ಕೃತರನ್ನಾಗಿಸಲು ಪ್ರೇರಣೆ ನೀಡುತ್ತವೆ. ನಾದೋಪಾಸನೆಯುಅತ್ಯಂತ ಶ್ರೇಷ್ಠವಾದುದುಎಂದರು. ಕಲ್ಕಟ್ಟೆ ಪುಸ್ತಕದ ಮನೆಯರೇಖಾ ನಾಗರಾಜರಾವ್ ಮಾತನಾಡಿ, ನಿತ್ಯವೂ ಭಕ್ತಿಗೀತೆ ಬರೆಯುವುದು, ಹಾಡುವುದು, ರಾಗ ಸಂಯೋಜಿಸುವುದು, ಕೇಳುವುದು ಇವೆಲ್ಲವೂ ನಮ್ಮ ಮನಸ್ಸನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ನಿಜಕ್ಕೂ ಪ್ರೇರಣೆ ನೀಡುತ್ತವೆ. ಭಜನೆಗಳಿಂದ ಅಂತರಂಗ, ಬಹಿರಂಗ ಶುದ್ಧಿಯಾಗುತ್ತದೆಎಂದರು.

ಗಾಯಕ ನಾಗರಾಜರಾವ್‌ಕಲ್ಕಟ್ಟೆ ಮಾತನಾಡಿತಂದೆಯಿಂದ ಬಂದ ಈ ವಿದ್ಯೆಯನ್ನು ಮುಂದುವರಿಸಿಕೊಂಡು ಹೋಗುತ್ತಿದ್ದೇನೆ ಅಷ್ಟೆ. ಈ ಹಾಡು ಬರೆಯುವುದರಲ್ಲಿ ನನ್ನದೇನೂ ಹೆಚ್ಚುಗಾರಿಕೆಇಲ್ಲಎಂದರು. ಸಮಾರಂಭದಲ್ಲಿದೇವಾಲಯದ ಸೇವಾ ಸಮಿತಿಯಉಪಾಧ್ಯಕ್ಷ ಮುರುಗನ್, ಪ್ರಧಾನ ಕಾರ್ಯದರ್ಶಿ ಎ.ವೆಂಕಟೇಶ್, ಸಹಕಾರ್ಯದರ್ಶಿ ವಿ.ಡಿ.ಚಿನ್ನಪ್ಪ, ಪದಾಧಿಕಾರಿಗಳು, ಭಕ್ತರುಗಳು ಭಾಗವಹಿಸಿದ್ದರು.

## ಕೋಚಿಂಗ್ ಸೆಂಟರ್‌ಗಳ ನೋಂದಣಿ ಕಡ್ಡಾಯ

**ಶಿವಮೊಗ್ಗ:** ಕರ್ನಾಟಕ ಶಿಕ್ಷಣ ಕಾಯ್ದೆ 1983 ಅನುಚ್ಛೇದ 35ರ ಪ್ರಕಾರ ಹಾಗೂ ಕರ್ನಾಟಕ ಟ್ಯುಟೋರಿಯಲ್ ಇನ್ಸಿಟ್ಯೂಷನ್ಸ್ ನಿಯಮಗಳು 2001 ಈ ನಿಯಮವು ಸರ್ಕಾರದ ಅಧಿಸೂಚನೆ ಇಡಿ 43 ವಿವಧ 2000, ದಿ: 05/03/2002 ರಿಂದ ಜಾರಿಗೆ ಬಂದಿದ್ದು, ಈ ನಿಯಮಗಳ ಅಡಿಯಲ್ಲಿ ಪದವಿ ಪೂರ್ವ ಶಿಕ್ಷಣಕ್ಕೆಸಂಬಂಧಿಸಿದ ಕೋಚಿಂಗ್ ಸೆಂಟರ್/ ಸಂಸ್ಥೆಗಳನ್ನು ನಡೆಸಲು ಉದ್ದೇಶಿಸಿದ ಹಾಗೂ ಈಗಾಗಲೇ ನಡೆಸುತ್ತಿರುವ ಕೋಚಿಂಗ್ ಸೆಂಟರ್/ಸಂಸ್ಥೆಗಳನ್ನು ಕಡ್ಡಾಯವಾಗಿ ನೋಂದಾಯಿಸಬೇಕಾಗಿದ್ದು, ಮತ್ತು ಪ್ರತಿ ವರ್ಷ ನವೀಕರಿಸಿಕೊಳ್ಳಬೇಕು.

## ಅರ್ಜಿ ಆಹ್ವಾನ

**ಬಳ್ಳಾರಿ:** ಕಂಪ್ಲಿ ಪುರಸಭೆ ವ್ಯಾಪ್ತಿಯಲ್ಲಿ 2025–26ನೇ ಸಾಲಿಗೆ ಪ್ರಧಾನಮಂತ್ರಿ ಆವಾಸ್ (ನಗರ) 2.0 ಯೋಜನೆಯಡಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.ಈ ಯೋಜನೆಯಡಿ ಒಂಟಿ ಮಹಿಳೆಯರು, ಅಂಗವಿಕಲರು, ಹಿರಿಯ ನಾಗರಿಕರು, ತೃತೀಯಲಿಂಗಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ವರ್ಗ, ಸ್ವಚ್ಛತಾ ಕಾರ್ಮಿಕರು, ಪಿಎಂ ಸ್ವಾನಿಧಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪ್ಯಾರಿಗಳು ಮತ್ತು ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕರು, ವಲಸೆ ಬಂದ ಕುಟುಂಬದವರು ಅರ್ಜಿ ಸಲ್ಲಿಸಬಹುದು.

# ಬ್ರ್ಯಾಂಡ್ ಬೆಂಗಳೂರು ನಿರ್ಮಾತೃಕೆಂಪೇಗೌಡರು :ಶ್ರೇಯಸ್ ಪಟೇಲ್



**ಹಾಸನ** : ಗ್ರೇಟರ್ ಬೆಂಗಳೂರು, ಬ್ರಾಂಡ್ ಬೆಂಗಳೂರು ನಿರ್ಮಾಣಕ್ಕೆಕಾರಣಕರ್ತರಾದಕೆಂಪೇಗೌಡರನ್ನು ನಾವೆಲ್ಲರೂ ಸ್ಮರಿಸೋಣಜೊತೆಗೆಅವರು ಹಾಕಿ ಕೊಟ್ಟಿರುವ ಮಾರ್ಗದರ್ಶನಗಳನ್ನು ನಮ್ಮ ಮುಂದಿನ ಪೀಳಿಗೆಗೆ ತಿಳಿ ಹೇಳುವ ಕೆಲಸವನ್ನು ಮಾಡೋಣಎಂದು ಸಂಸದರಾದ ಶ್ರೇಯಸ್ ಪಟೇಲ್‌ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿಇಲಾಖೆಯ ವತಿಯಿಂದ ಹಾಸನಾಂಬ ಕಲಾಕ್ಷೇತ್ರದಲ್ಲಿಂದುಆಯೋಜಿಸಿದ್ದ ನಾಡಪ್ರಭು ಶ್ರೀ ಕೆಂಪೇಗೌಡಜಯಂತಿಯಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದಅವರು ಬೆಂಗಳೂರು ಎಂದರೆಅದುಕೆಂಪೇಗೌಡರಾಗಿದ್ದಾರೆ. ಇಡೀ ಪ್ರಪಂಚವೇ ಬೆಂಗಳೂರಿನಕಡೆತಿರುಗಿ ನೋಡುವಂತಹ ಕೆಲಸವನ್ನುಕೆಂಪೇಗೌಡಅವರುಮಾಡಿದ್ದಾರೆ. ಮಹಿಳೆಯರ ಸಬಲೀಕರಣಅತ್ಯಾಧುನಿಕ ನಗರ ನಿರ್ಮಾಣ, ಕೆರೆಕಟ್ಟೆಗಳ ಸಂರಕ್ಷಣೆ ಮಾಡಿದ್ದಾರೆ. ಅವರ ಮುಂದಾಲೋಚನೆಯಲ್ಲಿನಿರ್ಮಾಣಗೊಂಡಬೆಂಗಳೂರು ನಗರವನ್ನುನಾವು ಅನುಭವಿಸುತ್ತಿದ್ದೇವೆಇದು ನಮಗೆ ಹೆಮ್ಮೆತರುತ್ತದೆಎಂದರು.ಕೆಂಪೇಗೌಡಅವರು ಕೇವಲ ಒಂದುಜಾತಿಜನಾಂಗಕ್ಕೆ ಸೀಮಿತವಾಗದೆ. ಇಡೀದೇಶಇಡಿ ಪ್ರಪಂಚಕಂಡಂತಹಮಹಾನ್ ವ್ಯಕ್ತಿಆಗಿದ್ದಾರೆ. ದೀನ ದಲಿತರು ಬಡವರು ಹಿಂದುಳಿದ ವರ್ಗದವರುಎಲ್ಲರೂ ಬೆಂಗಳೂರಿನಲ್ಲಿಂದು ಜೀವನ ಮಾಡುತ್ತಿದ್ದೇವೆಎಂದರೆಅದುಅವರು ಹಾಕಿ ಕೊಟ್ಟಿರುವದಾರಿಮತ್ತುಮಾರ್ಗದರ್ಶನದಿಂದಆಗಿದೆಎಂದರಲ್ಲದೆ ಶಾಸಕರು ಹಾಗೂ ಅಧ್ಯಕ್ಷರು ನಾವು ಸೇರಿದೇವಾನಾಥ ಸ್ವಾಮೀಜಿಯವರ ಸಾನಿಧ್ಯದಲ್ಲಿ ಮುಂದಿನ ಬಾರಿಗೆಕೆಂಪೇಗೌಡಅವರಕಂಚಿನ ಪುತ್ಥಳಿಯನ್ನು ಅನಾವರಣ ಮಾಡುತ್ತೇವೆಎಂದು ತಿಳಿಸಿದರು.

ರಾಜ್ಯ ಸರ್ಕಾರಿ ನೌಕರರ ಸಂಘದಜಿಲ್ಲಾಧ್ಯಕ್ಷರಾದಬಿ.ಪಿಕೃಷ್ಣೇಗೌಡಅವರು ಮಾತನಾಡಿಕೆಂಪೇಗೌಡಅವರುವಿವಿಧಕಸುಬುಗಳಿಗೆತಕ್ಕನಾದ ಮಾರುಕಟ್ಟೆ ವ್ಯವಸ್ಥೆಯನ್ನು ನಿರ್ಮಿಸಿದ್ದಾರೆ. ಆ ಮಾರುಕಟ್ಟೆಗಳಿಗೆಲ್ಲ ಕೋಟೆಯನ್ನು ನಿರ್ಮಾಣ ಮಾಡಿದ್ದರು. ರೈತರ ಬಗ್ಗೆ ಕಾಳಜಿಯನ್ನ ವಹಿಸಿ ಕೆರೆಕಟ್ಟೆ,ರಸ್ತೆಗಳನ್ನುಅಭಿವೃದ್ಧಿಪಡಿಸಿಇಡೀ ಪ್ರಪಂಚದಲ್ಲಿ ಬೆಂಗಳೂರು ಎದ್ದುಕಾಣುವ ಹಾಗೆ ಮಾಡಿದ್ದುಕೆಂಪೇಗೌಡರಾಗಿದ್ದಾರೆ. . ಆತ್ಮವಿಶ್ವಾಸ, ಸ್ವಾಭಿಮಾನ ಮೂಡಿಸಿದ ವ್ಯಕ್ತಿಯಾರಾಗಿದ್ದಾರೆ. ಇಡೀ ಸಮುದಾಯಕ್ಕೆ ಮಾರ್ಗದರ್ಶಕರಾಗಿದ್ದಾರೆಅವರ ನಡೆ, ನುಡಿ, ಆದರ್ಶಗಳು ಮುಂದಿನ ಪೀಳಿಗೆಗೆ ಮಾದರಿಯಾಗಬೇಕು.ಕೋಟೆ, ಪೇಟೆ,ಕೆರೆ–ಕಟ್ಟೆ ಹಾಗೂ ಗುಡಿ ಹೀಗೆ ಈ ನಾಲ್ಕು ಉದ್ದೇಶಗಳನ್ನು ಇಟ್ಟುಕೊಂಡು ಬೆಂಗಳೂರನ್ನು ನಿರ್ಮಾಣ ಮಾಡಿದಂತಹ ಮಹಾನ್ ವ್ಯಕ್ತಿಕೆಂಪೇಗೌಡರಾಗಿದ್ದಾರೆಎಂದು ಹೇಳಿದರು.

ನಾಡಪ್ರಭುಅವರ ಸೊಸೆಯುತನ್ನನ್ನೇತಾನು ಬಲಿಕೊಟ್ಟುಕೋಟೆಕಟ್ಟಲು ಸಹಾಯ ಮಾಡಿದ್ದಾರೆ ಹಾಗಾಗಿಬೆಂಗಳೂರು ನಿರ್ಮಾಣದಲ್ಲಿಅವರಕುಟುಂಬದ ಪಾತ್ರವು ಬಹು ದೊಡ್ಡಕೊಡುಗೆಯಾಗಿದೆಇವರು ಅಂದಿನ ಕಾಲದಲ್ಲಿ ಬೆಂಗಳೂರಿನಲ್ಲಿ 54ಪೇಟೆಗಳನ್ನು ತೆರೆದಿದ್ದರು. ಇವರ ಸಾಮ್ರಾಜ್ಯದಲ್ಲಿ ಕಂಚು, ಚಿನ್ನ, ಬೆಳ್ಳಿ ಹಾಗೂ ಅಕ್ಕಪಕ್ಕದರಾಜ್ಯದಎಲ್ಲಾರೀತಿಯ ನಾಣ್ಯಗಳು ಚಲಾವಣೆಯಲ್ಲಿದ್ದವು. ಇದಷ್ಟೇಅಲ್ಲದೆ ಸಾವಿರಾರು ಮರಗಿಡಗಳನ್ನು ಬೆಳೆಸಿದ್ದಾರೆ. ಇವರುಕೂಲಿಕಾರರಿಗೆ, ಕೃಷಿ ಕಾರ್ಯಕ್ಕೆ,ದುಡಿಯುವ ವರ್ಗದವರಿಗೆ ಪ್ರೀತಿ ಪಾತ್ರರಾಗಿದ್ದರು. ಕೆಲಸಗಾರರಿಗೆ ಅನುಕೂಲವಾಗಲು ಪ್ರತಿಗ್ರಾಮದಲ್ಲೂ ಹೋರೆಕಲ್ಲನ್ನು ಮಾಡಿಸಿದ್ದರು. ಇಂತಹ ಮಹಾತ್ಮರನ್ನು ನಾವೆಲ್ಲರೂ ಸ್ಮರಿಸಿಕೊಂಡು ಅವರ ಹಾದಿಯಲ್ಲಿ ನಡೆಯಬೇಕುಎಂದುಕೆಂಪೇಗೌಡಅವರಜೀವನದಕುರಿತಾಗಿ ಸವಿವರವಾಗಿಉಪನ್ಯಾಸ ನೀಡಿದರು.

ಇದೇಸಂದರ್ಭದಲ್ಲಿಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿ.ಯು.ಸಿಯಲ್ಲಿಅತಿ ಹೆಚ್ಚು ಅಂಕಗಳನ್ನ ಗಳಿಸಿ ಜಿಲ್ಲೆಗೆಕೀರ್ತಿತಂದಿರುವಂತಹ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೆಂಕಟೇಶ್ ನಾಯ್ಡು,ಕನ್ನಡ ಸಾಹಿತ್ಯ ಪರಿಷತ್ತಿನಜಿಲ್ಲಾಧ್ಯಕ್ಷರಾದಡಾ.ಹೆಚ್.ಎಲ್. ಮಲ್ಲೇಶ್‌ಗೌಡ,ರಾಜ್ಯಒಕ್ಕಲಿಗರ ಸಂಘದನಿರ್ದೇಶಕರಾದರಘುಗೌಡ,ಕನ್ನಡ ಮತ್ತು ಸಂಸ್ಕೃತಿಇಲಾಖೆಯ ಸಹಾಯಕ

# ಪೌರಕಾರ್ಮಿಕರಿಗೆ ಸೌಲಭ್ಯಗಳು ತಲುಪಿ–ಸದ್ಬಳಕೆ ಆಗಬೇಕು




**ಶಿವಮೊಗ್ಗ:** ಜಿಲ್ಲೆಯಲ್ಲಿ ಸಫಾಯಿ ಕರ್ಮಚಾರಿಗಳು ಮತ್ತು ಪೌರಕಾರ್ಮಿಕರಿಗೆ ದೊರಕಬೇಕಾದ ಎಲ್ಲ ಸೌಲಭ್ಯಗಳನ್ನು ನೀಡಬೇಕು ಹಾಗೂ ಅವರಲ್ಲಿ ಸೌಲಭ್ಯಗಳ ಕುರಿತು ಅರಿವು ಮೂಡಿಸುವ ಕೆಲಸ ಮಾಡಬೇಕೆಂದು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಕಾರ್ಯದರ್ಶಿಗಳಾದ ಚಂದ್ರಕಲಾ ಸೂಚಿಸಿದರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಶುಕ್ರವಾರ ಜಿ.ಪಂ.ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಚ್ಛತಾ ಕಾರ್ಮಿಕರು ಹಾಗೂ ಪೌರ ಕಾರ್ಮಿಕರ ಕುರಿತಾದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಾರ್ಡ್ ನಂ 21 ಸೇರಿದಂತೆ ಕೆಲವೆಡೆ ಇಂದು ಕ್ಷೇತ್ರಭೇಟಿ ಮಾಡಿದಾಗ ಪೌರಕಾರ್ಮಿಕರು ಸಮವಸ್ತ್ರ, ಗ್ಲೋವ್ಸ್ ಇತರೆ ಸುರಕ್ಷತಾ ಪರಿಕರ ಧರಿಸದೇ ಇರುವುದು ಕಂಡುಬಂತು. ಆದ್ದರಿಂದ ಆರೋಗ್ಯ ನಿರೀಕ್ಷಕರು ಮತ್ತು ಮೇಸ್ತ್ರಿಗಳು ಸುರಕ್ಷತಾ ಪರಿಕರಗಳನ್ನು ಧರಿಸುವಂತೆ ಪ್ರೇರೇಪಿಸಬೇಕು. ಹಾಗೂ ಏಜೆನ್ಸಿಗಳು ಮತ್ತು ಪೌರಸಂಸ್ಥೆಗಳು ಧರಿಸುವುದನ್ನು ಕಡ್ಡಾಯಗೊಳಿಸಬೇಕು. ಇಲ್ಲವಾದಲ್ಲಿ ಅನೇಕ ಆರೋಗ್ಯದ ಸಮಸ್ಯೆಗಳು ಉಂಟಾಗಿ ಗಂಭೀರವಾಗಿ ಪರಿಣಮಿಸುತ್ತವೆ ಎಂದು ಎಚ್ಚರಿಕೆ ನೀಡಿದರು.

ಪೌರಕಾರ್ಮಿಕರು, ಸಫಾಯಿ ಕರ್ಮಚಾರಿಗಳ ಆರೋಗ್ಯ ಬಹಳ ಮುಖ್ಯ. ಇವರು ನಗರವನ್ನು ಸ್ವಚ್ಚಗೊಳಿಸಿದಂತೆ ತಮ್ಮ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕು. ಅವರ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ನಮ್ಮೆಲ್ಲರ ಜವಾಬ್ದಾರಿ ಕೂಡ ಆಗಿದೆ ಎಂದರು.

ಏಜೆನ್ಸಿಯವರು, ಸ್ಪ್ರೇ ಮಾಡುವ ಪೌರಕಾರ್ಮಿಕರಿಗೆ ಆಕ್ಸಿಜನ್ ಮಾಸ್ಕ್ ನೀಡಬೇಕು, ಡಂಪಿಂಗ್ ಯಾರ್ಡ್‌ಗಳಲ್ಲಿ ಕೆಲಸ ಮಾಡುವವರು ಸೇರಿದಂತೆ ಎಲ್ಲ ಪೌರಕಾರ್ಮಿಕರಿಗೆ ಸಮಾನ ಸೌಲಭ್ಯಗಳನ್ನು ನೀಡಬೇಕು. ಮಳೆಗಾಲ ಆರಂಭವಾಗಿದ್ದು ರೈನ್ ಕೋಟ್ ನೀಡಬೇಕು. ಶೌಚಾಲಯಗಳು, ವಿಶ್ರಾಂತಿ ಗೃಹಗಳು ಸಮರ್ಪಕವಾಗಿರುವಂತೆ ಜಿಲ್ಲಾ ಪೌರಕಾರ್ಮಿಕ ಸಂಘದ ಅಧ್ಯಕ್ಷರಾದ ಗೋವಿಂದಪ್ಪ ಮಾತನಾಡಿ, ಜಿಲ್ಲೆಯಲ್ಲಿ ಪೌರಕಾರ್ಮಿಕರಿಗೆ ವಸತಿ ಒದಗಿಸುವ ಗೃಹಭಾಗ್ಯ ಯೋಜನೆ 2016 ರಲ್ಲಿ ಆರಂಭವಾಗಿದ್ದು ತುಂಬಾ ವಿಳಂಬವಾಗುತ್ತಿದೆ. ಆದ್ದರಿಂದ ವಸತಿ ಕಾಮಗಾರಿಯನ್ನು ಚುರುಕುಗೊಳಿಸಿ ಶೀಘ್ರದಲ್ಲೇ ಮನೆಗಳನ್ನು ಹಂಚಿಕೆ ಮಾಡಬೇಕು. ನೇರಪಾವತಿ ಮತ್ತು ಹೊರಗುತ್ತಿಗೆ ಕಾರ್ಮಿಕರಿಗೂ ಗೃಹಭಾಗ್ಯ ಯೋಜನೆ ಸೌಲಭ್ಯ ನೀಡಬೇಕು. ಹೊರಗುತ್ತಿಗೆ ಕಾರ್ಮಿಕರನ್ನು ನೇರ ಪಾವತಿ ವ್ಯಾಪ್ತಿಗೆ ತರಬೇಕು ಹಾಗೂ ಕಾರ್ಮಿಕರ ಸಿಂಗಾಪುರ ಪ್ರವಾಸ ಕೂಡ ವಿಳಂಬವಾಗುತ್ತಿದ್ದು ಶೀಘ್ರದಲ್ಲೇ ವ್ಯವಸ್ಥೆ ಮಾಡುವಂತೆ ಮನವಿ ಮಾಡಿದರು.

ಸಭೆಯಲ್ಲಿ ಮಹಾನಗರಪಾಲಿಕೆ ಆಯುಕ್ತರಾದ ಕೆ.ಮಾಯಣ್ಣಗೌಡ, ಜಿ.ಪಂ ಉಪಕಾರ್ಯದರ್ಶಿ–2 ಜಯಲಕ್ಷ್ಮಿ ಆಯೋಗದ ಅಧಿಕಾರಿ ರಾಘವೇಂದ್ರ, ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನ–ಸಮಸ್ಯೆಗಳಿದ್ದಲ್ಲಿ ಸಂಪರ್ಕಿಸಿ

**ಶಿವಮೊಗ್ಗ:** ಶಿವಮೊಗ್ಗ ತಾಲ್ಲೂಕಿನಲ್ಲಿ ಐದು ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನಗೊಳ್ಳುತ್ತಿದ್ದು, ಇದಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಯಾವುದೇ ಸಮಸ್ಯೆಗಳು ಇದ್ದಲ್ಲಿ ಗ್ಯಾರಂಟಿ ಯೋಜನೆಯಗಳ ಅನುಷಾನ ಸಮಿತಿಯನ್ನು ಸಂಪರ್ಕಿಸಬಹುದೆಂದು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷಾನ ಸಮಿತಿ ಅಧ್ಯಕ್ಷರಾದ ಮಧು ಹೆಚ್. ಎಂ ತಿಳಿಸಿದರು.

ಶುಕ್ರವಾರ ನಗರದ ತಾಲ್ಲೂಕು ಕಛೇರಿಯಲ್ಲಿ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾದ ಮಹತ್ವಕಾಂಕ್ಷಿ ಐದು ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮಿ, ಶಕ್ತಿ, ಗೃಹಜ್ಯೋತಿ, ಯುವನಿಧಿ ಯೋಜನೆಗಳು ಜನ ಸಾಮಾನ್ಯರನ್ನು ಯಶಸ್ವಿಯಾಗಿ ತಲುಪುತ್ತಿದ್ದು, ಜನ ಜೀವನ ಸುಧಾರಣೆ ಕಾಣುತ್ತಿದೆ ಎಂದರು.

ಸದಸ್ಯರುಗೃಹಲಕ್ಷ್ಮಿ ಯೋಜನೆಯಡಿ ಜಿಎಸ್‌ಟಿ ಗೆ ಸಂಬಂಧಿಸಿದ ಕೆಲವು ಲೋಪದೋಷಗಳು ಕಂಡು ಬರುತ್ತಿರುವುದು ಗಮನಕ್ಕೆ ಬಂದಿದ್ದು ಅವುಗಳನ್ನು ನಿವಾರಣೆ ಮಾಡುವ ಕೆಲಸ ಆಗಬೇಕಿದೆ ಎಂದರು. ಕೆಲವು ಮನೆಗಳಲ್ಲಿ ಮನೆಯ ಯಾಜಮಾನಿಯ ಸಾವು ಆದ ಸಮಯದಲ್ಲಿ ಅದೇ ಮನೆಯ ಬೇರೆ ಸದಸ್ಯರನ್ನು ಮನೆಯ ಯಜಮಾನಿಯನ್ನಾಗಿ ಮಾಡಿ ಸೌಲಭ್ಯ ಮುಂದುವರಿಸುವಂತೆ ಹೇಳಿದರು.

ಅನ್ನಭಾಗ್ಯ ಯೋಜನೆಯು ಸರಿಯಾದ ರೀತಿಯಲ್ಲಿ ಎಲ್ಲಾ ಪಡಿತರ ಕುಟುಂಬಗಳಿಗೆ ಸರಬರಾಜು ಆಗುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಸಿ, ಸರಿಯಾದ ರೀತಿಯಲ್ಲಿ ವಿತರಣೆ ಆಗದ ಪಡಿತರ ಅಂಗಡಿಯ ಮಾಹಿತಿಯನ್ನು ಪಡೆದು, ಸ್ಥಳದಲ್ಲೇ ಅಧಿಕಾರಿಗಳೊಂದಿಗೆ ಮಾತಾನಾಡಿ ಸಮಸ್ಯೆಯನ್ನು ಬಗೆಹರಿಸಿದರು.

ಶಿವಮೊಗ್ಗ ತಾಲ್ಲೂಕಿನಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ಮೇ ಮಾಹೆವರೆಗೆ 107311 ಮಹಿಳೆಯರು ನೋಂದಣಿಯಾಗಿದ್ದು, 99324 ಮಹಿಳೆಯರಿಗೆ ಮೇ ಮಾಹೆವರೆಗೆ ಹಣ ಜಮಾ ಆಗಿರುತ್ತದೆ. ಅನ್ನಭಾಗ್ಯ ಯೋಜನೆಯಡಿ ತಾಲ್ಲೂಕಿನಲ್ಲಿ 43681 ಬಿಪಿಎಲ್ ಕುಟುಂಬಗಳ 144286 ಸದಸ್ಯರು ಯೋಜನೆಯ ಸೌಲಭ್ಯ ಪಡೆಯುತ್ತಿದ್ದಾರೆ

# ಗೃಹಲಕ್ಷ್ಮೀ ಫಲಾನುಭವಿಗಳು ಸ್ವಸಹಾಯ ಗುಂಪುಗಳ ವ್ಯಾಪ್ತಿಗೆ : ಡಾ.ರಂಗಸ್ವಾಮಿ

**ಚಿತ್ರದುರ್ಗ:** ಗೃಹಲಕ್ಷ್ಮೀ ಯೋಜನೆಯ ಅರ್ಹ ಮಹಿಳಾ ಫಲಾನುಭವಿಗಳನ್ನು ಎಸ್.ಹೆಚ್.ಜಿ (ಸ್ವಸಹಾಯ ಗುಂಪು)ಗಳ ವ್ಯಾಪ್ತಿಗೆ ತಂದು ವಿಮಾ ಯೋಜನಗಳಾದ ಪಿ.ಎಂ.ಜೆ.ಜೆ.ವೈ (ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಜೀವನ್ ಬಿಮಾ ಯೋಜನೆ) ಪಿ.ಎಂ.ಎಸ್.ಬಿ.ವೈ (ಪ್ರಧಾನ ಮಂತ್ರಿ ಸುರಕ್ಷಾ ಬೀಮಾ ಯೋಜನೆ) ಹಾಗೂ ಎ.ಪಿ.ವೈ (ಅಟಲ್ ಪಿಂಚಣಿ ಯೋಜನೆ) ಅಡಿಯಲ್ಲಿ ನೊಂದಣಿ ಮಾಡಿಸಿಲಾಗುವುದು ಎಂದು ಜಿ.ಪಂ. ಉಪಕಾರ್ಯದರ್ಶಿ ಡಾ.ರಂಗಸ್ವಾಮಿ ಹೇಳಿದರು.

ನಗರದ ಜಿ.ಪಂ. ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ನೇತೃತ್ವದಲ್ಲಿ ಆಯೋಜಿಸಲಾದ 2025–26ನೇ ಸಾಲಿನ ಡಿ.ಎಲ್.ಆರ್.ಸಿ (ಜಿಲ್ಲಾ ಹಂತದ ಪುನರ್ ಪರಿಶೀಲನಾ ಸಮಿತಿ) ಹಾಗೂ ಡಿಸಿಸಿ (ಜಿಲ್ಲಾ ಸಲಹಾ ಸಮಿತಿ) ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವ–ಸಹಾಯ ಗುಂಪುಗಳ ಮೂಲಕ ಮಹಿಳೆಯರು ಸಣ್ಣ ಉದ್ದಿಮೆಗಳನ್ನು ಸ್ಥಾಪಿಸಲು ಸಹಾಯ ಧನ ಹಾಗೂ ಸಬ್ಸಿಡಿ ನೀಡಲಾಗುತ್ತಿದೆ. ಎನ್.ಆರ್.ಎಲ್.ಎಂ (ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆ) ಅಡಿ ಎಸ್.ಹೆಚ್.ಜಿ ಗುಂಪುಗಳಿಗೆ ಸಾಲ ಸೌಲಭ್ಯ ನೀಡಲಾಗುತ್ತಿದೆ. ಈ ಗುಂಪುಗಳನ್ನು ಬ್ಯಾಂಕ್‌ಗಳೊಂದಿಗೆ ಜೋಡಿಸಿ, ಆರ್ಥಿಕ ವ್ಯವಹಾರಗಳಲ್ಲಿ ಪಾಲ್ಗೊಳ್ಳುವಂತೆ ಮಾಡಲು, ಮಹಿಳೆಯರ ಆರ್ಥಿಕ ಸಾಕ್ಷರತೆಯನ್ನು ಹೆಚ್ಚಿಸುವ ದೃಷ್ಟಿಯಿಂದ 184 ಬ್ಯಾಂಕ್ ಸಖಿಯರಿಗೆ ತರಬೇತಿ ನೀಡಲಾಗಿದೆ. ಸದ್ಯ 10 ಬ್ಯಾಂಕ್ ಸಖಿಯರನ್ನು ನೇಮಕ ಮಾಡಿಕೊಳ್ಳಲಾಗಿದೆ. ಮುಂದಿನ ಹಂತದಲ್ಲಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಬ್ಯಾಂಕ್‌ಗಳಿಗೆ ಬ್ಯಾಂಕ್ ಸಖಿಯರನ್ನು ನೇಮಿಸಲಾಗುವುದು ಎಂದರು.

ಮೈಕ್ರೋ ಫೈನಾನ್ಸ್‌ಗಳಲ್ಲಿ ಮಹಿಳೆಯರು ಹೆಚ್ಚಿನ ಬಡ್ಡಿಗೆ ಸಾಲ ಪಡೆಯುವ ಬದಲು, ಎಸ್.ಹೆಚ್.ಜಿ ಮೂಲಕ ಸಾಲ ಪಡೆದು ಉದ್ದಿಮೆ ನಡೆಸಿ ಆರ್ಥಿಕವಾಗಿ ಸಬಲರಾಗಲು ಅವಕಾಶವಿದೆ. ಜಿಲ್ಲೆಯಲ್ಲಿ 13 ಸಾವಿರಕ್ಕೂ ಅಧಿಕ ಎಸ್.ಹೆಚ್.ಜಿ ಗಳಿದ್ದು, ಕೇವಲ 144 ಎಸ್.ಹೆಚ್.ಜಿ ಗಳು ಬ್ಯಾಂಕ್‌ಗಳಿಗೆ ಸಾಲ ಮರುಪಾವತಿ ಮಾಡದೇ ಅನುತ್ಪಾದಕ ಎನಿಸಿವೆ. ಈ ಪ್ರಮಾಣ ಬೇರೆ ಸಾಲ ವ್ಯವಹಾರಗಳಿಗೆ ಹೋಲಿಸಿದರೆ ನಗಣ್ಯ ಎನಿಸುವಷ್ಟಿದೆ. ಸಾಲ ಪಡೆದ ಎಲ್ಲ ಎಸ್.ಹೆಚ್.ಜಿಗಳು ಪ್ರಾಮಾಣಿಕವಾಗಿ ಸಾಲ ಮರುಪಾವತಿ ಮಾಡಿವೆ. ಎನ್.ಆರ್.ಎಲ್.ಎಂ ಮೂಲಕ ಅನುತ್ಪಾದಕ ಎನಿಸಿದ 144 ಎಸ್.ಹೆಚ್.ಜಿಗಳನ್ನು ಪುನಃ ಕ್ರೀಯಾಶೀಲವಾಗಿಸಿ



ಬ್ಯಾಂಕುಗಳ ಸಾಲ ಮರುಪಾತಿಗೆ ಪ್ರಯತ್ನಿಸಲಾಗುವುದು ಎಂದು ಡಾ.ರಂಗಸ್ವಾಮಿ ಹೇಳಿದರು.

2024–25ನೇ ಸಾಲಿನಲ್ಲಿ 2,423 ಎಸ್.ಹೆಚ್.ಜಿ ಗಳಿಗೆ ಸಾಲ ಸೌಲಭ್ಯ ನೀಡಿ, ಶೇ.100 ರಷ್ಟು ಗುರಿ ಸಾಧಿಸಲಾಗಿದೆ. 2025–26ನೇ ಸಾಲಿಗೆ 6,766 ಎಸ್.ಹೆಚ್.ಜಿ ಗಳಿಗೆ ಸಾಲ ಸೌಲಭ್ಯದ ಗುರಿ ನಿಗದಿ ಪಡಿಸಲಾಗಿದೆ. ಈ ಪೈಕಿ 225 ಎಸ್.ಹೆಚ್.ಜಿ ಗಳಿಗೆ ಈಗಾಗಲೇ ಸಾಲ ಸೌಲಭ್ಯ ನೀಡಲಾಗಿದೆ. ಎಸ್.ಹೆಚ್.ಜಿ ಎಲ್ಲಾ ಸದಸ್ಯರ ಆಧಾರ್ ಹಾಗೂ ಇತರೆ ವಿವರಗಳನ್ನು ಸಂಗ್ರಹಿಸಿ ಎನ್.ಆರ್.ಎಲ್.ಎಂ ಎಂ.ಐ.ಎಸ್ ವೆಬ್ ಸೈಟ್‌ನಲ್ಲಿ ಅಳವಡಿಸಲಾಗಿದ್ದು, ಬ್ಯಾಂಕುಗಳು ಈ ಮಾಹಿತಿಯನ್ನು ಪಡೆದು ನಿರಾತಂಕವಾಗಿ ಸಾಲ ಸೌಲಭ್ಯ ಮಂಜೂರು ಮಾಡಬಹುದಾಗಿದೆ ಎಂದು ಜಿ.ಪಂ. ಕಾರ್ಯಕ್ರಮ ಅನುಷ್ಠಾನಾಧಿಕಾರಿ ಯೋಗೀಶ್ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 16,59,456 ಜನಸಂಖ್ಯೆಯಿದ್ದು, ಪಿ.ಎಂ.ಜೆ.ಜೆ.ವೈ ಅಡಿ 2,05,924 ಪಿ.ಎಂ.ಎಸ್.ಬಿ.ವೈ ಅಡಿ 4,99,155 ಹಾಗೂ ಎ.ಪಿ.ವೈ ಅಡಿ 1,14,161 ಫಲಾನುಭವಿಗಳು ನೊಂದಣಿಯಾಗಿದ್ದಾರೆ. ಇನ್ನೂ ಸಾಕಷ್ಟು ಜನರನ್ನು ನೊಂದಣಿ ಮಾಡಲು ಅವಕಾಶವಿದೆ. ಆರ್ಥಿಕತೆ ಒಳಗೊಳ್ಳುವಿಕೆ ಮಟ್ಟ ಹೆಚ್ಚಿಸಲು ಜುಲೈ 1 ರಿಂದ ಸೆಪ್ಟಂಬರ್ 30 ವರೆಗೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವತಿಯಿಂದ ಆಂದೋಲನ ಹಮ್ಮಿಕೊಳ್ಳಲಾಗಿದೆ. ಸ್ಥಳೀಯ ಗ್ರಾಮ ಪಂಚಾಯಿತಿಗಳ ಸಹಯೋಗದೊಂದಿಗೆ ಈ ವಿಮಾ ಯೋಜನೆಗಳ ನೊಂದಣಿ ಹೆಚ್ಚಿನ ಶ್ರಮ ವಹಿಸಬೇಕು. ಬ್ಯಾಂಕುಗಳು ಯಾವುದೇ ಕಾರಣಕ್ಕೂ ಸಾಮಾಜಿಕ ಭದ್ರತಾ ಯೋಜನೆಯಡಿ ಫಲಾನುಭವಿಗಳ ಖಾತೆ ಜಮೆಯಾಗುವ ಹಣವನ್ನು ಸಾಲದ ಕಂತಿಗೆ ವಜಾ ಮಾಡಿಕೊಳ್ಳಬಾರದು. ಕೃಷಿ, ಶಿಕ್ಷಣ, ವಸತಿ, ಸಣ್ಣ ಹಾಗೂ ಅತಿಸಣ್ಣ ಉದ್ದಿಮೆ ಹಾಗೂ ಇತರೆ ಸರ್ಕಾರದ ಯೋಜನೆಗಳಿಡಿ ಸಬ್ಸಿಡಿಯೊಂದಿಗೆ ಹೆಚ್ಚು ಸಾಲ ಸೌಲಭ್ಯಗಳನ್ನು ನೀಡಲು ವಿಳಂಬ ಮಾಡಬಾರದು ಎಂದು ಲೀಡ್ ಬ್ಯಾಂಕ್ ವ್ಯವಸ್ಥಾಪಕ ರಾಘವೇಂದ್ರ.ಎಂ ಮಾಹಿತಿ ನೀಡಿದರು. ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಮಾತನಾಡಿ, ಪಿ.ಎಂ.ಎಫ್.ಎಂ.ಇ(ಪ್ರಧಾನ ಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣ ಉದ್ದಿಮೆಗಳ ಔಪಚಾರಿಕರಣ) ಅಡಿ ಕಳೆದ ಸಾಲಿನಲ್ಲಿ ಜಿಲ್ಲೆಯಲ್ಲಿ 100 ಘಟಕಗಳ ಗುರಿ ನಿಗದಿ ಮಾಡಲಾಗಿದೆ. ಇದರಲ್ಲಿ 88 ಅರ್ಜಿಗಳು ಸ್ವೀಕೃತವಾಗಿವೆ. 50 ಅರ್ಜಿಗಳಿಗೆ ಬ್ಯಾಂಕು ಸಾಲ ಸೌಲಭ್ಯ ದೊರಕಿದೆ. 30 ಅರ್ಜಿಗಳು ಮಂಜುರಾತಿ ಬ್ಯಾಂಕುಗಳಲ್ಲಿ ಬಾಕಿಯಿದೆ. ಪಿ.ಎಂ.ಎಫ್.ಎಂ.ಇ ಯೋಜನೆಯಡಿ ಘಟಕ ವೆಚ್ಚಕ್ಕೆ ಪಡೆಯುವ ಸಾಲ ಸೌಲಭ್ಯದ ಶೇ.35 ರಷ್ಟು ಸಬ್ಸಡಿಯನ್ನು ನೀಡಲಾಗುತ್ತದೆ. ಬ್ಯಾಂಕ್‌ಗಳ ಮುಂದಿರುವ ಬಾಕಿ ಅರ್ಜಿಗಳ ವಿಲೇವಾರಿ ಮಾಡುವಂತೆ ಅಧಿಕಾರಿಗಳಲ್ಲಿ ಕೋರಿದರು.

ಆರ್.ಬಿ.ಐ. ಪ್ರಬಂಧಕ ಅರುಣ್ ಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ 257 ಬ್ಯಾಂಕ್ ಶಾಖೆಗಳು ಕಾರ್ಯನಿರ್ವಹಿಸುತ್ತಿದ್ದು, ರೂ.11,193.42 ಕೋಟಿ ಠೇವಣಿ ಸ್ವೀಕರಿಸಲಾಗಿದ್ದು, ಬ್ಯಾಂಕುಗಳು ರೂ.12,596.51 ಕೋಟಿ ಸಾಲವನ್ನು ಸಾರ್ವಜನಿಕರಿಗೆ ನೀಡಿವೆ. ಜಿಲ್ಲೆಯ ಸಾಲ–ಠೇವಣಿ ಅನುಪಾತ ಪ್ರತಿಶತ 112.53% ಇದೆ. ಬ್ಯಾಂಕುಗಳು ಸರ್ಕಾರ ಹಾಗೂ ನಿಗಮ ಮಂಡಳಿಗಳ ಸಾಲ ಸೌಲಭ್ಯ ಯೋಜನೆಗಳನ್ನು ಕಾಲಮಿತಿಯಲ್ಲಿ ಮಂಜೂರು ಮಾಡಬೇಕು ಎಂದರು.

ಕೆನರಾ ಬ್ಯಾಂಕ್ ವಲಯ ಪ್ರಬಂಧಕಿ ಅನಿತಾ, ನಬಾರ್ಡ್ ಜಿಲ್ಲಾ ವ್ಯವಸ್ಥಾಪಕ ವಿನಂತ್.ಕೆ, ಕರ್ನಾಟಕ ಗ್ರಾಮೀಣ ವಿಕಾಸ ಬ್ಯಾಂಕ್ ಪ್ರಬಂಧಕ ಜನಾರ್ಧನ್, ಸೇರಿದಂತೆ ವಿವಿಧ ಬ್ಯಾಂಕ್‌ಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಜ್ಯದ 7 ಪ್ರಮುಖ ಮಸೂದೆಗಳಿಗೆ ರಾಷ್ಟ್ರಪತಿಗಳ ಅಂಗೀಕಾರ ಕೋರಿದ ಮುಖ್ಯಮಂತ್ರಿ ಸಿದ್ದರಾಮಯ್ಯ



**ನವದೆಹಲಿ:** ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ರಾಜ್ಯ ಶಾಸಕಾಂಗವು ಅಂಗೀಕರಿಸಿದ ಏಳು ಪ್ರಮುಖ ಮಸೂದೆಗಳಿಗೆ ಅನುಮೋದನೆ ನೀಡುವಂತೆ ಕೋರಿದರು.


ರಾಷ್ಟ್ರಪತಿಗಳ ಮುಂದೆ ಮಂಡಿಸಲಾದ ಪ್ರಮುಖ ಮಸೂದೆಗಳಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣದ ಮಕ್ಕಳ ಹಕ್ಕು (ಕರ್ನಾಟಕ ತಿದ್ದುಪಡಿ) ಮಸೂದೆ, 2015 ಸೇರಿದ್ದು, ಇದು ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಆರ್‌ಟಿಇ ಚೌಕಟ್ಟನ್ನು ಮಾರ್ಪಡಿಸಲು ಪ್ರಯತ್ನಿಸುತ್ತದೆ.

ಕರ್ನಾಟಕ (ಖನಿಜ ಹಕ್ಕುಗಳು ಮತ್ತು ಖನಿಜ ಹೊಂದಿರುವ ಭೂಮಿ) ತೆರಿಗೆ ಮಸೂದೆ, 2024 ತನ್ನ ಖನಿಜ ಸಂಪನ್ಮೂಲಗಳಿಂದ ರಾಜ್ಯದ ಆದಾಯವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಸರ್ಕಾರಿ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ 4ರಷ್ಟು ಮೀಸಲಾತಿಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ರೂಪಿಸಲಾಗಿರುವ 'ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಕೆಟಿಪಿಪಿ) ತಿದ್ದುಪಡಿ ಕಾಯ್ದೆ 2025 ಮಸೂದೆಗೆ ಅನುಮೋದನೆ ಕೇಳಲಾಗಿದೆ.

ಆಡಳಿತ ಪ್ರಕ್ರಿಯೆಗಳನ್ನು ಸುಗಮಗೊಳಿಸುವತ್ತ ಗಮನಹರಿಸುವ ನೋಂದಣಿ (ಕರ್ನಾಟಕ ತಿದ್ದುಪಡಿ) ಮಸೂದೆ, 2025 ಮತ್ತು ಅದರ ಪ್ರತಿರೂಪವಾದ ನೋಟರಿಗಳು (ಕರ್ನಾಟಕ ತಿದ್ದುಪಡಿ) ಮಸೂದೆ, 2025 ಸಹ ಸೇರಿವೆ. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ಮಸೂದೆ, 2024 ಕ್ಕೆ ಕೂಡ ರಾಷ್ಟ್ರಪತಿಗಳ ಅನುಮೋದನೆ ಬೇಕಿದೆ.

ಈ ಮಸೂದೆಗಳು ರಾಜ್ಯದಲ್ಲಿ ಜಾರಿಗೆ ಬರುವ ಮೊದಲು ಕೇಂದ್ರ ಸರ್ಕಾರದ ಅನುಮೋದನೆಯನ್ನು ಕಡ್ಡಾಯಗೊಳಿಸುವ ನಿಬಂಧನೆಗಳ ಅಡಿಯಲ್ಲಿ ಬರುವುದರಿಂದ ರಾಷ್ಟ್ರಪತಿಗಳ ಒಪ್ಪಿಗೆ ಅಗತ್ಯವಿರುತ್ತದೆ.

# ಗೊತ್ತುಪಡಿಸಿದ ಸ್ಥಳದಲ್ಲಿ ವ್ಯಾಪಾರಕ್ಕೆ ಅವಕಾಶ: ಡಿಕೆಶಿ ವಿರುದ್ಧ ಬೀದಿ ವ್ಯಾಪಾರಿಗಳ ಆಕ್ರೋಶ, ಪ್ರತಿಭಟನೆಗೆ ಮುಂದು



**ಬೆಂಗಳೂರು:** ನಗರದ ಎಲ್ಲಾ ಫುಟ್ ಪಾತ್ ಅಂಗಡಿಗಳನ್ನು ತೆರವುಗೊಳಿಸಿ, ಗೊತ್ತುಪಡಿಸಿದ ಸ್ಥಳದಲ್ಲಿ ವ್ಯಾಪಾರಕ್ಕೆ ಅವಕಾಶ ನೀಡುತ್ತೇವೆಂಬ ಸರ್ಕಾರದ ನಿರ್ಣಯಕ್ಕೆ ಬೀದಿ ಬದಿ ವ್ಯಾಪಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದು, ಪ್ರತಿಭಟನೆ ನಡೆಸಲು ಮುಂದಾಗಿವೆ.

ಉಪ ಮುಖ್ಯಮಂತ್ರಿ ಹಾಗೂ ಬೆಂಗಳೂರು ಅಭಿವೃದ್ಧಿ ಸಚಿವ ಡಿಕೆ.ಶಿವಕುಮಾರ್ ವಿರುದ್ಧ ಕರ್ನಾಟಕ ಪ್ರಗತಿಪರ ಬೀದಿ ವ್ಯಾಪಾರಿಗಳ ಸಂಘ ಕಿಡಿಕಾರಿದ್ದು, ನಗರದ ಫ್ರೀಡಂ ಪಾರ್ಕ್ ನಲ್ಲಿ ಮಂಗಳವಾರ ಪ್ರತಿಭಟನೆಯನ್ನು ಹಮ್ಮಿಕೊಂಡಿದೆ.

ಪ್ರತಿಭಟನೆಯಲ್ಲಿ ಕೆ.ಆರ್. ಮಾರುಕಟ್ಟೆ, ಶಿವಾಜಿನಗರ, ಜಯನಗರ, ವಿಜಯನಗರ, ಯಶವಂತಪುರ ಮತ್ತು ಗಾಂಧಿ ಬಜಾರ್‌ನಂತಹ ಪ್ರಮುಖ ಮಾರುಕಟ್ಟೆ ಪ್ರದೇಶಗಳ ಮಾರಾಟಗಾರರು ಪಾಲ್ಗೊಳ್ಳುವ ಸಾಧ್ಯತೆಗಳಿವೆ.

ಈ ಹಿಂದೆ ಹೇಳಿಕೆ ನೀಡಿದ್ದ ಡಿಕೆ.ಶಿವಕುಮಾರ್ ಅವರು, ಬೀದಿ ಬದಿ ವ್ಯಾಪಾರಿಗಳಿಗೆ ರಸ್ತೆಬದಿ ಮಳಿಗೆ ನಿರ್ಮಾಣಕ್ಕೆ ಮುಂದಿನ ದಿನಗಳಲ್ಲಿ ಅವಕಾಶವಿಲ್ಲ. ಈ ಬಗ್ಗೆ ನ್ಯಾಯಾಲಯದ ನಿರ್ದೇಶನವೂ ಇದೆ. ಪ್ರಸ್ತುತ ಸುಮಾರು 3,778 ಜನ ತಳ್ಳುವ ಗಾಡಿ ಬೇ–ಕೆಂದು ಪಾಲಿಕೆಗೆ ಅರ್ಜಿ ಹಾಕಿದ್ದಾರೆ. ಈ ವರ್ಷ 10 ಸಾವಿರ ತಳ್ಳುವ ಗಾಡಿಗಳನ್ನು ನೀಡಲು ತಯಾರಿದ್ದೇವೆ. ಗಾಡಿ ಬೇಕಾದವರು ನೋಂದಣಿ ಮಾಡಿಕೊಂಡು ಅರ್ಜಿ ಸಲ್ಲಿಸಬೇಕು. ನೋಂದಣಿ ಮಾಡಿಸಿಕೊಂಡವರ ಪೈಕಿ ಶೇಕಡವಾರು ಪ್ರಮಾಣದಲ್ಲಿ ಈ ಸೌಲಭ್ಯ ನೀಡಲಾಗುವುದು. ನಾಲ್ಕೂ ಮಾದರಿಯ ತಳ್ಳುವ ಗಾಡಿಗಳನ್ನು ತಯಾರಿಸಲು ಟೆಂಡರ್ ಸಹ ಕರೆಯಲಾಗುವುದು.

ಬಿಬಿಎಂಪಿಯಲ್ಲಿ ನೋಂದಣಿ ಮಾಡಿಕೊಳ್ಳದ ವ್ಯಾಪಾರಿಗಳು ತಳ್ಳುವ ಗಾಡಿಗಳಿಗೆ ಅರ್ಜಿ ಹಾಕಲು ಅರ್ಹರಲ್ಲ. ಪ್ರತಿ ಬೀದಿಬದಿ ವ್ಯಾಪಾರಿಗಳ ಲೆಕ್ಕಾಚಾರ ಪಾಲಿಕೆ ಬಳಿ ಇರಬೇಕು. ಪೊಲೀಸರು, ಅಧಿಕಾರಿಗಳು, ಗೂಂಡಾಗಳು ತೊಂದರೆ ಕೊಡುತ್ತಾರೆ ಎನ್ನುವ ದೂರುಗಳನ್ನು ತಪ್ಪಿಸಲು ಈ ವ್ಯವಸ್ಥೆ ತರಲಾಗುತ್ತಿದೆ. ಒಂದು ಕುಟುಂಬಕ್ಕೆ ಒಂದೇ ಗಾಡಿ ನೀಡಲಾಗುವುದು. ಪ್ರತಿದಿನ ಯಾವ ಜಾಗದಲ್ಲಿ ವ್ಯಾಪಾರ ನಡೆಸಲಾಯಿತು ಎನ್ನುವ ಮಾಹಿತಿ ತಿಳಿದುಕೊಳ್ಳುವ ವ್ಯವಸ್ಥೆ ಜಾರಿಗೆ ತರಲಿದ್ದೇವೆ. ಗಾಡಿಯನ್ನು ಮನೆಯಲ್ಲಿ ನಿಲ್ಲಿಸಿಕೊಳ್ಳಬೇಕು, ಮತ್ತೊಬ್ಬರಿಗೆ ಮಾರುವುದಕ್ಕೆ ಅವಕಾಶವಿಲ್ಲ ಎಂದು ಹೇಳಿದ್ದರು.

ಸರ್ಕಾರ ಈ ನಡೆಗೆ ಬೀದಿ ವ್ಯಾಪಾರಿಗಳು ಕಿಡಿ–ಕಾರಿದ್ದಾರೆ. ಸರ್ಕಾರ ಈ ನಿರ್ಧಾರ ಬೀದಿ ವ್ಯಾಪಾರಿಗಳ (ಜೀವನೋಪಾಯ ರಕ್ಷಣೆ ಮತ್ತು ಬೀದಿ ವ್ಯಾಪಾರಿಗಳ ನಿಯಂತ್ರಣ) ಕಾಯ್ದೆ, 2014 ಅನ್ನು ಉಲ್ಲಂಘಿಸಿದಂತಾಗುತ್ತದೆ ಎಂದು ಹೇಳಿದ್ದಾರೆ.

ಸರ್ಕಾರದ ಘೋಷಣೆಯ ನಂತರ, ಪಾಲಿಕೆ ಅಧಿಕಾರಿಗಳು ಕ್ರಮ ಕೈಗೊಳ್ಳುವುದನ್ನು ತೀವ್ರಗೊಳಿಸಿದ್ದಾರೆ, ಆಗಾಗ್ಗೆ ಸರಕುಗಳನ್ನು ವಶಪಡಿಸಿಕೊಳ್ಳುವುದು ಮತ್ತು ಹೊರಹಾಕುತ್ತಿದ್ದಾರೆಂದು ಕಿಡಿಕಾರಿದ್ದಾರೆ.

ನಗರಾದ್ಯಂತದ ಸಮೀಕ್ಷೆಯು ಸುಮಾರು 34,000 ಮಾರಾಟಗಾರರನ್ನು ಗುರುತಿಸಿದ್ದರೂ, ಇನ್ನೂ ಸಾವಿರಾರು ಮಾರಾಟಗಾರರು ಗುರುತಿಸಲ್ಪಟ್ಟಿಲ್ಲ. ಅಧಿಕೃತ ದಾಖಲೆಗಳಿಂದ ಹೊರಗುಳಿದಿದ್ದಾರೆ. ಇವರಿಗೆ ಯಾವುದೇ ಕಾನೂನು ರಕ್ಷಣೆ ಇಲ್ಲದಂತಾಗಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ಮಾರುಕಟ್ಟೆಯಲ್ಲಿನ ಶೌಚಾಲಯ, ಶುದ್ಧ ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಮೂಲಭೂತ ಸೌಲಭ್ಯಗಳ ಕೊರತೆ ಬಗ್ಗೆಯೂ ಮಾರಾಟಗಾರರು ಕಳವಳ ವ್ಯಕ್ತಪಡಿಸಿದ್ದಾರೆ.

# ಸ್ಪರ್ಧಾತ್ಮಕ ಮನೋಭಾವ ಬೆಳೆಸಿಕೊಳ್ಳಿ

## ಎಸ್‌ಬಿಸಿ ಕಾಲೇಜಿನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ದಾವಿವಿ ಕುಲಸಚಿವ ಎಸ್.ಬಿ. ಗಂಟಿ ಕಿವಿಮಾತು

**ದಾವಣಗೆರೆ :** ಸ್ಪರ್ಧಾತ್ಮಕ ಜಗತ್ತಿಗೆ ತಕ್ಕಂತೆ ಕೌಶಲ್ಯಗಳನ್ನು ಕಲಿಯಬೇಕು. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಮೂಲಕ ಒಳ್ಳೆಯ ಅವಕಾಶ ಗಳನ್ನು ಸದುಪಯೋಗ ಪಡಿಸಿಕೊಂಡು ಉನ್ನತ ಹುದ್ದೆಗ ಳನ್ನು ಅಲಂಕರಿಸುವ ಸಾಧ್ಯತೆ ಇದೆ ಎಂದು ದಾವಣಗೆರೆ ವಿವಿ ಕುಲ ಸಚಿವ ಎಸ್.ಬಿ. ಗಂಟಿ ಹೇಳಿದರು.

ನಗರದ ಶ್ರೀಮತಿ ಸುಶೀಲಮ್ಮ ಬಂಕಾಪುರದ ಚನ್ನಬಸಪ್ಪ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ ಸಂಘದ ವಾರ್ಷಿಕೋತ್ಸವ, ರಾ_ಂಕ್ ವಿಜೇತರಿಗೆ ಸನ್ಮಾನ ಹಾಗೂ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ನಿಯತಕಾಲಿಕೆಗಳನ್ನು ನಿತ್ಯ ಓದುವ ಮೂಲಕ ತಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಆಲೋಚಿಸಬೇಕು ಎಂದು ಹೇಳಿದರು.

ನಿವೃತ್ತ ಪ್ರಾಧ್ಯಾಪಕ ಪ್ರೊ. ಸಿ.ಹೆಚ್. ಮುರುಗೇಂದ್ರಪ್ಪ ಮಾತನಾಡಿ, ವಿದ್ಯಾಭ್ಯಾಸಕ್ಕಾಗಿ ಹಿಂದೆ ಬೇರೆ ಬೇರೆ ದೂರದ ಊರುಗಳಿಗೆ ಹೋಗಬೇಕಾಗಿತ್ತು. ಆದರೀಗ ಪದವಿ ಶಿಕ್ಷಣ ಸುಲಭವಾಗಿ ಸಿಗುವಂತಾಗಿದೆ. ಸರಿಯಾದ ರೀತಿಯಲ್ಲಿ ಬಳಕೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.



ದಾವಣಗೆರೆ–ಹರಿಹರ ಅರ್ಬನ್ ಕೋ–ಆಫ್ ಬ್ಯಾಂಕ್ ಅಧ್ಯಕ್ಷ ಎನ್.ಎ. ಮುರುಗೇಶ್ ಮಾತನಾಡಿ, ಮಹಿಳಾ ಸಬಲೀಕರಣಕ್ಕಾಗಿ ಅನೇಕ ಸವಲತ್ತುಗಳಿವೆ. ಇವುಗಳ ಸದ್ಬಳಕೆಯಾಗಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಅಧ್ಯಕ್ಷ ಬಿ.ಸಿ.ಉಮಾಪತಿ ಮಾತನಾಡಿ, ವಿದ್ಯಾರ್ಥಿಗಳು ಮೊಬೈಲ್ ಬಳಕೆ ಕಡಿಮೆ ಮಾಡಿ ಓದಿನ ಕಡೆ ಹೆಚ್ಚು ಆಸಕ್ತಿ ತೋರಬೇಕಾಗಿದೆ ಎಂದು ಹೇಳಿದರು.

ಪಿಇಎಸ್ ಶಾಲೆಯ ಅಧ್ಯಕ್ಷ ಆರ್. ವೆಂಕಟರೆಡ್ಡಿ, ಕೆ.ಜೆ.ಸುಗಂದರಾಜ್, ಪ್ರಶಾಂತ್, ವಿವಿಧ ವಿಭಾಗದ ಮುಖ್ಯಸ್ಥರಾದ ಡಾ.ಭಾಗ್ಯಶ್ರೀ, ಡಾ.ಮಂಜುನಾಥ್ ಶ್ಯಾಗಲೆ, ಕೆ.ವಿಶ್ವನಾಥ್, ಸೌಮ್ಯ, ಶಾಲಿನಿ, ರುದ್ರೇಶ್, ಸರಳ, ದೈಹಿಕ ಶಿಕ್ಷಣ ನಿರ್ದೇಶಕ ಅಣ್ಣಪ್ಪ ಮತ್ತಿತರರು ಉಪಸ್ಥಿತರಿದ್ದರು. ಇದೇ ವೇಳೆ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಡಿ. ಭೂಮಿಕ ಮತ್ತು ಲಕ್ಷ್ಮಿ ಪ್ರಾರ್ಥಿಸಿದರು. ವಿ.ಪಿ.ಭೂಮಿಕ ಸ್ವಾಗತಿಸಿದರು. ಅರ್ಪಿತಾ ನಿರೂಪಿಸಿದರು. ಅಶ್ವಿನಿ ವಂದಿಸಿದರು.

ವೇದಿಕೆ ಕಾರ್ಯಕ್ರಮದ ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಸಿಎಂ ರಾಜೀನಾಮೆಗೆ ಬಿವೈವಿ ಆಗ್ರಹ

**ಬೆಂಗಳೂರು :** ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದ್ದು, ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಮುಖ್ಯಮಂತ್ರಿ ಹುದ್ದೆಯಲ್ಲಿ ಇರಲು ಅನ್‌ಫಿಟ್ ಅವರು ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಆಗ್ರಹಿಸಿದೆ.

ಬಿಜೆಪಿ ಕಚೇರಿಯಲ್ಲಿಂದು ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಮಾಜಿ ಸಚಿವ ಸಿ.ಟಿ. ರವಿ ಅವರು ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈ ಸರ್ಕಾರ ಶಾಪಗ್ರಸ್ಥ ಸರ್ಕಾರ.

ಕಾಂಗ್ರೆಸ್‌ನ ಶಾಸಕರೇ ಹತಾಶರಾಗಿದ್ದಾರೆ. ಈ ಸರ್ಕಾರ ಇದೆಯೋ, ಸತ್ತು ಹೋಗಿದೆಯೋ ಗೊತ್ತಿಲ್ಲ. ಲಂಚ ಇಲ್ಲದೆ ಸರ್ಕಾರದಲ್ಲಿ ಯಾವುದೇ ಕೆಲಸ ಮಾಡಿಕೊಡುತ್ತಿಲ್ಲ ಎಂದರು.

ಕಮಿಷನ್ ಮಾಫಿಯಾ ಮೂಲಕ ಆಡಳಿತ ನಡೆದಿದೆ. ಎಲ್ಲ ನೋಡಿಕೊಂಡು ಸಿದ್ಧರಾಮಯ್ಯ ಕಣ್ಮುಚ್ಚಿ ಕುಳಿತಿದ್ದಾರೆ. ದೇವರಾಜ ಅರಸು ದಾಖಲೆ ಮುಗಿಯಬೇಕು ಎಂದು ಸಿಎಂ ಕುರ್ಚಿಗೆ ಅಂಟಿ ಕುಳಿತಿದ್ದಾರೆ ಸರ್ಕಾರದ ಮೇಲೆ ಹಿಡಿತ ಕಳೆದುಕೊಂಡಿದ್ದಾರೆ. ಕಮಿಷನ್ ಏಜೆಂಟರು ಸರ್ಕಾರ ನಡೆಸುತ್ತಿದ್ದಾರೆ. ಸ್ವತಃ ಈ ಕಮಿಷನ್ ಏಜೆಂಟರ್‌ನ್ನು ಸಿದ್ಧರಾಮಯ್ಯ ಅವರೇ ನೇಮಿಸಿದ್ದಾರೆ ಎಂದು ವಿಜಯೇಂದ್ರ ದೂರಿದರು.

ಎಲ್ಲ ಇಲಾಖೆಗಳಲ್ಲೂ ಭ್ರಷ್ಟಾಚಾರ ತಾಂಡವಾಡುತ್ತಿದೆ. ಸಿಎಂ ವಸೂಲಿಗೆ ಟಾಸ್ಕ್



ಕೊಟ್ಟಿದ್ದಾರೆ. ಸಿದ್ಧರಾಮಯ್ಯ ಅವರೇ ಭ್ರಷ್ಟಾಚಾರಕ್ಕೆ ಕುಮ್ಮಕ್ಕು ಕೊಡುತ್ತಿದ್ದಾರೆ ಎಂದು ದೂರಿದ ಅವರು, ರಾಜ್ಯ ಸರ್ಕಾರದ ಪರಿಸ್ಥಿತಿ ನೋಡಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೆ ಹತಾಶರಾಗಿದ್ದಾರೆ ಭ್ರಷ್ಟಾಚಾರಕ್ಕಾಗಿ ಸಚಿವರು ಕೌಂಟರ್‌ಗಳನ್ನು ತೆರೆದು ಕುಳಿತಿದ್ದಾರೆ. ಮುಖ್ಯಮಂತ್ರಿಗಳಿಗೆ ಮರ್ಯಾದೆ ಇದ್ದರೆ ರಾಜೀನಾಮೆ ಕೊಡಲಿ ರಾಜ್ಯಪಾಲರು ಮಧ್ಯ ಪ್ರವೇಶಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರದ ವಿರುದ್ಧ ನಾವು ಬೀದಿಗಿಳಿದು ಹೋರಾಟ ಮಾಡುತ್ತೇವೆ ಎಂದು ಹೇಳಿದರು.

ಕಾಂಗ್ರೆಸ್ ಶಾಸಕರಾದ ಬಿ.ಆರ್. ಪಾಟೀಲ್, ರಾಜು ಕಾಗೆ, ಗೋಪಾಲಕೃಷ್ಣ ಅವರು ಎತ್ತಿರುವ ಪ್ರಶ್ನೆಗಳಿಗೆ ಮುಖ್ಯಮಂತ್ರಿಗಳೇನು ಉತ್ತರ ಕೊಡುತ್ತಾರೆ ಎಂದು ವಿಜಯೇಂದ್ರ ಪ್ರಶ್ನಿಸಿದರು.

ಈ ಸರ್ಕಾರ ಬಂಡ ಸರ್ಕಾರ. ಮೊದಲು ಭ್ರಷ್ಟಾಚಾರಿಗಳನ್ನು ಸಂಪುಟದಿಂದ ವಜಾ ಮಾಡಬೇಕು ಎಂದು ಒತ್ತಾಯಿಸಿದ ಸಿ.ಟಿ. ರವಿ ಅವರು, ಭ್ರಷ್ಟಾಚಾರ ಮುಖ್ಯಮಂತ್ರಿಗಳ ಅರಿವಿಲ್ಲದೆ ನಡೆಯುತ್ತಿದೆ ಎಂದರೆ ಮುಖ್ಯಮಂತ್ರಿಯಾಗಿ ಮುಂದುವರೆಯಲು ಸಿದ್ಧರಾಮಯ್ಯ ಅನ್‌ಫಿಟ್ ಎಂದು ಹರಿಹಾಯ್ದರು.

ಶಾಸಕರನ್ನು ಕರೆದು ಮಾತನಾಡುತ್ತೇನೆ ಎಂದು ಮುಖ್ಯಮಂತ್ರಿಗಳು ಹೇಳುತ್ತಿದ್ದಾರೆ. ಶಾಸಕರನ್ನು ಕರೆದು ಮಾತನಾಡುವುದಲ್ಲ ಭ್ರಷ್ಟಚಾಚಾರಿಗಳ ವಿರುದ್ಧ ಕ್ರಮ ಆಗಬೇಕು ಎಂದು ಸಿಟಿ ರವಿ ಒತ್ತಾಯಿಸಿದರು.

ನಾವು ಈ ಸರ್ಕಾರದ ವಿರುದ್ಧ ಶಕ್ತಿ ಮೀರಿ ಹೋರಾಟ ನಡೆಸುತ್ತಿದ್ದೇವೆ. ಈ ಸರ್ಕಾರದಲ್ಲಿ ಎಲ್ಲರಿಗೂ ಬಂಡತನ, ಎಷ್ಟು ಹೇಳಿದರೂ ಕೇಳುತ್ತಿಲ್ಲ. ನಾವು ಮಾತಿನಲ್ಲೇ ಕಾಂಗ್ರೆಸ್‌ಗೆ ಹೊಡೆಯುತ್ತಿದ್ದೇವೆ. ಆದರೆ ಜನರು ಕಾಲಲ್ಲಿರುವುದನ್ನು ಬಿಚ್ಚಿ ಹೊಡೆಯುವ ಕಾಲ ಬರುತ್ತದೆ. ಆ ಕಾಲ ಬಂದಾಗಲೇ ಬುದ್ದಿ ಬರುವುದು ಎಂದು ಹರಿಹಾಯ್ದರು.

ಸಾರ್ವಜನಿಕವಾಗಿ ಬೆತ್ತಲಾದ ಮೇಲೂ ಮರ್ಯಾದೆ ಇಲ್ಲದವರ ತರ ಓಡಾಡುತ್ತಿರುವವರಿಗೆ ಏನು ಹೇಳುವುದು. ಸರ್ಕಾರದ ವಿರುದ್ಧ ಹೋರಾಟ ಮುಂದುವರೆಸುತ್ತೇವೆ ಎಂದು ಹೇಳಿದರು.

# ಶಿಕ್ಷಣ ಸರ್ಕಾರ ಕೊಡುವ ಭಿಕ್ಷೆಯಲ್ಲ, ಇದು ನಮ್ಮ ಹಕ್ಕು

**ದಾವಣಗೆರೆ:** ಶಿಕ್ಷಣವು ಸರ್ಕಾರ ಕೊಡುವ ಭಿಕ್ಷೆಯಲ್ಲ. ಇದು ನಮ್ಮ ಹಕ್ಕು. ಯಾವುದೇ ಕಾರಣಕ್ಕೂ ಸರ್ಕಾರಿ ಶಾಲೆಯನ್ನು ಮುಚ್ಚಲು ಬಿಡುವುದಿಲ್ಲ. ಇದಕ್ಕಾಗಿ ಉಗ್ರ ಹೋರಾಟಗಳನ್ನು ಮಾಡೋಣ ಎಂದು ಎಐಡಿಎಸ್‌ಓ ಜಿಲ್ಲಾಧ್ಯಕ್ಷೆ ಪೂಜಾ ನಂದಿಹಳ್ಳಿ ಕರೆ ನೀಡಿದರು.

ತಾಲ್ಲೂಕಿನ ದ್ಯಾಮೇನಹಳ್ಳಿ ಗ್ರಾಮದ ಸರ್ಕಾರಿ ಶಾಲೆಯ ಮುಂಭಾಗ ಎಐಡಿಎಸ್‌ಓ ವತಿಯಿಂದ ಶಾಲೆಯ ವಿಲೀನ ಪ್ರಕ್ರಿಯೆ ಖಂಡಿಸಿ ಹಮ್ಮಿಕೊಂಡಿದ್ದ ಪ್ರತಿಭಟನೆ ಸಂದರ್ಭದಲ್ಲಿ ಅವರು ಮಾತನಾಡಿದರು.

ದಾಖಲಾತಿ ಕಡಿಮೆ ಇದೆ ಎಂಬ ನೆಪವನ್ನು ಇಟ್ಟುಕೊಂಡು ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯನ್ನು ವಿಲೀನಗೊಳಿಸಲು ಹೊರಟಿರುವ ಕ್ರಮ ಖಂಡನೀಯ ಎಂದರು.

ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿರುವ ಈ ಶಾಲೆಗೆ ಹೊಸ ಕಟ್ಟಡವನ್ನು ನಿರ್ಮಿಸಲು ಕೂಡಲೇ ಅನುದಾನ ಬಿಡುಗಡೆ ಮಾಡಬೇಕು. ಶಾಲೆಯ ಆವರಣದಲ್ಲಿ ನಾಲ್ಕು ಕಟ್ಟಡಗಳಿದ್ದು, ಒಂದು ಕಟ್ಟಡ ಸಂಪೂರ್ಣ ಪಾಳು ಬಿದ್ದಿದೆ. ಅದರ ಪಕ್ಕದ ಇನ್ನೊಂದು ಕಟ್ಟಡ ಮಳೆ ಬಂದರೆ ಸೋರುತ್ತದೆ. ಮುಖ್ಯ ಕಟ್ಟಡ ಸೋರುವ ಕಾರಣ ಇತ್ತೀಚಿಗಷ್ಟೇ ಆರ್ ಸಿ ಸಿ ಮೇಲೆ ಶೀಟನ್ನು ಹಾಕಿಸಲಾಗಿದೆ. ಪಾಳು ಬಿದ್ದ ಕಟ್ಟಡವನ್ನು ಕೆಡವಿಸಿ, ಕಳೆಯಿಂದ ಕೂಡಿದ ಆಟದ ಮೈದಾನವನ್ನು ಸ್ವಚ್ಛಗೊಳಿಸಬೇಕು ಎಂದು ಆಗ್ರಹಿಸಿದರು.

ಬಹುತೇಕ ಬಡ ವಿದ್ಯಾರ್ಥಿಗಳು ಓದುವ




ಸರ್ಕಾರಿ ಶಾಲೆಗಳನ್ನು ಬಲಗೊಳಿಸಬೇಕು.

ಜನನಾಯಕರಿಗೆ ಸರ್ಕಾರಿ ಶಾಲೆ ಅಭಿವೃದ್ಧಿಪಡಿಸುವ ಜವಾಬ್ದಾರಿ ಇದೆಯೆ? ಎಂಬ ಪ್ರಶ್ನೆ ಜನಗಳಲ್ಲಿ ಮೂಡುತ್ತಿದೆ ಎಂದು ಹೇಳಿದರು.

ಉನ್ನತ ಭವಿಷ್ಯ ರೂಪಿಸುವ ಕನಸು ಹೊತ್ತ ದೊಡ್ಡ ಸಂಖ್ಯೆಯ ಬಡವರು, ರೈತರು, ಕೂಲಿಕಾರರು ಕೂಡ ಸಾಲ ಮಾಡಿ ಖಾಸಗಿ ಶಾಲೆಗೆ ಸೇರಿಸುವ ಪರಿಸ್ಥಿತಿ ಎದುರಾಗಿದೆ. ಜನಗಳ ತೆರಿಗೆ ಮೇಲೆ ನಡೆಯುತ್ತಿರುವ ಸರ್ಕಾರವು ಶಿಕ್ಷಣಕ್ಕೆ ರಾಜ್ಯದಲ್ಲಿ ಶೇ.30 ರಷ್ಟು ಅನುದಾನ ಮೀಸಲಿಡಬೇಕಿತ್ತು. ಶಿಕ್ಷಣ ಕಟ್ಟ ಕಡೆಯ ಆದ್ಯತೆಯಾಗಿರುವುದು ದುರಂತದ ವಿಚಾರ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಹೋದರ ಸಂಘಟನೆಯಾದ ಎಐಕೆಕೆಎಂಎಸ್ ಜಿಲ್ಲಾಧ್ಯಕ್ಷ ಮಧು ತೊಗಲೇರಿ, ಎಐಡಿಎಸ್‌ಓ ಸಂಘಟಕರಾದ ಗಂಗಾಧರ, ಶ್ರೀನಿವಾಸ, ದ್ಯಾಮೇನಹಳ್ಳಿಯ ರೈತ ಮುಖಂಡರು, ಪೋಷಕರು ಭಾಗವಹಿಸಿದ್ದರು.

# ನೀರಿನ ಎಟಿಎಂನಂತಿರುವ ಜಲಜೀವನ್ ಮಿಷನ್ ಸದುಪಯೋಗಕ್ಕೆ ಕರೆ

**ನ್ಯಾಮತಿ :** ಜಲಜೀವನ್ ಮಿಷನ್ ಗ್ರಾಮೀಣ ಭಾಗದ ಜನರಿಗೆ ನೀರಿನ ಎಟಿಎಂ ಇದ್ದಂತೆ, ಇದರ ಸದುಪಯೋಗ ಪಡೆದುಕೊಳ್ಳುವಂತೆ ಶಾಸಕ ಡಿ.ಜಿ.ಶಾಂತನಗೌಡ ಕರೆ ನೀಡಿ–ದರು.

ತಾಲ್ಲೂಕಿನ ಚಟ್ನಹಳ್ಳಿ ಗ್ರಾಮದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಿ.ಪಂ., ತಾ.ಪಂ. ನ್ಯಾಮತಿ ಮತ್ತು ಗ್ರಾಪಂ ಚಟ್ನಹಳ್ಳಿ ಇವರ ಸಹಯೋಗದಲ್ಲಿ ಸುಸ್ಥಿರ ಕುಡಿಯುವ ನೀರಿನ ಯೋಜನೆಯಡಿ ಚಟ್ನಹಳ್ಳಿ ಗ್ರಾಪಂನಲ್ಲಿ ಜೆಜೆಎಂ 24ಥ7 ನೀರು ಸರಬರಾಜು ಘೋಷಣಾ ಅನುಷ್ಠಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕೆಲವು ಹಳ್ಳಿಗಳಲ್ಲಿ ಈ ಯೋಜನೆಯನ್ನು ವಿರೋಧ ಮಾಡಿದ್ದು, ಆ ಹಳ್ಳಿಗಳ ಸಾರ್ವಜನಿಕರೂ ಇದರ ಮಹತ್ವ ಅರಿತು ಅಳವಡಿಕೆಗೆ ಮುಂದಾದರೆ ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಜಿ.ಪಂ ನೂತನ ಸಿಇಒ ಗಿಟ್ಟೆ ಮಾಧವ ವಿಠ್ಠಲರಾವ್ ಮಾತನಾಡಿ, ಮುಂಬರುವ ಆಗಸ್ಟ್ 15 ರೊಳಗೆ ಜಿಲ್ಲೆಯಲ್ಲಿ 100 ಗ್ರಾಮಗಳಲ್ಲಿ 24x7 ಜೆಜೆಎಂ ಅಳವಡಿಕೆ ಮಾಡುವ ಗುರಿ ಹೊಂದಲಾಗಿದೆ ಎಂದು ಮಾಹಿತಿ ನೀಡಿದರು.

ನ್ಯಾಮತಿ ತಾ.ಪಂ. ಇಒ ಎಚ್.ವಿ.ರಾಘವೇಂದ್ರ ಮಾತನಾಡಿ, 24ಥ7 ನೀರು ಕೊಡುವುದರಿಂದ ಜನರು ನೀರು ಶೇಖರಣೆ ಮಾಡುವುದು ತಪ್ಪುತ್ತದೆ, ಕೂಲಿ ಕಾರ್ಮಿಕರು ನೀರಿಗಾಗಿ ಕಾಯದೇ ತಮ್ಮ ದೈನಂದಿನ ಕೆಲಸಗಳಿಗೆ ಹೋಗಬಹುದಾಗಿದೆ. ಸೊಳ್ಳೆಗಳು ಉತ್ಪತ್ತಿಯಾಗುವುದು ಕಡಿಮೆಯಾಗಿ ಜನತೆಯು ಆರೋಗ್ಯದಿಂದಿರಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಶುದ್ಧ ಕುಡಿಯುವ ನೀರಿನ ಲಭ್ಯತೆಯಿಂದ ಜನರ ಆರೋಗ್ಯ ಸುಧಾರಣೆಗೆ ಸಾಧ್ಯವಾಗುತ್ತದೆ ಎಂದರು. ಆಗಸ್ಟ್ 15ರೊಳಗೆ ಅವಳಿ ತಾಲ್ಲೂಕುಗಳಿಂದ 25 ಹಳ್ಳಿಗಳಲ್ಲಿ 24ಥ7 ನೀರಿನ ವ್ಯವಸ್ಥೆಗೆ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಸೋಮ್ಲಾನಾಯ್ಕ್ ಮಾತನಾಡಿ, ಹೊನ್ನಾಳಿ–ನ್ಯಾಮತಿ ಅವಳಿ ತಾಲ್ಲೂಕುಗಳು ರಾಜ್ಯದಲ್ಲಿಯೇ ಈಗಾಗಲೇ ಈ ಯೋಜನೆಯಿಂದ ಮುಂಚೂಣಿ ಸ್ಥಾನದಲ್ಲಿದ್ದು, ಶೀಘ್ರದಲ್ಲಿಯೇ ರಾಷ್ಟ್ರಮಟ್ಟದಲ್ಲೂ ಖ್ಯಾತಿ ಗಳಿಸುವ ನಿರೀಕ್ಷೆಯಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಹೊನ್ನಾಳಿ ತಾಲ್ಲೂಕಿನ ಹನಗವಾಡಿ ಗ್ರಾಮದ 565 ಮನೆಗಳಿಗೆ 24ಥ7 ನೀರು ಒದಗಿಸಿದ್ದು, ಇದನ್ನು ವೀಕ್ಷಿಸಲು ವಿಶ್ವಬ್ಯಾಂಕ್‌ನವರು ಸ್ಥಳಕ್ಕಾಗಮಿಸಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದರು.

ಆಗಸ್ಟ್ 15ರೊಳಗೆ ಅವಳಿ ತಾಲ್ಲೂಕಗಳಿಂದ 25 ಹಳ್ಳಿಗಳಲ್ಲಿ 24ಥ7 ನೀರು ಕೊಡುವ ವ್ಯವಸ್ಥೆ ಮಾಡಲಾಗುವುದು, ಗ್ರಾಪಂಗೆ ಹಸ್ತಾಂತರವಾದ ಮೇಲೆ ಸರಿಯಾದ ನಿರ್ವಹಣೆಯಿಂದ ಮಾತ್ರವೇ ಈ ಯೋಜನೆಯು ಯಶಸ್ವಿಯಾಗುತ್ತದೆ. ಆದ್ದರಿಂದ ಇದರ ಸದ್ಬಳಕೆ ಮಾಡುವಂತೆ ಅವರು ವಿನಂತಿಸಿದರು.

ಚಟ್ನಹಳ್ಳಿ ಗ್ರಾಪಂ ಅಧ್ಯಕ್ಷೆ ಗೀತಾ, ಉಪಾಧ್ಯಕ್ಷ ನವೀನ್, ಗ್ರಾಪಂ ಮಾಜಿ ಅಧ್ಯಕ್ಷ ಮಲ್ಲೇಶಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಜಿಲ್ಲಾ ಎಇಇ ಷಣ್ಮುಖಪ್ಪ, ನರೇಗಾ ಎಡಿಎ ಸಂಗಮೇಶ್, ಪಿಡಿಓಗಳಾದ ವಿಜಯ್‌ಕುಮಾರ್, ಅರುಣ್, ಜಯಪ್ಪ, ವಿಶ್ವಬ್ಯಾಂಕ್‌ನ ನಂದನ್‌ಕುಮಾರ್, ಜಿಲ್ಲಾ ಯೋಜನಾ ವ್ಯವಸ್ಥಾಪಕ ಜಗದೀಶ್, ಅರಕೆರೆ ಮಧುಗೌಡ ಮತ್ತಿತರರು ಉಪಸ್ಥಿತರಿದ್ದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**